# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್. ಬಿ. ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 291 ₹4, SATURDAY, 13 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26



# ಬಡವರಿಗೆ ಆರ್ಥಿಕ ಶಕ್ತಿ ತುಂಬಲು 5 ಗ್ಯಾರಂಟಿ ಜಾರಿ

## 5ನೇ ಗ್ಯಾರಂಟಿ ಯುವನಿಧಿ ಯೋಜನೆಗೆ ಸಿಎಂ ಸಿದ್ದರಾಮಯ್ಯ ಚಾಲನೆ

ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಪಂಚಖಾತ್ರಿ ಯೋಜನೆಗಳ ಪೈಕಿ ಕೊನೆಯದಾದ ಯುವನಿಧಿಗೆ ಇಂದಿನಿಂದ ಚಾಲನೆ ನೀಡಲಾಗಿದೆ.

ಸ್ವಾಮಿ ವಿವೇಕಾನಂದರ 161 ನೇ ಜಯಂತಿ ಪ್ರಯುಕ್ತ ಶಿವಮೊಗ್ಗದ ಫ್ರೀಡಂ ಪಾರ್ಕ್‌ನಲ್ಲಿ ನಡೆಯುತ್ತಿರುವ ಬೃಹತ್ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಸಿಎಂ ಸಿದ್ದರಾಮಯ್ಯನವರು, ಚುನಾವಣೆಗಾಗಿ ಯುವನಿಧಿ ಯೋಜನೆಯನ್ನು ಜಾರಿಗೆ ತಂದಿಲ್ಲ. ನಿರುದ್ಯೋಗಿ ಯುವಕರಿಗೆ ನೆರವಾಗಬೇಕೆಂಬ ಉದ್ದೇಶದಿಂದಷ್ಟೇ ಈ ಯೋಜನೆ ಜಾರಿಗೊಳಿಸಲಾಗಿದೆ. ದೇಶದಲ್ಲಿ ದಿನಬಳಕೆ, ಪೆಟ್ರೋಲ್, ಡಿಸೇಲ್ ದರ ಏರಿಕೆಯಾಗಿದೆ. ಜನಸಮಾನ್ಯರಿಗೆ ಖರೀದಿಸುವ ಸಾಮರ್ಥ್ಯವಿಲ್ಲ ಎಂದು ಹೇಳಿದರು.



1.18 ಕೋಟಿ ಮಹಿಳಾ ಯಜಮಾನಿಗೆ ತಿಂಗಳಿಗೆ ರೂ.2,000 ನೀಡುತ್ತಿರುವುದು ಸತ್ಯವಲ್ಲವೇ? ಇದುವರೆಗೆ ಯಾವುದೇ ಜಾತಿ, ಧರ್ಮ, ಭಾಷೆಯ ಬೇಧವಿಲ್ಲದೇ ಮಹಿಳೆಯರು ಶಕ್ತಿ ಯೋಜನೆಯಡಿ 130 ಕೋಟಿ ಉಚಿತ ಟಿಕೇಟ್ ಪಡೆದು ಪ್ರಯಾಣಿಸಿರುವುದು ಸುಳ್ಳಾಗಲು ಸಾಧ್ಯವೇ? 200 ಯೂನಿಟ್ ವರೆಗೆ ಉಚಿತ ವಿದ್ಯುತ್ 1.51 ಕೋಟಿ ಜನರಿಗೆ ನೀಡಲಾಗುತ್ತಿದೆ. ಅನ್ನಭಾಗ್ಯ ಯೋಜನೆಯಡಿ 170 ರೂ. ಫಲಾನುಭವಿಗಳಿಗೆ ತಲುಪುತ್ತಿದೆ. ಈ ಎಲ್ಲ ಸತ್ಯಗಳನ್ನು ಯಾರು ಬೇಕಾದರೂ ಪರಿಶೀಲನೆ ನಡೆಸಲಿ ಎಂದು ಸಿಎಂ ಸವಾಲು ಹಾಕಿದರು.

ಗ್ಯಾರಂಟಿ ಯೋಜನೆಗಳಿಂದ ಒಂದು ಕುಟುಂಬಕ್ಕೆ ಮಾಸಿಕ 4 ರಿಂದ 5 ಸಾವಿರ ರೂ.ಗಳು ಸೇರುತ್ತಿದ್ದು, ವರ್ಷಕ್ಕೆ 48 ರಿಂದ 50 ಸಾವಿ ರೂ. ನೀಡಲಾಗುತ್ತಿದೆ. ಇದು ಬಡಜನರಿಗೆ ಸೌಲಭ್ಯ ನೀಡುತ್ತದೆ. ಬೆಲೆಯೇರಿಕೆ, ನಿರುದ್ಯೋಗ ಹೆಚ್ಚಾಗಿದ್ದು, ಬಡವರಿಗೆ ಕೊಂಡುಕೊಳ್ಳುವ ಶಕ್ತಿಯನ್ನು ಈ ಯೋಜನೆಗಳು ಹೆಚ್ಚಿಸುತ್ತಿವೆ ಎಂದರು.


ಯುವನಿಧಿ ಯೋಜನೆಯ ಬಗ್ಗೆ ಮಾಹಿತಿ: ಪದವಿ ಅಥವಾ ಡಿಪ್ಲೋಮಾ ಪಡೆದ ಬಳಿಕ 6 ತಿಂಗಳವರೆಗೂ ಉದ್ಯೋಗ ದೊರೆಯದೇ ಇದ್ದವರಿಗೆ 2 ವರ್ಷಗಳ ಕಾಲ ನಿರುದ್ಯೋಗ ಭತ್ಯೆ ನೀಡುವುದು ಯುವನಿಧಿ ಯೋಜನೆಯ ಮುಖ್ಯ ಉದ್ದೇಶ. ಪದವಿಧರರಿಗೆ 3,000, ಡಿಪ್ಲೋಮಾದಾರರಿಗೆ 1,500 ರೂ. ಭತ್ಯೆ ನೀಡುವುದಾಗಿ ಚುನಾವಣೆಗೂ ಮೊದಲೇ ಘೋಷಣೆ ಮಾಡಲಾಗಿತ್ತು. ಅದರ ಪ್ರಕಾರ ಸರ್ಕಾರ ರಚನೆಯಾದ 7 ತಿಂಗಳು ಕಳೆದ ಬಳಿಕ ಮತ್ತು ಪದವಿ, ಡಿಪ್ಲೋಮಾ ಪರೀಕ್ಷೆಗಳು ಮುಗಿದ 6 ತಿಂಗಳ ನಂತರ ಯೋಜನೆ ಜಾರಿಗೆ ಚಾಲನೆ ನೀಡಲಾಗಿದೆ. ಕಳೆದ ಡಿಸೆಂಬರ್ 26 ರಂದು ಯುವನಿಧಿ ಯೋಜನೆ ನೋಂದಣಿಗೆ ಚಾಲನೆ ನೀಡಲಾಯಿತು. ರಾಜ್ಯದಲ್ಲಿ 2022–23 ನೇ ಸಾಲಿನಲ್ಲಿ 5.29 ಲಕ್ಷ ಮಂದಿ ಪದವಿ ಹಾಗೂ ಡಿಪ್ಲೋಮಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ್ದಾರೆ.

ಅವರಲ್ಲಿ ನಿರುದ್ಯೋಗಿಗಳಾಗಿರುವವರು ಯುವನಿಧಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿದ್ದರು.ನಿನ್ನೆಯವರೆಗೂ ಸುಮಾರು 66 ಸಾವಿರ ಮಂದಿ ಅರ್ಜಿ ಸಲ್ಲಿಸಿದ್ದಾರೆ ಎಂದು ಹೇಳಲಾಗಿದೆ. ಈ ಮೂಲಕ ಒಟ್ಟು ಫಲಾನುಭವಿಗಳ ಪೈಕಿ ಶೇ.12 ರಷ್ಟು ಮಾತ್ರ ಅರ್ಜಿಗಳು ಸಲ್ಲಿಕೆಯಾಗಿವೆ. ಇನ್ನುಳಿದಂತೆ ಪದವೀಧರರಲ್ಲಿ ಯುವನಿಧಿ ಯೋಜನೆ ಬಗ್ಗೆ ನಿರಾಸಕ್ತಿ ಅಥವಾ ಉದ್ಯೋಗ ದೊರೆತಿರುವ ಸಾಧ್ಯತೆಗಳಿವೆ.



## ಧಾರವಾಡ ಜಿಲ್ಲೆ ಯುವನಿಧಿ 2091 ಅರ್ಜಿ ಸ್ವೀಕಾರ

ಧಾರವಾಡ: ಯುವನಿಧಿ ಯೋಜನೆಯಡಿ ಧಾರವಾಡ ಜಿಲ್ಲೆಯಲ್ಲಿ ಪ್ರಸ್ತುತ (ಜ.12) ದಿನದವರೆಗೆ 2,091 ಅಭ್ಯರ್ಥಿಗಳು ನೋಂದಾಯಿ ಕೊಂಡಿದ್ದು, ಅರ್ಜಿ ಸ್ವೀಕೃತವಾಗಿವೆ ಎಂದು ಜಿಲ್ಲಾಧಿಕಾರಿಗಳ ಗುರುದತ್ತ ಹೆಗಡೆ ಅವರು ತಿಳಿಸಿದರು.



## ಖಡಕ್ ವಾರ್ನಿಂಗ್ ಕೊಟ್ಟ ಖರ್ಗೆ

ಬೆಂಗಳೂರು: ಉಪ ಮುಖ್ಯಮಂತ್ರಿ ಹುದ್ದೆ ಸೃಷ್ಟಿ ವಿಚಾರದಲ್ಲಿ ಯಾವೊಬ್ಬ ಸಚಿವರೂ ಇನ್ನು ಮುಂದೆ ಬಹಿರಂಗ ಹೇಳಿಕೆ ನೀಡಬಾರದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸೂಚನೆ ನೀಡಿದ್ದಾರೆ.

ಲೋಕಸಭಾ ಚುನಾವಣೆ ಸಿದ್ಧತೆ ಸಂಬಂಧ ಹೊಸದಿಲ್ಲಿಯ ಎಐಸಿಸಿ ಕಚೇರಿಯಲ್ಲಿ ನಡೆದ ಕರ್ನಾಟಕ ಹಾಗೂ ತೆಲಂಗಾಣದ ಕಾಂಗ್ರೆಸ್ ಸರ್ಕಾರ ಸಚಿವರ ಸಭೆಯಲ್ಲಿ ಖರ್ಗೆ ಅವರು ಈ ಎಚ್ಚರಿಕೆ ನೀಡಿದ್ದಾರೆ.

ಕರ್ನಾಟಕದಲ್ಲಿ 4–5 ತಿಂಗಳುಗಳಿಂದ ಉಪ ಮುಖ್ಯ ಮಂತ್ರಿ ಹುದ್ದೆ ಸೃಷ್ಟಿ ವಿಚಾರದಲ್ಲಿ ಕೆಲವು ಸಚಿವರು ಅನಗತ್ಯವಾಗಿ ಹೇಳಿಕೆ ನೀಡುವ ಮೂಲಕ ಗೊಂದಲ ಸೃಷ್ಟಿಸುತ್ತಿದ್ದಾರೆ. ಇದರಿಂದ ಪಕ್ಷ ಹಾಗೂ ಸರಕಾರದ ವರ್ಚಸ್ಸಿಗೆ ಧಕ್ಕೆಯಾಗುತ್ತಿದೆ. ಈ ರೀತಿಯ ಸೂಕ್ಷ್ಮ ವಿಚಾರಗಳನ್ನು ಎಲ್ಲಿ ಚರ್ಚಿಸಬೇಕು, ಯಾರೊಂದಿಗೆ ಚರ್ಚಿಸಬೇಕು ಎಂಬುದನ್ನು ಅರ್ಥ ಮಾಡಿಕೊಳ್ಳುವುದು ಸೂಕ್ತ. ಈ ವಿಷಯದಲ್ಲಿ ಹೈಕಮಾಂಡ್ ಈಗಾಗಲೇ ತನ್ನ ನಿಲುವು ಏನೆಂಬುದನ್ನು ಸ್ಪಷ್ಟಪಡಿಸಿದ ಬಳಿಕವೂ ಒಂದಿಬ್ಬರು ಮತ್ತೆ ಅದೇ ವಿಷಯಗಳನ್ನು ಕೆಣಕುವ ಮೂಲಕ ಗೊಂದಲದ ವಾತಾವರಣ ಮುಂದುವರಿಸಲು ಪ್ರಯತ್ನಿಸಿದ್ದಾರೆ.

ಪ್ರತಿಯೊಬ್ಬ ಸಚಿವರಿಗೂ ಅತ್ಯಂತ ಮಹತ್ವದ ಜವಾಬ್ದಾರಿಗಳಿವೆ, ಕೊಟ್ಟ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವ ಬದಲಿಗೆ ಅನಗತ್ಯ ವಾಗಿ ಅದರಲ್ಲೂ ಡಿಸಿಎಂ ಹುದ್ದೆ ವಿಚಾರದಲ್ಲಿ ಬಹಿರಂಗ ಹೇಳಿಕೆ ನೀಡಿ ಪಕ್ಷದೊಳಗೆ ಗೊಂದಲದ ವಾತಾ ವರಣ ನಿರ್ಮಿಸುವುದು ಸರಿಯಲ್ಲ, ಈ ರೀತಿಯ ಹೇಳಿಕೆಗಳಿಂದ ಲಾಭ ಏನು ಎಂಬುದನ್ನು ಅರಿತುಕೊಂಡು ಹೋಗುವುದು ಒಳಿತು ಎಂದು ಕಿವಿ ಮಾತು ಹೇಳಿದರೆಂದು ಮೂಲಗಳು ಖಚಿತಪಡಿಸಿವೆ.

## ಗಡಿಭಾಗದ ಜಿಲ್ಲೆಗೆ ಚಡ್ಡಿ ಗ್ಯಾಂಗ್ ಎಂಟ್ರಿ




ವಿಜಯಪುರ: ಕರ್ನಾಟಕ ಮತ್ತು ಮಹಾರಾಷ್ಟ್ರ ಗಡಿಭಾಗದ ಜಿಲ್ಲೆ ವಿಜಯಪುರಕ್ಕೆ ಎಂಟ್ರಿ ಕೊಟ್ಟಿರುವ ಖತರ್ನಾಕ್ ಚಡ್ಡಿ ಗ್ಯಾಂಗ್ ಸಾರ್ವಜನಿಕರನ್ನು ಬೆಚ್ಚಿ ಬೀಳಿಸಿದೆ.

ಕಳೆದ ಹಲವು ದಿನಗಳಿಂದ ವಿಜಯಪುರ ನಗರದಲ್ಲಿ ಬೀಡು ಬಿಟ್ಟಿರುವ ಚಡ್ಡಿ ಗ್ಯಾಂಗ್ ಮನೆಗಳಿಗೆ ನುಗ್ಗಿ ಕಳ್ಳತನ ಮಾಡುತ್ತಿದೆ. ಚಡ್ಡಿ ಧರಿಸಿ, ಮಾಸ್ಕ್ ಮತ್ತು ಮಫ್ಲರ್ ಹಾಕಿ ಗುಂಪುಗೂಡಿ ಕಳ್ಳತನಕ್ಕಿಳಿಯುವ ಈ ಗ್ಯಾಂಗ್ನ ಕೃತ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ. ಈ ದೃಶ್ಯ ಕಂಡು ಸಾರ್ವಜನಿಕರು ಬೆಚ್ಚಿ ಬಿದ್ದಿದ್ದಾರೆ.

**ಪೊಲೀಸ್ ಇಲಾಖೆ ಅಲರ್ಟ್:** ಬಿಗ್ ಅಲರ್ಟ್ ಆಗಿರುವ ಪೊಲೀಸ್ ಇಲಾಖೆ ಸಾರ್ವಜನಿಕರನ್ನು ಎಚ್ಚರಗೊಳಿಸುವುದರ ಜೊತೆಗೆ ಚಡ್ಡಿ ಗ್ಯಾಂಗ್ ಪತ್ತೆಗೆ ವ್ಯಾಪಕ ಜಾಲ ಬೀಸಿದೆ. ಇದಿಷ್ಟೇ ಅಲ್ಲದೆ, ಆಟೋ, ವಾಟ್ಸ್‌ಆ್ಯಪ್ ಸಂದೇಶದ ಮೂಲಕ ಸಾರ್ವಜನಿಕರನ್ನು ಜಾಗೃತಗೊಳಿಸಲಾಗುತ್ತಿದೆ. ಇಂಥ ಚಡ್ಡಿ ಗ್ಯಾಂಗ್ ಕಂಡುಬಂದರೆ ಮೊ. 9480804200 ಅಥವಾ 112ಕ್ಕೆ ಕರೆ ಮಾಡಲು ಪೊಲೀಸರು ಮನವಿ ಮಾಡಿದ್ದಾರೆ.

## ಹೈಸ್ಕೂಲ್ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ; ಮುಖ್ಯಶಿಕ್ಷಕ ಅಮಾನತು



ಯಾದಗಿರಿ{ ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಅನಪುರ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕನನ್ನು ಜಿಲ್ಲಾ ಪಂಚಾಯಿತಿ ಸಿಇಒ ಗರಿಮಾ ಪಂವಾರ್ ಅಮಾನತು ಮಾಡಿ ಆದೇಶಿಸಿದ್ದಾರೆ.

ಮುಖ್ಯಶಿಕ್ಷಕ ಹಣಮೇಗೌಡ ಎಂಬುವರು ಸಸ್ಪೆಂಡ್ ಆಗಿದ್ದಾರೆ. ಮುಖ್ಯಶಿಕ್ಷಕ ಶಾಲಾ ವಿದ್ಯಾರ್ಥಿಗಳೊಂದಿಗೆ ಅನುಚಿತವಾಗಿ ವರ್ತಿಸಿ ಲೈಂಗಿಕ ಕಿರುಕುಳ ನೀಡುತ್ತಿದ್ದ ಎಂಬ ಆರೋಪವಿದೆ.

ಹೆಡ್ ಮಾಸ್ಟರ್ ಹನುಮೇಗೌಡ ಅವರು ಶಾಲೆಯ 10ನೇ ತರಗತಿ ವಿದ್ಯಾರ್ಥಿನಿಯರೊಂದಿಗೆ ಅನುಚಿತವಾಗಿ ವರ್ತಿಸುತ್ತಿದ್ದಾರೆ ಎಂದು ಪೋಷಕರು ಮೇಲಾಧಿಕಾರಿಗಳಿಗೆ ದೂರು ನೀಡಿದ್ದರು.

ಈ ಹಿನ್ನೆಲೆಯಲ್ಲಿ ತನಿಖೆ ನಡೆಸಿ, ಯಾದಗಿರಿ ಜಿಲ್ಲಾ ಪಂಚಾಯ್ತಿ ಸಿಇಓಗೆ ವರದಿ ನೀಡಲಾಗಿತ್ತು. ವರದಿಯಲ್ಲಿ ಮುಖ್ಯ ಶಿಕ್ಷಕರ ಅನುಚಿತ ವರ್ತನೆಯ ಬಗ್ಗೆ ಮಹತ್ವದ ಮಾಹಿತಿ ದೊರಕಿತ್ತು.

ಈ ವರದಿಯನ್ನು ಆಧರಿಸಿ ಯಾದಗಿರಿ ಜಿಲ್ಲಾ ಪಂಚಾಯ್ತಿ ಸಿಇಓ ಅವರು ಅನಪುರ ಸರ್ಕಾರಿ ಪ್ರೌಢ ಶಾಲೆಯ ಮುಖ್ಯಶಿಕ್ಷಕ ಹನುಮೇಗೌಡ ಅವರನ್ನು ಅಮಾನತುಗೊಳಿಸಿ ಆದೇಶಿಸಿದ್ದಾರೆ.

## ಕನ್ನಡ ನಾಮಫಲಕ ಅಳವಡಿಕೆ ಕಾರ್ಯಾಚರಣೆ ಆರಂಭಿಸಿದ ಬೆಳಗಾವಿ ಪಾಲಿಕೆ



ಬೆಳಗಾವಿ: ಸರ್ಕಾರದ ಸುತ್ತೋಲೆ ಸಂಖ್ಯೆ: ಕ್ರಸಂವಾ/89ಕೆಒಎಲ್ ರ ಪ್ರಕಾರ ಕನ್ನಡ ಅನುಷ್ಠಾನ ಕುರಿತು ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯ ಅಂಗಡಿ/ ಮುಂಗಟುಗಳು/ವಾಣಿಜ್ಯ ಸಂಕೀರ್ಣಗಳ ಪ್ರತಿದಿನ ವೀಕ್ಷಣೆ ಮಾಡಿ ತಮ್ಮ ತಮ್ಮ ಅಂಗಡಿಗಳ ನಾಮಫಲಕದಲ್ಲಿ ಶೆ. 60 ರಷ್ಟು ಕನ್ನಡ ಕಡ್ಡಾಯವಾಗಿ ಬಳಸಲು ಈಗಾಗಲೇ ದಿನಾಂಕ. 31/12/2023 ರಂದು ಪತ್ರಿಕಾ ಪ್ರಕಟಣೆ ನೀಡಲಾಗಿದೆ.

ಅಂಗಡಿಗಳಿಗೆ ಶೇ.60 ರಷ್ಟು ಕನ್ನಡವನ್ನು ಬಳಸುವಂತೆ ನೋಟಿಸ್ ಗಳನ್ನು ನೀಡಲಾಗುತ್ತಿದೆ. ಇಲ್ಲಿಯವರೆಗೂ ಒಟ್ಟು 2050 ಅಂಗಡಿಗಳಿಗೆ ನೋಟಿಸ್ ಗಳನ್ನು ಜಾರಿ ಮಾಡಲಾಗಿರುತ್ತದೆ. ಪ್ರತಿದಿನ ಆರೋಗ್ಯ ಅಧಿಕಾರಿಗಳ ತಂಡವು ಬೆಳಗಾವಿ ನಗರದಲ್ಲಿ ಸಂಚರಿಸಿ ಕನ್ನಡ ಅನುಷ್ಠಾನ ಕುರಿತು ವೀಕ್ಷಣೆ ಮಾಡಿ, ಶೇ 60 ರಷ್ಟು ಕಡ್ಡಾಯವಾಗಿ ಕನ್ನಡ ಹಾಗೂ ಬೆಳಗಾವಿ ಎಂದು ನಾಮಫಲಕದಲ್ಲಿ ಬಳಸಲು ಸೂಚಿಸಿ ನೋಟಿಸ್ ಜಾರಿ ಮಾಡಿ ಎಚ್ಚರಿಕೆ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಸರ್ಕಾರದ ಆದೇಶ ಪಾಲಿಸಿದಿದ್ದರೆ ಟ್ರೇಡ್ ಲೈಸೆನ್ಸ್ ರದ್ದುಗೊಳಿಸಿ ಅಂಗಡಿಯನ್ನು ಬಂದ್/ಸೀಲ್ ಮಾಡಲಾಗುವುದೆಂದು ಸೂಚಿಸಲಾಗಿದೆ.



## ಅಧಿಕಾರಿಗಳಿಗೆ ಡಿಕೆಶಿ ಸೂಚನೆ

ಬೆಂಗಳೂರು: ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಬೆಂಗಳೂರು ದಕ್ಷಿಣ ಕ್ಷೇತ್ರದ ಜನರಿಗೆ 3–4 ತಿಂಗಳಲ್ಲಿ ಕಾವೇರಿ ನೀರನ್ನು ಪೂರೈಸಲಾಗುವುಜು ಎಂದು ಉಪ ಮುಖ್ಯಮಂತ್ರಿ ಡಿ.ಕೆಶಿವಕುಮಾರ್ ಅವರು ಗುರುವಾರ ಭರವಸೆ ನೀಡಿದರು.

ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಕಾರ್ಯಕ್ರಮದಲ್ಲಿ ಸಂಸದ ಡಿ.ಕೆ.ಸುರೇಶ್ ಹಾಗೂ ಶಾಸಕ ಎಂ.ಕೃಷ್ಣಪ್ಪ ಅವರು ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಕುಡಿಯುವ ನೀರಿಗೆ ತೀವ್ರ ಸಮಸ್ಯೆ ಇದ್ದು, ಪರಿಹಾರ ಒದಗಿಸಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ಡಿಕೆ.ಶಿವಕುಮಾರ್ ಅವರು, 110 ಹಳ್ಳಿಗಳಿಗೆ ಕಾವೇರಿ ನೀರು ಪೂರೈಸುವ ಯೋಜನೆ ಅಂತಿಮ ಹಂತದಲ್ಲಿದೆ. ಮುಂದಿನ 3–4 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳ್ಳಲಿದ್ದು, ತಕ್ಷಣವೇ ನೀರು ಪೂರೈಸಲಾಗುವುದು ಎಂದು ಭರವಸೆ ನೀಡಿದರು.

# ಸಂಗೊಳ್ಳಿ ಉತ್ಸವ; ನಂದಗಡದಲ್ಲಿ ವೀರಜ್ಯೋತಿ ಯಾತ್ರೆಗೆ ಚಾಲನೆ

## ಸಂಗೊಳ್ಳಿ ರಾಯಣ್ಣನ ದೇಶಪ್ರೇಮ ಯುವ ಸಮುದಾಯಕ್ಕೆ ಸ್ಫೂರ್ತಿ: ಶಾಸಕ ವಿಠ್ಠಲ ಹಲಗೇಕರ

ಬೆಳಗಾವಿ: ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ದೇಶದ ಪ್ರಮುಖ ಸ್ವಾತಂತ್ರ್ಯ ಹೋರಾಟಗಾರ. ಕಿತ್ತೂರು ಚನ್ನಮ್ಮಳ ಬಲಗೈ ಬಂಟನಾಗಿ ಬ್ರಿಟಿಷರ ಈಸ್ಟ್ ಇಂಡಿಯಾ ಕಂಪನಿಯ ವಿರುದ್ಧ ಸಿಡಿದೆದ್ದು, ದೇಶದ ಸ್ವಾತಂತ್ರಕ್ಕಾಗಿ ನೇಣುಗಂಬದವರೆಗೆ ನಿರಂತರ ಸೆಣಸಿದ ಮಹಾನ್ ಶೂರ ಸಂಗೊಳ್ಳಿ ರಾಯಣ್ಣ ಎಂದು ಖಾನಾಪೂರ ಶಾಸಕ ವಿಠ್ಠಲ ಹಲಗೇಕರ ಅವರು ತಿಳಿಸಿದರು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ನಂದಗಡದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಐಕ್ಯ ಸ್ಥಳದಲ್ಲಿ ಶುಕ್ರವಾರ (ಜ.12) ನಡೆದ ನಂದಗಡ ಉತ್ಸವ 2024ರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.





ಸಂಗೊಳ್ಳಿ ರಾಯಣ್ಣ ಸಂಗೊಳ್ಳಿಯಲ್ಲಿ ಜನ್ಮ ಪಡೆದರು ತಮ್ಮ ಆಶಯದಂತೆ ಅವರು ಐಕ್ಯರಾಗಿದ್ದು, ನಂದಗಡದಲ್ಲಿ. ರಾಯಣ್ಣ ಕೇವಲ 33 ವರ್ಷ ಬದುಕಿದರು. ಇಡೀ ಜಗತ್ತು ಅವರ ಹೆಸರು ಗುರುತಿಸುವಷ್ಟು ದೊಡ್ಡ ಹೆಸರು ಸಂಪಾದನೆ ಮಾಡಿದ್ದಾರೆ. ರಾಯಣ್ಣನ ದೇಶ ಪ್ರೇಮ, ನಿಸ್ವಾರ್ಥ ಸೇವೆ ಇಂದಿನ ಯುವ ಪೀಳಿಗೆಗೆ ಸ್ಫೂರ್ತಿ ಎಂದು ಹೇಳಿದರು.

ಸಂಗೊಳ್ಳಿ ರಾಯಣ್ಣನಂತಹ ಮಕ್ಕಳು ಪ್ರತಿ ಮನೆ ಮನೆಯಲ್ಲಿ ಜನಿಸಲಿ ಎಂಬುದು ಪ್ರತಿಯೊಬ್ಬರ ಆಸೆ.

ಅವರ ಜನ್ಮದಿನ ಆಗಸ್ಟ್ 15 ದೇಶಕ್ಕೆ ಸ್ವಾತಂತ್ರ್ಯ ದೊರೆತ ದಿನವಾದರೆ, ಹುತಾತ್ಮರಾದ ದಿನ ಜನವರಿ 26 ಭಾರತ ಗಣರಾಜ್ಯೋತ್ಸವ ದಿನವಾಗಿರುವುದು ವಿಶೇಷ.

ಸಂಗೊಳ್ಳಿ ಉತ್ಸವದಂತೆ ನಂದಗಡದಲ್ಲಿ ಕೂಡ ದೊಡ್ಡ ಮಟ್ಟದಲ್ಲಿ ಉತ್ಸವ ಮಾಡಬೇಕು ಎಂದು

ಅಭಿಮಾನಿಗಳ ಬೇಡಿಕೆಯಾಗಿತ್ತು. ಅದರಂತೆ ಸರ್ಕಾರ ಸಹ ಇದಕ್ಕೆ ಅನುಮತಿ ನೀಡಿ ಈ ವರ್ಷ ಜಿಲ್ಲಾಡಳಿತದಿಂದ ನಂದಗಡ ಉತ್ಸವ ಆಚರಣೆ ಮಾಡಲಾಗುತ್ತಿದೆ. ಬರುವ ವರ್ಷದಲ್ಲಿ ಇನ್ನೂ ದೊಡ್ಡ ಮಟ್ಟದಲ್ಲಿ ನಂದಗಡ ಉತ್ಸವ ನಡೆಯಲಿ ಎಂಬುದು ನನ್ನ ಆಶಯವಾಗಿದೆ ಎಂದು ಖಾನಾಪೂರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ವಿಠ್ಠಲ ಹಲಗೇಕರ ಅವರು ತಿಳಿಸಿದರು.

ಬೆಳಗಾವಿ ಉಪವಿಭಾಗಾಧಿಕಾರಿ ಶವ್ರಣ ನಾಯಕ, ಖಾನಾಪೂರ ತಹಶೀಲ್ದಾರ ಪ್ರಕಾಶ ಗಾಯಕವಾಡ, ನಂದಗಡ ಗ್ರಾಮ ಪಂಚಾಯತಿ ಅಧ್ಯಕ್ಷ ಯಲ್ಲಪ್ಪ ಶಿವಾಜಿಗರವ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು, ಗ್ರಾಮಸ್ಥರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೀರ ಜ್ಯೋತಿಗೆ ಯಾತ್ರೆಗೆ ಚಾಲನೆ: ಖಾನಾಪೂರ ಶಾಸಕ ವಿಠ್ಠಲ ಹಲಗೇಕರ ಅವರು ಕ್ರಾಂತಿ ಸಂಗೊಳ್ಳಿ ರಾಯಣ್ಣ ಉತ್ಸವದ ನಿಮಿತ್ಯ ಜಿಲ್ಲೆಯಾದ್ಯಂತ ಸಂಚರಿಸಲಿರುವ ವೀರ ಜ್ಯೋತಿ ಯಾತ್ರೆಗೆ ರಾಯಣ್ಣನ ಐಕ್ಯ ಸ್ಥಳದಲ್ಲಿ ಪೂಜೆ ಸಲ್ಲಿಸಿದರು. ಬಳಿಕ ಹಸಿರು ನಿಶಾನೆ ತೋರಿಸುವ ಮೂಲಕ ನಂದಗಡದ ರಾಯಣ್ಣ ವೃತ್ತದಿಂದ ಜ್ಯೋತಿಯನ್ನು ಬೀಳ್ಕೊಡಲಾಯಿತು.

## ಲೋಕಸಭೆ ಚುನಾವಣೆಯಲ್ಲಿ ಸೋತರೆ ಸಚಿವರ ತಲೆದಂಡ

ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯ ಸತತ ಮೂರನೇ ಬಾರಿ ಅಧಿಕಾರದ ಗದ್ದುಗೆ ಏರುವುದನ್ನು ಐಎನ್‌ಡಿಐಎ ಮೈತ್ರಿಕೂಟದ ಮೂಲಕ ತಡೆಯಲು ಮುಂದಾಗಿರುವ ಕಾಂಗ್ರೆಸ್, ದಕ್ಷಿಣ ಭಾರತದ ಮೇಲೆ ಹೆಚ್ಚು ಸ್ಥಾನಗಳನ್ನು ಗೆಲ್ಲಲು ಪ್ಲಾನ್ ಮಾಡಿಕೊಂಡಿದೆ. ಆದರೆ, ಚುನಾವಣೆಯಲ್ಲಿ ಪಕ್ಷಕ್ಕೆ ಸೋಲಾದರೆ ರಾಜ್ಯದ ಸಚಿವರನ್ನು ತಲೆದಂಡ ಮಾಡುವ ಎಚ್ಚರಿಕೆಯನ್ನು ಹೈಕಮಾಂಡ್ ನೀಡಿದ್ದಾಗಿ ಗೃಹಸಚಿವ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ಎರಡು ಮೂರು ದಿನಗಳಲ್ಲಿ ರಣದೀಪ್ ಸಿಂಗ್ ಸುರ್ಜೇವಾಲ ರಾಜ್ಯಕ್ಕೆ ಬರಬಹುದು.

ಅಭ್ಯರ್ಥಿಗಳ ಬಗ್ಗೆ ಅಥವಾ ಸಚಿವರ ಸ್ಪರ್ಧೆ ವಿಚಾರವಾಗಿ ಮಾತಾಡಿಲ್ಲ. ಜವಾಬ್ದಾರಿ ತೆಗೆದುಕೊಂಡು ಪ್ರಚಾರ ಮಾಡಿ ಅಂತ ಹೇಳಿದ್ದಾರೆ. ಸಚಿವರ ತಲೆದಂಡ ಅನ್ನೋದನ್ನೂ ಹೇಳಿದ್ದಾರೆ.

ಗೆಲ್ಲುವ ಕ್ಷೇತ್ರದಲ್ಲಿ ಸೋತರೆ ಸರಿಯಾಗಿ ಕೆಲಸ ಮಾಡಿಲ್ಲ ಅಂತ ತಿಳಿದುಕೊಳ್ಳಬೇಕಾಗುತ್ತದೆ ಅಂತ ಹೇಳಿದ್ದಾರೆ. ನೀವೆಲ್ಲ ಗಂಭೀರವಾಗಿ ಪರಿಗಣಿಸಬೇಕು. ಇಲ್ಲಾಂದರೆ ಕಷ್ಟ ಆಗುತ್ತೆ ಅಂತ ಹೇಳಿದ್ದಾರೆ ಎಂದರು.

ದೆಹಲಿಯಲ್ಲಿ ಸಂಯೋಜಕರ ಸಭೆಯಲ್ಲಿ ಭಾಗಿಯಾದ ವಿಚಾರವಾಗಿ ಮಾತನಾಡಿದ ಪರಮೇಶ್ವರ್, ನಮ್ಮನ್ನೆಲ್ಲ ಎಐಸಿಸಿ ಅಧ್ಯಕ್ಷಕರು ಲೋಕಸಭಾ ಚುನಾವಣೆ ತಯಾರಿಗೆ ಕರೆಸಿದ್ದರು. ಕರ್ನಾಟಕ ಮಾತ್ರ ಅಲ್ಲ ಎಲ್ಲಾ ರಾಜ್ಯದವರನ್ನು ಕರೆಸಿದ್ದರು. ದೇಶದಲ್ಲಿ ಒಟ್ಟು 5 ಕ್ಲಷ್ಟರ್ ಇದ್ದು ಕರ್ನಾಟಕ ಕ್ಲಸ್ಟರ್ ಒಂದರಲ್ಲಿದೆ ಎಂದರು.

ಸಭೆಯಲ್ಲಿ ಯಾವ ರೀತಿ ಬಿಎಲ್‌ಎ ಮಾಡಬೇಕು, ಪಂಚಾಯತಿ ಮಟ್ಟದಲ್ಲಿ ಹೇಗೆ ಸಮಿತಿ ಮಾಡಬೇಕು, ಅಭ್ಯರ್ಥಿಗಳ ಆಯ್ಕೆ ಆದ ಮೇಲೆ ಏನೆಲ್ಲಾ ಕ್ರಮ ತಗೆದುಕೊಳ್ಳಬೇಕು ಎಂಬ ಕುರಿತು ಚರ್ಚೆ ಆಗಿದೆ.

ಹಿಂದೆ ವೀಕ್ಷಕರನ್ನು ನೇಮಿಸುತ್ತಿದ್ದರು, ಈಗ ಸಂಯೋಜಕರನ್ನು ನೇಮಿಸಿದ್ದಾರೆ. ವಾರ್ ರೂಮ್ ಅಂತ ಇರುವುದನ್ನು ಈಗ ಕನ್ವೆನ್ಷನ್ ಸೆಂಟರ್ಸ್ ಅಂತ ಮಾಡಿದ್ದಾರೆ. ಶಶಿಕಾಂತ್ ಸೆಂಥಿಲ್ ಅವರನ್ನು ಎಲ್ಲಾ ಕೋ ಆರ್ಡಿನೇಷನ್ಗೆ ಮುಖ್ಯಸ್ಥರನ್ನಾಗಿ ಮಾಡಿದ್ದಾರೆ ಎಂದರು.

ಸಭೆಯಲ್ಲಿ ಏನು ಮಾಡಬೇಕು, ಏನು ನೀರಿಕ್ಷೆ ಮಾಡುತ್ತೇವೆ ಎಂಬುದನ್ನ ಹೇಳಿದ್ದಾರೆ. ಕಳೆದ ಬಾರಿ 1 ಕ್ಷೇತ್ರ ಗೆದ್ದಿದ್ದೇವೆ.

ಹೆಚ್ಚು ಸ್ಥಾನ ಗೆಲ್ಲಬೇಕು. ಹಿಂದೆ 27 ಸ್ಥಾನ ಗೆದ್ದಿದ್ದೆವು. ಈ ಬಾರಿಯೂ ಅಷ್ಟನ್ನೂ ಗೆಲ್ಲಿ ಅಂತ ಹೇಳಿದ್ದಾರೆ. ಚುನಾವಣೆ ವಿಚಾರವಾಗಿ ಹೈಕಮಾಂಡ್ ಆಗಾಗ ಸೂಚನೆ ರವಾನಿಸಲಿದೆ ಎಂದರು.

## ಪ್ರತಾಪ್ ಸಿಂಹನಷ್ಟು ಅಯೋಗ್ಯ, ಮುಠ್ಠಾಳ ಇನ್ನೊಬ್ಬರಿಲ್ಲ: ಶಾಸಕ ಪ್ರದೀಪ್ ಈಶ್ವರ್



ಚಿಕ್ಕಬಳ್ಳಾಪುರ: ಬಿಜೆಪಿಯವರ ತರ ನಾವು ಧರ್ಮಗಳ ಧರ್ಮಗಳ ಮಧ್ಯೆ ಕಿತ್ತಾಟ ತರೋ ಕೆಲಸ ಮಾಡೋದಿಲ್ಲ ಎಂದು ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಹೇಳಿದ್ದಾರೆ.

ಅಯೋಧ್ಯೆ ಶ್ರೀರಾಮ ಮಂದಿರ ಉದ್ಘಾಟನಾ ಕಾರ್ಯಕ್ರಮಕ್ಕೆ ಕಾಂಗ್ರೆಸ್ ನಾಯಕರು ಗೈರಾಗುವ ವಿಚಾರದ ಬಗ್ಗೆ ಸುದ್ದಿಗಾರರ ಜೊತೆ ಮಾತನಾಡಿದ ಶಾಸಕ ಪ್ರದೀಪ್ ಈಶ್ವರ್, ಶ್ರೀರಾಮ ಹಿಂದೂಗಳ ಆರಾಧ್ಯ ದೈವ. ನಾನೂ ಕೂಡ ಶ್ರೀರಾಮ ಭಕ್ತ. ಶ್ರೀ ರಾಮನನ್ನ ಆರಾಧಿಸುತ್ತೇವೆ, ಅಲ್ಲಾಹ್, ಏಸುವನ್ನು ಕೂಡ ಗೌರವಿಸುತ್ತೇವೆ ಎಂದರು. ಆದರೆ ಬಿಜೆಪಿಯವರ ತರ ಧರ್ಮಗಳ ಧರ್ಮಗಳ ಮಧ್ಯೆ ಕಿತ್ತಾಟ ತರೋ ಕೆಲಸ ಮಾಡೋದಿಲ್ಲ ಎಂದ ಶಾಸಕ ಪ್ರದೀಪ್ ಈಶ್ವರ್, ಎಲ್ಲಾ ಧರ್ಮಗಳನ್ನ ಸಮಾನವಾಗಿ ಕಾಂಗ್ರೆಸ್ ಕಾಣುತ್ತದೆ ಎಂದು ಹೇಳಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಪ್ರತಾಪ್ ಸಿಂಹ ವಿರುದ್ಧವೂ ಕಿಡಿಕಾರಿದ ಶಾಸಕ ಪ್ರದೀಪ್ ಈಶ್ವರ್, ಆತನಷ್ಟು ಅಯೋಗ್ಯ, ಮುಠ್ಠಾಳ ಇನ್ನೊಬ್ಬರಿಲ್ಲ. 45 ವರ್ಷ ರಾಜಕೀಯ ಅನುಭವ ಹೊಂದಿರುವ ಸಿದ್ಧರಾಮಯ್ಯರ ಬಗ್ಗೆ ಮಾತಾಡ್ತಾರೆ. ಪ್ರತಾಪ್ ಸಿಂಹ ಅವರೇ ಬಾಯ್ ಮುಚ್ಚಿಕೊಂಡು ಇರಬೇಕು, ಬಾಯಿ ತೆವಲು ಕಡಿಮೆ ಮಾಡಬೇಕು ಎಂದರು. ಲೋಕಸಭೆಯ ಪ್ರವೇಶಕ್ಕೆ ಪಾಸ್ ಕೊಟ್ಟ ಪ್ರತಾಪ್ ಸಿಂಹ ದೇಶದ್ರೋಹಿ ಅಲ್ವಾ ಎಂದು ಪ್ರಶ್ನಿಸಿದ ಶಾಸಕ ಪ್ರದೀಪ್ ಈಶ್ವರ್, ಒಂದು ವೇಳೆ ನಾವು ಪಾಸ್ ಕೊಟ್ಟಿದ್ರೆ ಏನ್ ಪಟ್ಟ ಕಟ್ಟುತ್ತಿದ್ರಿ ಎಂದು ಪ್ರಶ್ನಿಸಿದರು. ಇನ್ನು, ಕೇಂದ್ರ ಸರ್ಕಾರ ನಮ್ಮ ಪಾಲಿನ ಅಕ್ಕಿ ಕೊಡ್ತಿದ್ದಾರೆಯೇ ಹೊರತು, ಅವರ ಮನೆಯಿಂದ ತಂದು ಕೊಡ್ತಿಲ್ಲ ಎಂದ ಪ್ರದೀಪ್ ಈಶ್ವರ್, ಚುನಾವಣಾ ಸಮಯದಲ್ಲಿ ಬಿಜೆಪಿಯವರು ಬಾಯಿ ಬಡ್ಕೋತಾರೆ ಎಂದರು.

# 3935.52 ಕೋಟಿ ಬಂಡವಾಳ ಹೂಡಿಕೆಯ 73 ಯೋಜನೆಗಳಿಗೆ ಅನುಮೋದನೆ

ಬೆಂಗಳೂರು: ರಾಜ್ಯದಾದ್ಯಂತ ಕೈಗಾರಿಕಾ ಬೆಳವಣಿಗೆ ಉತ್ತೇಜಿಸಲು ಮತ್ತು ಉದ್ಯೋಗ ಸೃಷ್ಟಿಸಲು ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿಯು ಶುಕ್ರವಾರ ಇಲ್ಲಿ ಒಟ್ಟು ರೂ 3,935.52 ಕೋಟಿ ಬಂಡವಾಳ ಮೊತ್ತದ ಹೂಡಿಕೆಯ ಪ್ರಸ್ತಾವಗಳಿಗೆ ಅನುಮೋದನೆ ನೀಡಿದೆ.

ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅನುಮೋದಿಸಲಾದ ಬೃಹತ್ ಹೂಡಿಕೆ ಯೋಜನೆಗಳ ಜೊತೆಗೆ, ರಾಜ್ಯದಾದ್ಯಂತ ವಿವಿಧ ಜಿಲ್ಲೆಗಳಲ್ಲಿನ ಹೂಡಿಕೆ ಯೋಜನೆಗಳಿಗೆ ಒಪ್ಪಿಗೆ ನೀಡಲಾಗಿದೆ. ಈ ಯೋಜನೆಗಳಲ್ಲಿ ಡೇಟಾ ಸೆಂಟರ್ ಮೂಲಸೌಕರ್ಯ, ಸೌರಶಕ್ತಿ ಬಿಡಿಭಾಗಗಳ ತಯಾರಿಕೆ, ಡಿಸ್ಟಿಲರಿ, ವಾಹನ ಬಿಡಿಭಾಗ ತಯಾರಿಕಾ ಘಟಕ ಮುಂತಾದವು ಸೇರಿವೆ.



ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನಲ್ಲಿ ಇಟಿಎಲ್ ಸೆಕ್ಯುರ್ ಸ್ಪೇಸ್ ಲಿಮಿಟೆಡ್‌ನ ರೂ 490.50 ಕೋಟಿ ವೆಚ್ಚದ ಡೇಟಾ ಸೆಂಟರ್ ಮೂಲಸೌಲಭ್ಯ, ಬಳ್ಳಾರಿಯ ಹೂವಿನಹಡಗಲಿ ತಾಲ್ಲೂಕಿನಲ್ಲಿ ಡಿಸ್ಟಿಲರಿ ಸ್ಥಾಪಿಸಲು ಮೈಲಾರ್ ಇನ್‌ಫ್ರಾ ಪ್ರೈವೇಟ್ ಲಿಮಿಟೆಡ್‌ನ ರೂ 339.84–ಕೋಟಿ ಪ್ರಸ್ತಾವ ಮತ್ತು ರಾಮನಗರ ಜಿಲ್ಲೆಯ ಹಾರೋಹಳ್ಳಿಯಲ್ಲಿ ಸಾಂಗೊ ಇಂಡಿಯಾ ಆಟೋಮೋಟಿವ್ ಪಾರ್ಟ್ಸ್ ಪ್ರೈವೇಟ್ ಲಿಮಿಟೆಡ್‌ನ ರೂ 278.59–ಕೋಟಿ ಹೂಡಿಕೆಯ ಎಕ್ಸಾಸ್ಟ್ ಸಿಸ್ಟಮ್ ತಯಾರಿಕಾ ಘಟಕಕ್ಕೆ ಅನುಮೋದನೆ ನೀಡಲಾಗಿದೆ.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಶ್ರೀ. ಎಂ. ಬಿ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆದ 142ನೇ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಒಟ್ಟು ರೂ 3935.52 ಕೋಟಿ ಬಂಡವಾಳ ಹೂಡಿಕೆಯ 73 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇವುಗಳಿಂದ 14,497 ಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿವೆ.

ರೂ 50 ಕೋಟಿಗೂ ಹೆಚ್ಚಿನ ಬಂಡವಾಳ ಹೂಡಿಕೆಯ 9 ಪ್ರಮುಖ ಬೃಹತ್ ಮತ್ತು ಮಧ್ಯಮ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇವುಗಳಿಂದ ರಾಜ್ಯದಲ್ಲಿ ರೂ 2424.28 ಕೋಟಿ ಮೊತ್ತದ ಬಂಡವಾಳ ಹೂಡಿಕೆಯೊಂದಿಗೆ 9,200 ಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿವೆ.

ರೂ 15 ಕೋಟಿಗಳಿಂದ ರೂ 50 ಕೋಟಿ ಮೊತ್ತದ ಒಳಗಿನ ಬಂಡವಾಳ ಹೂಡಿಕೆಯ 58 ಹೊಸ ಯೋಜನೆಗಳಿಗೆ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಇವುಗಳಿಂದ ರೂ 1423.57 ಕೋಟಿ ಮೊತ್ತದ ಬಂಡವಾಳ ಹೂಡಿಕೆಯೊಂದಿಗೆ 5,297 ಜನರಿಗೆ ಉದ್ಯೋಗಗಳು ಲಭ್ಯವಾಗಲಿವೆ.

ಹೆಚ್ಚುವರಿ ಬಂಡವಾಳ ಹೂಡಿಕೆಯ 5 ಯೋಜನೆಗಳಿಗೆ ಸಭೆಯು ಅನುಮೋದಿಸಿದ್ದು ಇದರಿಂದ ರೂ 87.67 ಕೋಟಿ ಬಂಡವಾಳ ಹೂಡಿಕೆ ಆಗಲಿದೆ.

ಸಭೆಯಲ್ಲಿ ಸರ್ಕಾರದ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಡಾ. ಎಸ್ ಸೆಲ್ವಕುಮಾರ್, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆಯುಕ್ತರಾದ ಶ್ರೀಮತಿ ಗುಂಜನ್ ಕೃಷ್ಣ, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯ ಡಾ. ಎನ್. ಮಹೇಶ್, ಕರ್ನಾಟಕ ಉದ್ಯೋಗ ಮಿತ್ರ ವ್ಯವಸ್ಥಾಪಕ ನಿರ್ದೇಶಕ ಶ್ರೀ. ದೊಡ್ಡ ಬಸವರಾಜು, ರಾಜ್ಯ ಕಾರ್ಮಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್ , ಐಟಿಬಿಟಿ ಇಲಾಖೆಯ ನಿರ್ದೇಶಕ ದರ್ಶನ್ ಎಚ್. ವಿ, ಜೀವಿಪರಿಸ್ಥಿತಿ ಹಾಗೂ ಪರಿಸರ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿಜಯ್ ಮೋಹನ್ ರಾಜ್ ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಹಾಜರಿದ್ದರು.

# ಮುಕ್ತಿಮಠದಲ್ಲಿ 14 ರಿಂದ ಜಾತ್ರಾ ಮಹೋತ್ಸವ ಆರಂಭ



ಬೆಳಗಾವಿಯ ನಗರದ ಸಮೀಪದಲ್ಲಿರುವ, ರಾಷ್ಟ್ರೀಯ ಹೆದ್ದಾರಿ 4 ರ ಬದಿಯ ಭೂತರಾಮನಟ್ಟಿಯ ಮುಕ್ತಿಮಠದ ಮಕರ ಸಂಕ್ರಮಣಜಾತ್ರಾ ಮಹೋತ್ಸವವವು ಇದೇ ಜನೇವರಿ 14 ರಂದು ಅದ್ದೂರಿಯಾಗಿ ಆರಂಭವಾಗಲಿದ್ದು ದಿ : 18 ರಂದು ಮುಕ್ತಾಯವಾಗಲಿದೆ. ಈ ಜಾತ್ರೆಯ ನಿಮಿತ್ಯ ಹಲವು ಧಾರ್ಮಿಕ ಕಾರ್ಯಕ್ರಮಗಳು ಜರುಗಲಿದ್ದು, ಆ ನಿಮಿತ್ಯ ಆ ಕ್ಷೇತ್ರವನ್ನು ಹಾಗೂ ಶ್ರೀಗಳನ್ನು ಪರಿಚಯಿಸುವ ಲೇಖನ ಇದು.

ಸುಕ್ಷೇತ್ರ ಮುಕ್ತಿಮಠದ ಪೀಠಾಧಿಪತಿ ಶಿವಸಿದ್ಧ ಸೋಮೇಶ್ವರ ಮಹಾಸ್ವಾಮಿಗಳು ನೇತೃತ್ವದಲ್ಲಿ 2024 ರ ಜನೇವರಿ 14 ರಿಂದ 18 ರ ವರೆಗೆ ಮಕರ ಸಂಕ್ರಮಣದ ಜಾತ್ರಾ ಮಹೋತ್ಸವವು ಅದ್ದೂರಿಯಾಗಿ ಜರುಗುತ್ತಲಿದೆ. ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ, ಇದು ಮಾನವಜನ್ಮದ ಸಂಕುಲ ಶಿವಭಕ್ತರಿಗೆ ಒಂದೇ ಕುಲ ಎನ್ನುವ ಮಹಾನ ಸಂದೇಶ ನೀಡುವ ನಿಟ್ಟಿನಲ್ಲಿ ಶ್ರೀ ಮುಕ್ತಾಂಬಿಕಾ ಅಮ್ಮನವರ ಸನ್ನಿಧಿ ಶ್ರೀ ಕ್ಷೇತ್ರ ಮುಕ್ತಿಮಠದ ಪಂಚಗ್ರಾಮ ಭೂಕೈಲಾಸದ ಪುಣ್ಯಸ್ಥಳದಲ್ಲಿ ಈ ಸಲವೂ ಪ್ರತಿವರ್ಷದ ಪರಂಪರೆ ಪದ್ಧತಿಯಂತೆಅದ್ದೂರಿಯಾಗಿ ಜರುಗುತ್ತಲಿದೆ.

ಬೆಳಗಾವಿ ತಾಲೂಕಿನ ಮುಕ್ತಿಮಠವು ತನ್ನ ಸುತ್ತಮುತ್ತಲಿನ' ಪಂಚಗ್ರಾಮಗಳ' ಭಕ್ತರ ಆಶಯ ಭಾವನೆಗಳಿಗೆ, ಅವರ ಭಕ್ತಿಯ ಆಶಯಗಳಿಗೆ ಸ್ಪಂದಿಸಿ ಅವರೆಲ್ಲ ಸರ್ವರೀತಿಯ ಸುಧಾರಣೆಗೆ ಭಕ್ತಿಯ ಜಾಗೃತಿಗೆ ಉತ್ತಮ ನಡೆನುಡಿ ಆದರ್ಶಪ್ರಾಯ ಬದುಕಿಗೆ ಸಜ್ಜಾಗಿಸಿದೆ.ಜೊತೆಗೆ ರಾಜ್ಯದ ಉತ್ತರಕರ್ನಾಟಕ, ಮಹಾರಾಷ್ಟ್ರ, ಆಂಧ್ರ ಪ್ರದೇಶ, ತೆಲಂಗಾಣ ಸೇರಿದಂತೆ ನಾಡಿನ ನಾನಾಮೂಲೆಗಳಿಂದ ಭಕ್ತರನ್ನು ಹೊಂದಿದೆ. ಶ್ರದ್ಧೆ ಭಕ್ತಿಯಿಂದ ಶ್ರೀಮಠವನ್ನು ಆರಾದಿಸಿದವರನ್ನು ಹರಿಸಿದೆ, ಹಾರೈಸಿದೆ ಅವರ ಬದುಕು ಪಾವನ ಮಾಡಿದೆ ನಂಬಿದ ಭಕ್ತರು ಶ್ರೀ ಮಠದ ಕೃಪೆಗೆ ಪಾತ್ರರಾಗಿತನ್ನ ಬದುಕಿನಲ್ಲಿ ಹಲವು ಬದಲಾವಣೆಗೆ ಶ್ರೀ.ಮಠವು ಸಹಕಾರಿಯಾಗಿದೆ.

ಮಾನವಕುಲದಕಲ್ಯಾಣಕ್ಕೆ ಭೂಮಿಯ ಮೇಲೆ ಗುರುವಿನ ಅವತಾರಿಯಾಗಿಧರೆಗೆ ಬಂದ ಮಹಿಮಾ ಪುರುಷ, ದೇವ ಸ್ವರೂಪಿ ಪೂಜ್ಯ ಶ್ರೀ. ಷ.ಬ್ರ.ಶಿವಸಿದ್ಧ ಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ದೂರದಕಲ್ಬುರ್ಗಿಜಿಲ್ಲೆಯಿಂದ ಭಕ್ತರಭಾವನೆಗೆಓಗೊಟ್ಟುಇಲ್ಲಿಗೆ ಬಂದು ಶ್ರೀ. ಮಠದಉದಯ ಕ್ಕೆಕಾರಣರಾದವರುಅವರಕಠೋರತಪೋ ಅನುಷ್ಠಾನಗಳು ನಮಗೆಲ್ಲ ಬೆಳಕಾಗಿವೆ. ಧರ್ಮದ ಮಾರ್ಗದಲ್ಲಿಜೀವನ ಸಾಕ್ಷಾತ್ಕಾರ ಕರುಣಿಸಿದ ಸದ್ಗುರುಇವರಾಗಿರುವರು. ಬಾಲ್ಯದಲ್ಲಿಯೇ ಸರ್ವಸಂಗ ಪರಿತ್ಯಾಗಿಯಾಗಿಆದ್ಯಾತ್ಮದ ಸೆಳೆತಕ್ಕೆ ಆಕರ್ಷಿತರಾಗಿದೇಶ ಸಂಚಾರಗೈದುಇವರಿಗೆದೇವರು ದಿವ್ಯ ಶಕ್ತಿ ಕರುಣಿಸಿರುವುದಕ್ಕೆ ಇಂದಿನ ಹಲವಾರು ಪವಾಡಗಳು ಪುಣ್ಯ ಘಟನೆಗಳು ನಮ್ಮ ಮುಂದೆ ಸಾಕ್ಷಿಯಾಗಿವೆ ಭಕ್ತರಉದ್ದಾರಕ್ಕೆ ಸಹಾಯಕವಾಗಿ ಉಳಿಯುತ್ತವೆ.

ಚಿಕ್ಕ ವಯಸ್ಸಿನಲ್ಲಿಯೇ ಇವರು ಶಿವನ ಧ್ಯಾನದ ಅನುಷ್ಠಾನ ಆರಂಭಿಸಿದ ಇತಿಹಾಸಇವರ ಪೂರ್ವಜನ್ಮದದೈವಿಶಕ್ತಿಯ ಪವಾಡವೇಆಗಿದೆ, ನೂರಕ್ಕೂ ಹೆಚ್ಚು ಅನುಷ್ಠಾನಗಳನ್ನು ಪೂಜ್ಯರುಗೈದಿರುವರುಅವರು ಮಾಡಿರುವಒಂದು ವರ್ಷದಅನ್ನ- ಆಹಾರಾಧಿ ಬಿಟ್ಟುಕಠೋರವಾಗಿ ಆಚರಿಸಿದ ಅನಷ್ಠಾನವು ಭಕ್ತರನ್ನುಉದ್ದರಿಸಲು ಸಹಕಾರಿಯಾಗಿದೆ. ಅವರತಪೋಶಕ್ತಿ ಶ್ರೀಮಠವನ್ನು ಸಿದ್ದಿಪೀಠವನ್ನಾಗಿಸಿದೆ.ಅದರ ಪೂರ್ವದಲ್ಲಿ 11 ನೇಯ ವಯಸ್ಸಿನಲ್ಲಿಯೇ ದೇಶದಅತ್ಯಂತ ಪವಿತ್ರ ಶ್ರೀ ಕ್ಷೇತ್ರಗಳಾಗಿರುವ ಹಿಮಾಲಯ ಕೇದಾರಗಳಲ್ಲಿ ಹೋಗಿ ಕಠೋರ ಅನುಷ್ಠಾನಗೈದಿರುವರುದೇಶ ಸಂಚಾರ ಮಾಡಿರುವರು.

ತಮ್ಮ ಸಂಚಾರದಕೊನೆಯ ಹಂತದಲ್ಲಿ ಬೆಳಗಾವಿ ನಗರದ ಸಮೀಪದ ಭೂತರಾಮನಹಟ್ಟಿಯ ಹಚ್ಚ ಹರಿದಿನ ಅಂದಿನ ದಟ್ಟವಾದಅರಣ್ಯದಿಂದ ಸುತ್ತುವರೆದಿರುವ ನಿಸರ್ಗರಮಣೀಯಗ್ರಾಮವನ್ನುಆಯ್ದುಕೊಂಡು ಭಕ್ತರ ಬದುಕನ್ನುಉದ್ದರಿಸಲು ಬಂದರು, ಶ್ರೀಗಳ ವಾಸ್ತವ್ಯದ ಕೆಲವೇ ಕೆಲವು ದಿನಗಳಲ್ಲಿ ಮುಕ್ತಿಮಠವಾಗಿ ಸಹಸ್ರಾರು ಭಕ್ತರಆಕರ್ಷಣೆಯ ಶ್ರದ್ಧಾಕೇಂದ್ರವಾಯಿತು. ಧಾರ್ಮಿಕ ಪಾವನ ಶಕ್ತಿಯಕೇಂದ್ರವಾಗಿ ಬೆಳೆದಿರುವುದು ಶ್ರೀಗಳ ತಪೋಶಕ್ತಿಯಿಂದಎಂದು ಹೇಳಬಹುದು.

2002 ರಿಂದ 2003 ರ ವರೆಗೆ ಒಂದು ವರ್ಷದ ಪರ್ಯಂತರಅನ್ನಆಹಾರಾದಿ ತ್ಯಜಿಸಿ ಸೂರ್ಯಚಂದ್ರರ ಬೆಳಕಿಲ್ಲದ ಆಳವಾದ ಗವಿಯ ನೆಲ ಸಮಾಧಿಯಲ್ಲಿ ಶಿವ ಸಮಾಧಿಸ್ಥರಾಗಿಅತ್ಯುಗ್ರತಪೋಯೋಗಾನುಷ್ಠಾನ ಪೂರೈಸಿದ ಮಹಾ ಮಹಿಮ ಶಿವಯೋಗಿಗಳು ಅವರುತಮ್ಮತಪಶಕ್ತಿಯಿಂದ ಈ ಭೂಮಿಯನ್ನು ಪುಣ್ಯಮಯಗೊಳಿಸಿರುವರು.

ಮುಕ್ತಿಮಠದ ಶಕ್ತಿ ಸ್ಥಳದಲ್ಲಿ ಮುಕಾಂಬಿಕೆ ದೇವಾಲಯ, ಜಗದ್ಗುರು ಪಂಚಾಚಾರ್ಯರ ಲಿಂಗೋದ್ಭವ ಮೂರ್ತಿಗಳು, ಭೂಕೈಲಾಸಮಂದಿರ, ನಂದಿ ಜೊತೆಗೆ ಸಧ್ಯ ನಿರ್ಮಾಣವಾಗಿರುವಕಲ್ಯಾಣಮಂಟಪವೂ ಸೇರಿದಂತೆ ಹಲವು ದೇವಾಲಯಗಳ ಕಟ್ಟಡಗಳು ಆಕರ್ಷಣಿಯವಾಗಿ ನಿರ್ಮಾಣವಾಗಿವೆ.

ಭಕ್ತರಉದ್ಧಾರವೇ ಮಠದ ಪ್ರಥಮಆದ್ಯತೆಯಾಗಿದೆ. ಮುಕ್ತಿಮಠದಲ್ಲಿ ಸಿದ್ದಿವಿನಾಯಕ ಮಂದಿರ ನಿರ್ಮಾಣವಾಗಿದೆ, ಹಿಡಕಲ್‌ಜಲಾಶಯದಲ್ಲಿ ಮುಳುಗಿದ್ದ ಜೋಡಿ ಲಿಂಗಗಳನ್ನು ತೆಗೆದುಕೊಂಡು ಬಂದು ಶ್ರೀ ಮಠದಲ್ಲಿ ಪ್ರತಿಷ್ಠಾಪಿಸಿ ದಿನವೂ ಬಿಲ್ವಾರ್ಚನೆಯಿಂದ ಪೂಜಿಸುವ ವ್ಯವಸ್ಥೆಯನ್ನು ಶ್ರೀಗಳು ಮಾಡಿರುವರು ದೇಶದ ಪ್ರಮುಖ ನಾಲ್ಕು ಶಕ್ತಿ ದೇವತೆಗಳಾದ ಮಧುರೆಯ ಮೀನಾಕ್ಷಿ, ಕಂಚಿಯಕಾಮಾಕ್ಷಿ, ಕನ್ಯಾಕುಮಾರಿಯಜಲಜಾಕ್ಷಿ, ಕಾಶಿಯ ವಿಶಾಲಾಕ್ಷಿ ದೇವಾಲಯಗಳ ರೀತಿಯಲ್ಲಿ ಮುಕ್ತಿಮಠದಲ್ಲಿ ಮುಕ್ತಾಂಬಿಕಾ ದೇವಿಯ ಮಹಾಮಂದಿರವನ್ನು ನಿರ್ಮಿಸಿ ಅಮ್ಮನವರ ನಿತ್ಯಕುಂಕುಮಾರ್ಚನೆಯಂತಹ ಸರ್ವ ಪೂಜೆಯ ವ್ಯವಸ್ಥೆ ಮಾಡಲಾಗಿದೆ. ಪವಿತ್ರಧಾರ್ಮಿಕ ಕ್ಷೇತ್ರಗಳಾದ ಕಾಶಿ, ಕೇದಾರ, ರಾಮೇಶ್ವರ ಭೀಮಾಶಂಕರ ಗಳಿಗೆ ಹೋಗುವ ಅವಶ್ಯಕತೆಇಲ್ಲದ ಸ್ಥಿತಿ ಭಕ್ತರಿಗೆ ಮಾಡಿರುವರುಅಂದರೆ 12 ದ್ವಾದಶ ಜ್ಯೋತಿರ್ಲಿಂಗಗಳ ಮಹಾಮಂದಿರ ನಿರ್ಮಿಸಿ ಇಲ್ಲಿಯೇ ಶಿವನನ್ನು ನೆಲೆಗೊಳಿಸಿದ್ದಾರೆ.ಶಿವನೊಂದಿಗೆ ಅಮ್ಮ ಪಾರ್ವತಿಯನ್ನು ಪ್ರತಿಷ್ಠಾಪಿಸಲು ಶ್ರೀಗಳು ಶಿವಪಾರ್ವತಿಯರ ಕೈಲಾಸ ಮಹಾಮಂದಿರವನ್ನು ನಿರ್ಮಿಸಿ ಹಬ್ಬ ಹರಿದಿನಗಳಲ್ಲಿ ಕಲ್ಯಾಣೋತ್ಸವದಂತಹಕಾರ್ಯಕ್ರಮಜರುಗಲುಕಾರಣರಾಗಿದ್ದಾರೆ.

ಲಿಂಗವಂತಜನಾಂಗದಉದ್ಧಾರಕರಾಗಿರುವ ಶ್ರೀ ಜಗದ್ಗುರು ಮೂಲ ಪಂಚಾಚಾರ್ಯರ ಮಹಾಮಂದಿರ ಸ್ಥಾಪಿಸಿ ಕೇದಾರ, ಉಜ್ಜಯನಿ, ಶ್ರೀಮದ್ ರಂಭಾಪುರಿ, ಶ್ರೀ ಜ್ಞಾನಕ್ಷೇತ್ರ ಕಾಶಿಯ ಜಗದ್ಗುರುಗಳನ್ನು ನಿರಂತರವಾಗಿ ಮೇಲಿಂದ ಮೇಲೆ ಶ್ರೀಮಠದ ಧಾರ್ಮಿಕ ಕಾರ್ಯಕ್ರಮಗಳಿಗೆ ಕರೆಯಿಸಿ ಸಕಲರನ್ನು ಪುನೀತರನ್ನಾಗಿ ಮಾಡುತ್ತಿರುವರು. ಶ್ರೀ ಶಿವಸಿದ್ಧ ಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಅನುಷ್ಠಾನಗೈದ ಸ್ಥಳದಲ್ಲಿ ಅನುಷ್ಠಾನ ಮಂದಿರ ನಿರ್ಮಾಣವಾಗಿದೆ.ಪ್ರತಿನಿತ್ಯ ಸದ್ ಭಕ್ತರಿಗಾಗಿ ಅನ್ನದಾಸೋಹ ಮಂದಿರ ನಿರ್ಮಿಸಲಾಗಿದೆ.

ಶಾಂತಿ ನೆಮ್ಮದಿ ಅರಸಿಬರುವ ಭಕ್ತರಿಗೆತಂಗುದಾಣ ಹಾಗೂ ಯಾತ್ರಾ ನಿವಾಸಗಳನ್ನು ನಿರ್ಮಿಸಲಾಗಿದೆ ಬೃಹತ್‌ವಾದಕಲ್ಯಾಣ ಮಂಟಪ ನಿರ್ಮಾಣಗೊಂಡು ಮದುವೆಗಳು ಸೇರಿದಂತೆ ಹಲವು ಧಾರ್ಮಿಕ, ಸಾಮಾಜಿಕ ಕಾರ್ಯಗಳನ್ನು ಆಯೋಜಿಸಲು ಸಹಾಯಕವಾಗಿವೆ.

ಮುಕ್ತಿಮಠಕ್ಕೆ ಆಗಮಿಸುವ ಜನರಿಗೆ ನಿತ್ಯಅನ್ನದಾಸೋಹವಿದೆ.ಭಕ್ತರಿಗೆತಂಗಲು ವಿಶ್ರಾಂತಿ ಕೊಠಡಿಗಳಿವೆ. ಬಡ ಮಕ್ಕಳಿಗೆ ಉಚಿತವಾದ ಶಿಕ್ಷಣ ಪ್ರಸಾದ ವ್ಯವಸ್ಥೆಕಲ್ಪಿಸಲಾಗಿದೆ.ನಿತ್ಯ ಸಹಸ್ರಾರು ಭಕ್ತರು ಶ್ರೀ ಮಠಕ್ಕೆ ಆಗಮಿಸಿ ಪೂಜ್ಯರದರ್ಶನ ಭಾಗ್ಯ ಮಾತೆ ಮುಕ್ತಾಂಬಿಕೆಯದರ್ಶನ ಭಾಗ್ಯ ಪಡೆದುಕೊಳ್ಳುವರು ತನ್ಮೂಲಕತಮ್ಮಜೀವನವನ್ನು ಪುಣ್ಯಮಯ ಪಾವನ ಮಾಡಿಕೊಳ್ಳುವರು.ಶ್ರೀ ಮಠದಆವರಣದಲ್ಲಿ ಭಕ್ತರಿಗಾಗಿಗ್ರಂಥಾಲಯ ಸೇವೆ ಇದೆಜ್ಞಾನಒದಗಿಸಲು ಸಾವಿರಾರು ಗ್ರಂಥಗಳು ಲಭ್ಯವಿದೆ.ಶ್ರೀಮಠದ ಆವರಣವು ಪ್ರಶಾಂತ ನಿಲಯವಾಗಿದೆ.ನಿರಂತರ ಪೂಜೆ ಪುನಸ್ಕಾರಗಳು ನಡೆಯುತ್ತಿವೆ ವಿಶೇಷ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪೂಜ್ಯ ಶ್ರೀಗಳು ನಾಡಿನ ಮೂಲೆ ಮೂಲೆಗೂ ಭಕ್ತರಕೋರಿಕೆ, ಆಶಯದಂತೆ ಭಾಗವಹಿಸಿ ಹರಸುತ್ತಿರುವರು. ಪ್ರತಿವರ್ಷಜಾತ್ರಾ ಮಹೋತ್ಸವ ಮಕರ ಸಂಕ್ರಮಣದಲ್ಲಿಐದು ದಿನಗಳ ಕಾಲ ಜರುಗುತ್ತಿದ್ದು ವಿಶೇಷ ಜಾತ್ರಾ ಮಹೋತ್ಸವಜರುಗುತ್ತಿವೆ ಈ ಪುಣ್ಯಮಯಜಾತ್ರೆ ವೀಕ್ಷಿಸಲು ಸಾವಿರಾರುಕಣ್ಣು ಸಾಲದುಜಾತ್ರಾಕಾರ್ಯಕ್ರಮ ನೋಡುವುದೇ ಪುಣ್ಯಮಯವಾಗಿದೆ.

ವಿವಿದೆಡೆ ಶಾಖಾ ಮಠಗಳು ಬೆಳೆಯುತ್ತಿವೆ ಎಲ್ಲವೂ ಮೂಲ ಮಠದಷ್ಟೇಸಮರ್ಥವಾಗಿ ಭಕ್ತರಉದ್ದಾರಕ್ಕೆ ಶ್ರಮಿಸುತ್ತಿವೆ. ಬೀದರಜಿಲ್ಲೆಯ ಹುಮನಾಬಾದತಾಲೂಕಿನ ಶ್ರೀ. ಇಟಗಾದ ಮುಕ್ತಿ ಮಠವೂ ನೂತನವಾಗಿ ಪೂಜ್ಯರ ಕೃಪಾರ್ಶಿರ್ವಾದದಿಂದ ಉನ್ನತ ಹಂತದಲ್ಲಿ ಬೆಳೆಯಬೇಕಾಗಿದೆ.

ನಾಡಿನ ಸಾಮಾಜಿಕಧಾರ್ಮಿಕ, ಶೈಕ್ಷಣಿಕರಂಗದಲ್ಲಿ ಮುಕ್ತಿಮಠದ ಪಾತ್ರವೂ ಸ್ಮರಣೀಯವಾಗಿದೆ.

ಶಿವಸಿದ್ಧ ಸೋಮೇಶ್ವರ ಮಹಾಸ್ವಾಮಿಗಳು ಸಾಮಾನ್ಯರಲ್ಲ, ಬಹುದೊಡ್ಡ ಮಹಾನ ಸಾಧಕರು, ಪೂಜಾ, ಯಜ್ಞ, ಯಾಗಾದಿ ಮಾಡಿ ಸಕಲಸಿದ್ಧಿ ಅನುಷ್ಠಾನವನ್ನು ಗಳಿಸಿಕೊಂಡವರು. ಸಕಲ ದಿವ್ಯ, ದೈವ, ಶಕ್ತಿಯನ್ನು ಸಾಧಿಸಿಕೊಂಡವರು.ಸಾಧನೆಯುಅವರಿಗೆ ಪ್ರಥಮ ಹೆಜ್ಜೆಯಾದರೆ ಭಕ್ತಿಯುಎರಡನೆಯ ಹೆಜ್ಜೆಯನ್ನಾಗಿಸಿಕೊಂಡವರು.

ಈ ಕಲಿಯುಗದಲ್ಲಿ ಸತತ ಪರಿಶ್ರಮ ಸದೃಢವಾದ ಮನಸ್ಸಿನ ಭಕ್ತಿ ಸಾಧಿಸಿದ ಸಿದ್ಧಿಯ ಫಲವಾಗಿ ಇಂದು ಮಹಾನಯೋಗಿ, ತಪಸ್ವಿಯಾಗಿ ನಮ್ಮ ಮುಂದೆ ಕಂಗೊಳಿಸುತ್ತಿರುವರು.ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ ಬಸವಾದಿ ಶಿವಶರಣರ ವಿಚಾರಧಾರೆಗೆ ಬದ್ಧರಾದವರು.ಭಕ್ತರನ್ನುಉದ್ಧರಿಸಲು ಅವತರಿಸಿದ ಮಹಾನ ಮಹಿಮರು.ಅವರ ನುಡಿ ಆಲಿಸಲು ಸಂತೋಷವೆನಿಸುತ್ತದೆ.ಭಕ್ತರನ್ನುಆತ್ಮೀಯವಾಗಿ ಮಾತನಾಡಿಸಿ ಅವರ ಸಮಸ್ಯೆಗಳಿಗೆ ಪರಿಹಾರ, ಸಾಂತ್ವನ ನೀಡುವಎಲ್ಲರಿಗೂ ಭಕ್ತಿಗೌರವ ಶ್ರೀಗಳ ಮೇಲೆ ಹೆಚ್ಚಿಸುತ್ತದೆ.

ಭಕ್ತರನ್ನುಉದ್ಧರಿಸಲು ಅವತರಿಸಿದ ಮಹಾನ ಮಹಿಮರುಅವರ ನುಡಿ ಆಲಿಸಲು ಸಂತೋಷವಾಗುತ್ತದೆ.

ಮಾನವನಿಗೆ ಗೋವು ನೀಡುವ ಪ್ರತಿಫಲ ಬಹಳವಿದೆ, ಗೋವು ಮಾನವರನ್ನು ಹೀಗೆ ಪ್ರಶ್ನೆ ಮಾಡುತ್ತದೆ" ಇಟ್ಟರೆ ಸೆಗಣಿಯಾದೆ, ಸುಟ್ಟರೆ ಕುರುಳಾದೆ, ಸಂಸ್ಕಾರ ನೀಡಿದರೆ ಶರಣರ ನೋಸಲಿಗೆ ಧರಿಸುವ ವಿಭೂತಿಯಾದೆ", ನೀನಾರಿಗಾದೆಯೋ ಎಲೆ ಮಾನವಎಂದು, ಗೋವುಗಳು ಹಲವು ರೀತಿಯ ಪ್ರಯೋಜನಗಳನ್ನು ಮಾನವನಿಗೆ ನೀಡುತ್ತದೆ. ನೀವು ಯಾರಿಗೆಉಪಯೋಗವಾದೆಎಂದು ಪ್ರಶ್ನಿಸಿಸುತ್ತದೆ.

ಕಲಿಯುಗದಲ್ಲಿಧರ್ಮಅವಶ್ಯಕತೆ ಬಹಳೇ ಇದೆಜಗತ್ತಿನಲ್ಲಿಧರ್ಮ ಉಳಿಯಬೇಕಾದರೆ ಗೋ ಹತ್ಯೆಯನ್ನು ನಿಷೇದಿಸಬೇಕು.ನಿಲ್ಲಿಸಬೇಕುಎಂಬ ಆಗ್ರಹ ಶ್ರೀಗಳದ್ದಾಗಿದೆ. ಮುಕ್ತಿಮಠದಆವರಣದಲ್ಲಿ ಸಸ್ಯ ಶ್ಯಾಮಲೆಯು ರಾರಾಜಿಸುತ್ತಿದ್ದಾಳೆ, ಶ್ರೀಗಳ ಆದಮ್ಯಆಸಕ್ತಿಯ ಫಲವಾಗಿ ಇಲ್ಲಿಅಪಾರವಾದ ಸಸ್ಯ ಸಂಪತ್ತುಇದೆ.

"ಭಗವಂತನು ಹುಟ್ಟು ಹಾಕಿದ ಸಕಲ ಜೀವರಾಶಿಗಳಲ್ಲಿ ಮನುಷ್ಯಜನ್ಮಅತ್ಯಂತ ಶ್ರೇಷ್ಠವಾಗಿದೆ.ಮನುಷ್ಯನಾಗಿ ಹುಟ್ಟುವುದು ಬಹು ದುರ್ಲಭಅದನ್ನು ಧರ್ಮಕಾರ್ಯಗಳಲ್ಲಿ ತೊಡಗಿಸಿಕೊಂಡು ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಭಕ್ತರಿಗೆಕರೆ ನೀಡಿರುವ ಪೂಜ್ಯರು ಮಾನವನಾದವನು ಸಜ್ಜನ ಶರಣರು ಹೇಳಿದ ಮಾತುಗಳನ್ನು ಕೇಳಿ ಎಚ್ಚರಾದರು.ಮಾನವಜನ್ಮ ಸಾರ್ಥಕವಾಗುತ್ತದೆ.

ಜೀವನದಲ್ಲಿ ನೆಮ್ಮದಿ, ಶಾಂತಿದೊರೆಯಬೇಕಾದರೆ ಶರಣರದರ್ಶನ ಮಾಡಬೇಕು.ಸತ್ಸಂಗದಲ್ಲಿ ಪಾಲ್ಗೋಳ್ಳಬೇಕು.ಶ್ರದ್ಧಾ ಭಕ್ತಿ ಬೆಳೆಸಿಕೊಳ್ಳಬೇಕು" ಎನ್ನುವ ಶಿವಸಿದ್ಧ ಸೋಮೇಶ್ವರ ಮಹಾಸ್ವಾಮಿಗಳ ವಿಚಾರಗಳನ್ನು ಆಲಿಸುವುದೇ ಬಹುದೊಡ್ಡ ಭಾಗ್ಯಎನ್ನಬಹುದು.

ನಮ್ಮ ಸಂಸ್ಕೃತಿಯ ಪ್ರಾಚೀನ ಬೇರುಗಳಿಗೆ ಹೊಸ ಚಿಗುರನ್ನು ಸೇರಿಸುತ್ತಾ ತಮ್ಮ ಸಮನ್ವಯ ದೃಷ್ಠಿ, ಮೃದು ವಚನ, ಸಕಲ ಜಪ, ತಪ, ಸಾಹಿತ್ಯ ಸಂಸ್ಕೃತಿ, ಧರ್ಮಾಚರಣೆ, ಸಮಾಜ ಸುಧಾರಣೆ ಮುಂತಾದ ಕಾರ್ಯಗಳಿಂದ ಶ್ರೀ ಮುಕ್ತಿಮಠವನ್ನು ಇನ್ನಷ್ಟು ಉಜ್ವಲವಾಗಿರಿಸಿದವರು. ಅವರ ಸಾಧನೆ ಸಿದ್ಧಿಗಳಿಗೆ ಈಗ ಇಪ್ಪತ್ತಾರರ ಸಂಭ್ರಮ. ಆ ಸಂಭ್ರಮಕ್ಕೆ ನೂರಾಗಲಿ ಇನ್ನಷ್ಟು ದ್ವಿಗುಣವಾಗಲಿ. ಎಲ್ಲಾ ಧಾರ್ಮಿಕ ಕ್ಷೇತ್ರಗಳಿಗೂ ಶ್ರೀಗಳವರ ರಚನಾತ್ಮಕ ಕಾಯಕಗಳು ದಾರಿದೀಪವಾಗಲಿ!.

ಇಂಥ ಮಹಾನ ಗುರುವಿನ ಸಾನ್ನಿಧ್ಯದಲ್ಲಿ ನಡೆಯುತ್ತಿರುವ ಈ ಸಾಲಿನ ಜಾತ್ರಾ ಮಹೋತ್ಸೋವದಲ್ಲಿ ನಾವು ನೀವೆಲ್ಲ ಭಾಗಿಗಳಾಗಿ ಶ್ರೀ ಗುರುವಿನ ಆರ್ಶಿವಾದ ಪಡೆದು ಸದ್ಗುರುವಿನ ಕೃಪೆಗೆ ಪಾತ್ರರಾಗಿ ನಮ್ಮಜೀವನ ಪಾವನ ಮಾಡಿಕೊಳ್ಳೋಣ.

-ಬಸವರಾಜ ಫ. ಸುಣಗಾರ
ಮುಖ್ಯೋಪಾಧ್ಯಾಯರು,
ಸ.ಮಾ.ಪ್ರಾ.ಕ.ಶಾಲೆ,
ಮಾಸ್ತಮರ್ಡಿ, ತಾ:ಜಿ: ಬೆಳಗಾವಿ.
ಮೋ.ನಂ. 9481738018

## ಜ.17ರಂದು ಉದ್ಘಾಟನಾ ಸಮಾರಂಭ

**ಉದ್ಘಾಟನೆಗೊಳ್ಳಲಿರುವ ಕಾಮಗಾರಿಗಳು:**

- -100 ಎಕರೆ ವಿಸ್ತೀರ್ಣದಲ್ಲಿ ನಿರ್ಮಾಣವಾಗಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆ.
- -ಸಂಗೊಳ್ಳಿ ರಾಯಣ್ಣನ ಬಾಲ್ಯದಿಂದ ಬಲಿದಾನವರೆಗಿನ ಇತಿಹಾಸ ಸಾರುವ" ಸಂಗೊಳ್ಳಿ ರಾಯಣ್ಣ ಶೌರ್ಯಭೂಮಿ"(ಶಿಲ್ಪವನ)
- -ಸಂಗೊಳ್ಳಿ ರಾಯಣ್ಣ ಸ್ಮಾರಕಭವನ ಹಾಗೂ ಭೋಜನಾಲಯ

ಬೆಳಗಾವಿ: ಜಿಲ್ಲೆಯ ಬೈಲಹೊಂಗಲ ತಾಲೂಕು ಸಂಗೊಳ್ಳಿಯಲ್ಲಿ ಜ.17ರಂದು ಬುಧವಾರ ಮಧ್ಯಾಹ್ನ 12ಕ್ಕೆ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆ, ಸಂಗೊಳ್ಳಿ ರಾಯಣ್ಣ ಶೌರ್ಯಭೂಮಿ(ಶಿಲ್ಪವನ) ಹಾಗೂ ಸಂಗೊಳ್ಳಿ ರಾಯಣ್ಣ ಸ್ಮಾರಕಭವನ ಮತ್ತು ಭೋಜನಾಲಯ ಉದ್ಘಾಟನಾ ಸಮಾರಂಭ ಆಯೋಜಿಸಲಾಗಿದೆ.

ಬೆಳಗಾವಿ ಜಿಲ್ಲಾಡಳಿತ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ಈ ಸಮಾರಂಭ ನಡೆಯಲಿದೆ.

ಜಗದ್ಗುರು ಶ್ರೀ ರೇವಣಸಿದ್ದೇಶ್ವರ ಸಿಂಹಾಸನಾಧೀಶ್ವರ ಪ.ಪೂ. ಶ್ರೀ ಶ್ರೀ ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳು ಗುರುಪೀಠ, ಶ್ರೀ ಕ್ಷೇತ್ರ ಕಾಗಿನೆಲೆ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸುವರು.

ಸಂಗೊಳ್ಳಿಯ ಹಿರೇಮಠದ ಶ್ರೀ ಗುರು ಸಿದ್ಧಲಿಂಗೇಶ್ವರ ಸಂಸ್ಥಾನದ ಷ.ಭ್ರ. ಗುರುಲಿಂಗ ಶಿವಾಚಾರ್ಯ ಮಾಹಾಸ್ವಾಮಿಗಳು ಪಾವನ ಸಾನ್ನಿಧ್ಯ ವಹಿಸುವರು.

ಮುಖ್ಯಮಂತ್ರಿಗಳು ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಶ್ರೀ ಸಿದ್ಧರಾಮಯ್ಯ ಸಮಾರಂಭ ಉದ್ಘಾಟಿಸುವರು.

ಲೋಕೋಪಯೋಗಿ ಹಾಗೂ ಬೆಳಗಾವಿ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ, ನಗರಾಭಿವೃದ್ಧಿ ಮತ್ತು ನಗರ ಯೋಜನಾ ಇಲಾಖೆ ಸಚಿವ ಸುರೇಶ ಬಿ.ಎಸ್ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಅಧ್ಯಕ್ಷತೆ ವಹಿಸುವರು.

ರಾಮದುರ್ಗ ಶಾಸಕ ಅಶೋಕ ಪಟ್ಟಣ, ಕರ್ನಾಟಕ ಸರಕಾರದ ಹೊಸದಿಲ್ಲಿ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ, ಪ್ರತಿಪಕ್ಷದ ಮುಖ್ಯ ಸಚೇತಕ ಹಾಗೂ ಕುಷ್ಟಗಿ ಶಾಸಕ ದೊಡ್ಡನಗೌಡ ಪಾಟೀಲ ವಿಶೇಷ ಆಮಂತ್ರಿತರಾಗಿರುವರು.

ಸಂಸದರಾದ ಸನಂತಕುಮಾರ ಹೆಗಡೆ, ಅಣ್ಣಾಸಾಹೇಬ ಜೊಲ್ಲೆ, ಈರಣ್ಣ ಕಡಾಡಿ, ಮಂಗಳಾ ಸುರೇಶ ಅಂಗಡಿ, ಸಂಗೊಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರೂಪಾ ಸುರೇಶ ಚವಡಿ ಹಾಗೂ ಉಪಾಧ್ಯಕ್ಷ ಫಕೀರಪ್ಪ ಗಿರಿಮಲ್ಲಪ್ಪ ಕುರಿ ,ಜಿಲ್ಲೆಯ ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಗೌರವ ಉಪಸ್ಥಿತರಿರುವರು ಎಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಹಾಗೂ ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳಾದ ಹೊರಪೇಟೆ ಮಲ್ಲೇಶಪ್ಪ ತಿಳಿಸಿದ್ದಾರೆ.

ವಿಶೇಷ ಆಹ್ವಾನಿತರು:

ವಿಧಾನ ಪರಿಷತ್ ಸದಸ್ಯ ಅಡಗೂರು ಎಚ್.ವಿಶ್ವನಾಥ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಧ್ಯಯನ ಸಮಿತಿ ಅಧ್ಯಕ್ಷರು ಹಾಗೂ ಮಾಜಿ ಸಚಿವ ಎಚ್.ಎಂ. ರೇವಣ್ಣ, ಪರಿಷತ್ ಸದಸ್ಯ ಎಂ.ಟಿ.ಬಿ.ನಾಗರಾಜ, ಶಾಸಕರಾದ ಬಸವರಾಜ ಶಿವಣ್ಣನವರ, ಬೈರತಿ ಬಸವರಾಜ,,ರಘುನಾಥರಾವ್ ಮಲ್ಕಾಪುರೆ, ಬಿ.ಜಿ.ಗೋವಿಂದಪ್ಪ, ರಾಘವೇಂದ್ರ ಹಿಟ್ನಾಳ, ಸಿ.ಬಿ.ಸುರೇಶ ಬಾಬು, ಬಿ.ಎಚ್.ಶ್ರೀನಿವಾಸ ,ಕೆ.ಎ.ತಿಪ್ಪೇಸ್ವಾಮಿ,ಆನಂದ ಕೆ.ಎಸ್, ಮಂಜುನಾಥ, ಡಿ.ರವಿಶಂಕರ್, ಭೀಮಸೇನ ಬಿ.ಚಿಮ್ಮನಕಟ್ಟಿ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಇದೇ ವೇಳೆ ಬೆಳಗಾವಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್, ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟಣ್ಣವರ, ಜಿಲ್ಲಾಧಿಕಾರಿ ನಿತೇಶ ಪಾಟೀಲ, ಜಿಪಂ ಸಿಇಒ ಹರ್ಷಲ್ ಭೋಯರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ತುಳಸಿ ಮದ್ದಿನೇನಿ, ಉತ್ತರವಲಯ ಐಜಿಪಿ ವಿಕಾಶಕುಮಾರ ವಿಕಾಶ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಎಸ್. ಗುಳೇದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆಯುಕ್ತರು ಕೆ.ಎ.ದಯಾನಂದ ಉಪಸ್ಥಿತರಿರುವರು.

## ವಿದ್ಯುತ್ ಬಳಕೆದಾರರು ಸುರಕ್ಷತೆಗೆ ಆದ್ಯತೆ ನೀಡಲಿ; ಹೆಸ್ಕಾಂ ನೀಡುವ ಗ್ರಾಹಕ ಸುರಕ್ಷಾ ಕ್ರಮಗಳನ್ನು ತಪ್ಪದೆ ಅನುಸರಿಸಬೇಕು: ಕಾರ್ಯಪಾಲಕ ಅಭಿಯಂತರ ಎಂ.ಎಂ.ನದಾಫ್

ಧಾರವಾಡ: ವಿದ್ಯುತ್ ಬಳಕೆದಾರರು ಸುರಕ್ಷತೆಗೆ ಹೆಚ್ಚು ಒತ್ತು ನೀಡಬೇಕು ಮತ್ತು ಗ್ರಾಹಕ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು. ಹೆಸ್ಕಾಂ ಗ್ರಾಹಕರ ಜಾಗೃತಿಗಾಗಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು, ಕುಂದುಕೊರತೆಗಳ ಸೇವೆಗಳನ್ನು ಕಾಲಕಾಲಕ್ಕೆ ಆಯೋಜಿಸುತ್ತಿದೆ ಎಂದು ಹೆಸ್ಕಾಂ ಧಾರವಾಡ ನಗರ ವಿಭಾಗದ ಕಾರ್ಯಪಾಲಕ ಅಭಿಯಂತರ ಎಂ.ಎಂ.ನದಾಫ್ ಅವರು ಹೇಳಿದರು.

ಅವರು ಧಾರವಾಡ ಮಾಳಮಡ್ಡಿಯ ಕೆಇ ಬೋರ್ಡ ಸೆಂಟ್ರಲ್ ಸ್ಕೂಲ್ದಲ್ಲಿ ಹೆಸ್ಕಾಂ ನಗರ ವಿಭಾಗದಿಂದ ಆಯೋಜಿಸಿದ್ದ, ವಿದ್ಯುತ್ ಸುರಕ್ಷತಾ ಕ್ರಮಗಳ ಕುರಿತು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಗ್ರಾಹಕರ ಕುಂದು ಕೊರತೆಗಳನ್ನು ಆಲಿಸಲು ಧಾರವಾಡ ನಗರದ ಎಲ್ಲ ಹೆಸ್ಕಾಂ ಉಪವಿಭಾಗಗಳಲ್ಲಿ ಗ್ರಾಹಕರ ಸಭೆಗಳನ್ನು ಸಂಘಟಿಸಲಾಗುತ್ತಿದೆ. ಸಾರ್ವಜನಿಕರ ದೂರುಗಳ ಹಿನ್ನೆಲೆಯಲ್ಲಿ ತಕ್ಷಣ ಸ್ಪಂದಿಸಿ, ಸಮಸ್ಯೆಗಳನ್ನು ಪರಿಹರಿಸಲಾಗುತ್ತಿದೆ. ವಿದ್ಯುತ್ ಅವಗಡಗಳು ಸಂಭವಿಸುವ ಸ್ಥಳಗಳನ್ನು ಗುರುತಿಸಿ ಮಾಹಿತಿ ನೀಡಿದರೆ ಹೆಸ್ಕಾಂ ಸೂಕ್ತ ಕ್ರಮವಹಿಸುತ್ತದೆ ಎಂದು ಅವರು ಹೇಳಿದರು.

ವಿದ್ಯುತ್ ಬಳಕೆಯಲ್ಲಿ ಪಾಲಕರು, ಮಕ್ಕಳು ಜಾಗೃತಿ ವಹಿಸಬೇಕು. ಹಳೆಯ ಮತ್ತು ದುರಸ್ತಿ ಇರುವ




ವಿದ್ಯುತ್ ಪರಿಕರಗಳನ್ನು ಬದಲಾಯಿಸಬೇಕು. ಕಾಲಕಾಲಕ್ಕೆ ವಿದ್ಯುತ್ ಬಿಲ್ ತುಂಬಬೇಕು. ಮತ್ತು ಡಿಜಿಟಲ್ ಮೂಲಕ ಹೆಸ್ಕಾಂ ಬಿಲ್ ಪಾವತಿಸಲು ಆಸಕ್ತಿವಹಿಸಬೇಕೆಂದು ಅವರು ಹೇಳಿದರು.

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಗೃಹ ಜ್ಯೋತಿ ಯೋಜನೆಯನ್ನು ಗ್ರಾಹಕರು ಸಮಪರ್ಕವಾಗಿ ಬಳಸಿಕೊಂಡು ಆರ್ಥಿಕವಾಗಿ ಸದುಪಯೋಗ ಮಾಡಿಕೊಳ್ಳಬೇಕು. ಅನಗತ್ಯವಾಗಿ ವಿದ್ಯುತ್ ಬಳಕೆಯನ್ನು ನಿಲ್ಲಿಸಬೇಕು. ವಿದ್ಯುತ್ ಸರಬರಾಜು ದುರುಪಯೋಗ ವಾಗದಂತೆ ವಿದ್ಯುತ್ ಜಾಗೃತ ದಳವು ನಿರಂತರ ನಿಗಾವಹಿಸಿದೆ ಎಂದು ಕಾರ್ಯಪಾಲಕ ಅಭಿಯಂತರ ಎಂ. ಎಂ.ನದಾಫ್ ಅವರು ಹೇಳಿದರು.

ಕೆ.ಇ.ಬೋರ್ಡ ಸೆಂಟ್ರಲ್ ಸ್ಕೂಲ್ನ ಉಪ ಪ್ರಾಚಾರ್ಯ ಅಶ್ವೀನಕುಮಾರ ಅಧ್ಯಕ್ಷತೆ ವಹಿಸಿದ್ದರು. ಧಾರವಾಡ ನಗರ ಹೆಸ್ಕಾಂ ಉಪವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮಂಜುನಾಥ ಟಿಂಗರಿಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕಿ ಮಮತಾ ದಾವಣಗೇರೆ ಸ್ವಾಗತಿಸಿದರು. ಹೆಸ್ಕಾಂ ಶಾಖಾಧಿಕಾರಿ ಮಹೇಶ ನಾಗನೂರ ವಂದಿಸಿದರು. ಕಾರ್ಯಕ್ರಮವನ್ನು ಪ್ರಾಣೇಶ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು.

ವಿದ್ಯುತ್ ಸುರಕ್ಷತಾ ಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ಪ್ರಶ್ನೆಗಳ ಮುಖಾಂತರ ಮನಮುಟ್ಟುವಂತೆ ಕಾರ್ಯಕ್ರಮವನ್ನು ನಡೆಸಲಾಯಿತು ಮತ್ತು ವಿದ್ಯುತ್ ಸುರಕ್ಷತಾ ಕ್ರಮದ ಕುರಿತು ಪ್ರಭಂದ ಸ್ಪರ್ದೆಯನ್ನು ಆಯೋಜಿಸಿ, ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕೆ.ಇ.ಬೋರ್ಡ ಸೆಂಟ್ರಲ್ ಸ್ಕೂಲ್ನ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಶಾಲಾ ಸಿಬ್ಬಂದಿಗಳು ಭಾಗವಹಿಸಿದ್ದರು. ಪ್ರಾಂಶುಪಾಲಕರ ಸಹಯೋಗ ದೊಂದಿಗೆ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಅದೇ ರೀತಿ ಧಾರವಾಡ ನಗರ ವಿಭಾಗದ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಶಾಲೆ, ತಡಸಿನಕೊಪ್ಪ ಮತ್ತು ಸತ್ತೂರ ಗ್ರಾಮದಲ್ಲಿ ಇದೇ ರೀತಿ ಕಾರ್ಯಕ್ರಮವನ್ನು ನಡೆಸಲಾಯಿತು.

## ಪ್ರಿನ್ಸಿಪಾಲ್ರ ಮೊಬೈಲ್ ಕದ್ದ ಖದೀಮರು

ಗದಗ: ಪ್ರಾಂಶುಪಾಲರ ಮೊಬೈಲ್ ಕಳ್ಳತನ ಮಾಡಿದ್ದಲ್ಲದೇ ದುಷ್ಕರ್ಮಿಗಳು ಅದೇ ಮೊಬೈಲ್ನ ಆನ್ಲೈನ್ ಆ್ಯಪ್ ಮೂಲಕ 1.40 ಲಕ್ಷ ದುಡ್ಡು ವರ್ಗಾವಣೆ ಮಾಡಿಕೊಂಡಿರುವ ಘಟನೆ ನರಗುಂದ ಪಟ್ಟಣದ ಬಸ್ ನಿಲ್ದಾಣದಲ್ಲಿ ನಡೆದಿದೆ.

ಪ್ರಾಂಶುಪಾಲರಾದ ಶ್ರೀಕಾಂತ ಕೃಷ್ಣಾಜಿ ಜೋಷಿ ಅವರು ಎಂದಿನಂತೆ ಕಾಲೇಜ್ಗೆ ತೆರಳುತ್ತಿದ್ದರು. ಈ ವೇಳೆ ನರಗುಂದ ಪಟ್ಟಣದ ಬಸ್ ನಿಲ್ದಾಣದಲ್ಲಿ ದುಷ್ಕರ್ಮಿಗಳು 20 ಸಾವಿರ ಮೌಲ್ಯದ ಮೊಬೈಲ್ ಅನ್ನು ಪ್ರಾಂಶುಪಾಲರ ಜೇಬಿನಿಂದ ಕಳ್ಳತನ ಮಾಡಿದ್ದಾರೆ. ಬಳಿಕ ಮೊಬೈಲ್ನಲ್ಲಿದ್ದ ಎಸ್ಬಿಐ ಖಾತೆಯ ಯುಪಿಐ ಬಳಸಿಕೊಂಡು ಬರೋಬ್ಬರಿ 1 ಲಕ್ಷದ 40 ಸಾವಿರ ರೂಗಳನ್ನ ತಮ್ಮ ಅಕೌಂಟ್ಗೆ ವರ್ಗಾವಣೆ ಮಾಡಿಕೊಂಡಿದ್ದಾರೆ.

ಮೊದಲು 75 ಸಾವಿರ ನಂತರ 50 ಸಾವಿರ ಹಾಗೂ 15 ಸಾವಿರ ಎಂಬಂತೆ ಒಟ್ಟು ಮೂರು ಹಂತದಲ್ಲಿ ಹಣ ವರ್ಗಾವಣೆ ಮಾಡಿಕೊಂಡಿದ್ದಾರೆ. ಪ್ರಾಂಶುಪಾಲರ ಎಸ್ಬಿಐ ಖಾತೆಯಿಂದ ಈ ಹಣವನ್ನು ಖದೀಮರು ಅಕೌಂಟ್ಗೆ ಹಾಕಿಕೊಂಡಿದ್ದಾರೆ. ಸದ್ಯ ಈ ಸಂಬಂಧ ಆರೋಪಿಗಳನ್ನ ಪತ್ತೆ ಹಚ್ಚಿ ಹಣ ವಾಪಸ್ ಕೊಡಿಸುವಂತೆ ನರಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿದ್ದಾರೆ.


## ರೌಡಿ ಶೀಟರ್ ಹತ್ಯೆ: ಪಿಎಸ್‌ಐ ಅಮಾನತು: ಎಸ್.ಪಿ ನಡೆಗೆ ಪ್ರಶಂಸೆ



ಕುಣಿಗಲ್: ರೌಡಿಶೀಟರ್ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯ ಲೋಪ ಆರೋಪದ ಮೇಲೆ ಹುಲಿಯೂರುದುರ್ಗ ಪಿಎಸ್ಐ ಸುನೀಲ್ ಕುಮಾರ್ ಅವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ಅಮಾನತು ಮಾಡಿ ಆದೇಶಿಸಿದ್ದಾರೆ.

ಹಳೆ ದ್ವೇಷದ ಹಿನ್ನೆಲೆಯಲ್ಲಿ ರೌಡಿಶೀಟರ್ ಆಟೊ ರಾಮ ಮತ್ತು ಆತನ ಸಹಚರರು ಕಳೆದ ಡಿ.30ರಂದು ರಾತ್ರಿ ಮತ್ತೊಬ್ಬ ರೌಡಿ ಶೀಟರ್ ಸುರೇಶ್ ಅಲಿಯಾಸ್ ಕ್ಯಾಪ್ಟನ್ ಸೂರಿ ಚಲಿಸುತ್ತಿದ್ದ ಕಾರಿಗೆ ಮತ್ತೊಂದು ಕಾರಿನಿಂದ ಡಿಕ್ಕಿ ಹೊಡೆದು, ಕುಣಿಗಲ್ ತಾಲೂಕಿನ ಹುಲಿಯೂರುದುರ್ಗ ಕಂಪಲಪುರ ಬಳಿ ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಹತ್ಯೆಗೈದಿದ್ದರು.

## ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ



ಧಾರವಾಡ: ಧಾರವಾಡ ಜಿಲ್ಲೆಯ ತಿಮ್ಮಾಪೂರ ನಿವಾಸಿಯಾದ 26 ವರ್ಷದ ವಿರೇಶ ತಂದೆ ಬಸಪ್ಪ ಅಮಟೂರ ಎಂಬ ವ್ಯಕ್ತಿ ಡಿಸೆಂಬರ್ 31, 2023 ರಂದು ಬೆಳಿಗ್ಗೆ 10 ಗಂಟೆಗೆ ತಮ್ಮ ವಾಸದ ಮನೆಯಿಂದ ಹುಬ್ಬಳ್ಳಿಗೆ ಕೆಲಸ ಹುಡಕಿಕೊಂಡು ಹೋದವನು ಮರಳಿ ಎಲ್ಲಿಗೋ ಹೋಗಿರುತ್ತಾರೆ ಎಂದು ಗರಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಎತ್ತರ 4 ಫುಟ 9 ಇಂಚು, ನೀಲಿ ಬಣ್ಣದ ಟಿ ಶರ್ಟ, ಕಪ್ಪು ಬಣ್ಣದ ಪ್ಯಾಂಟ ಧರಿಸಿರುತ್ತಾರೆ. ಕನ್ನಡ. ಹಿಂದಿ ಭಾಗಫ ಮಾತನಾಡುತ್ತಾರೆ. ತಿಮ್ಮಾಪೂರದ ವ್ಯಕ್ತಿಯ ಸುಳಿವು ಸಿಕ್ಕವರು ಗರಗ ಪೊಲೀಸ್ ಠಾಣೆ- 0836-2233217, 9480804347, ಸಿಪಿಐ ಗರಗ ವೃತ್ತ-0836-2233213, 9480804330, ಹಾಗೂ ಧಾರವಾಡ ಕಂಟ್ರೋಲ್ ರೂಂ ನಂಬರ್-0836-2233201 ಸಂಪರ್ಕಿಸಿ ಮಾಹಿತಿ ನೀಡಬಹುದು.

**ಕರ್ನಾಟಕ ಸರ್ಕಾರ**
**ಕಾರ್ಯನಿರ್ವಾಹಕ ಅಭಿಯಂತರರು**
**ಪಂಚಾಯತ್ ರಾಜ್ ಇಂಜಿನೀರಿಂಗ್ ವಿಭಾಗ, ಬೆಳಗಾವಿ**

ಕ್ರ.ಸಂ:ಪಂರಾಇಂ/ವಿಬೆ/ಪಿಬಿ-1/ಟೆಂಡರ್-23/2023-24/3138 ದಿನಾಂಕ: 12-01-2024

**ಗುತ್ತಿಗೆ ಆಹ್ವಾನ ಪ್ರಕಟಣೆ (ಇ-ಪ್ರೊಕ್ಯೂರ್ಮೆಂಟ್)**

ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಬೆಳಗಾವಿ ಅಡಿಯಲ್ಲಿ ಐಟಂವಾರು ಗುತ್ತಿಗೆಗಳನ್ನು ಇ-ಪ್ರೊಕ್ಯೂರ್ಮೆಂಟ್ ವೇದಿಕೆ ಮೂಲಕ ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ಚಾಲ್ತಿ ನೋಂದಾಯಿತ ಗುತ್ತಿಗೆದಾರರಿಗಾಗಿ ಸ್ಟ್ಯಾಂಡರ್ಡ ಟೆಂಡರ ಡಾಕ್ಯೂಮೆಂಟ್ ಕೆ.ಡಬ್ಲ್ಯೂ-1&2 ರಲ್ಲಿ ಒಟ್ಟು 09 ಕಾಮಗಾರಿಯ ಟೆಂಡರ್ ಗುತ್ತಿಗೆಯನ್ನು ಕರೆಯಲಾಗಿದ್ದು ಗರಿಷ್ಠ ಹಾಗೂ ಕನಿಷ್ಠ ಅಂದಾಜು ಮೊತ್ತ ಅನುಕ್ರಮವಾಗಿ ರೂ. 30.00 ಹಾಗೂ ರೂ. 8.00 ಲಕ್ಷಗಳು ಗರಿಷ್ಠ ಹಾಗೂ ಕನಿಷ್ಠ ಮುಂಗಡ ಠೇವಣಿ ಮೊತ್ತ ಅನುಕ್ರಮವಾಗಿ ರೂ. 60,000 ಹಾಗೂ 20,000 ಗಳು ಇರುತ್ತದೆ. ಆಕ್ಷೇಪಣೆಗಳಿದ್ದಲ್ಲಿ ಖುದ್ದಾಗಿ ಕಚೇರಿಗೆ ಹಾಜರಾಗಿ ಸಲ್ಲಿಸುವ ಕೊನೆಯ ದಿನಾಂಕ: 19-01-2023 ಸಂಜೆ 17:28 ರೊಳಗಾಗಿ, ಗುತ್ತಿಗೆದಾರರಿಂದ ಅರ್ಜಿಗಳನ್ನು ಆನ್ ಲೈನ್ ಮೂಲಕ ಮನವಿ ಮಾಡಿಕೊಳ್ಳುವ ಕೊನೆಯ ದಿನಾಂಕ: 20-01-2023 ಸಂಜೆ 17.30 ಗಂಟೆಯವರೆಗೆ, ತಾಂತ್ರಿಕ ಬಿಡ್‌ನ್ನು ತೆರೆಯುವ ದಿನಾಂಕ: 22-01-2023. ಸಂಜೆ 11:00 ಗಂಟೆಯ ನಂತರ ಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ: 23-01-2024 ರಂದು 11.30 ಗಂಟೆಗೆ ಇರುತ್ತದೆ. ಪರಿಷ್ಕೃತ ವೇಳಾ ಪಟ್ಟಿ/ತಿದ್ದುಪಡಿಗಳು/ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಹಾಗೂ ಅಂತರ್ ಜಾಲದ ಮೂಲಕ ವೆಬ್‌ಸೈಟ್ ವಿಳಾಸ www.kppp.karnataka.gov.in ರಲ್ಲಿ ಪಡೆಯಬಹುದು.

ಸಹಿ
**ಕಾರ್ಯನಿರ್ವಾಹಕ ಅಭಿಯಂತರು,**
**ಪಂ. ರಾ. ಇಂ. ವಿಭಾಗ, ಬೆಳಗಾವಿ.**

## ರಾಷ್ಟ್ರೀಯ ಉಪಶಮನ ಆರೈಕೆ (ಪ್ಯಾಲೆಟಿವ್ ಕೇರ್) ಕಾರ್ಯಕ್ರಮದಡಿ ಹಾಸಿಗೆ ಹಿಡಿದ ಹಿರಿಯ ನಾಗರಿಕರ ಸೇವೆಯನ್ನು ಮನೆಮಟ್ಟದಲ್ಲಿಯೇ ಪಡೆದುಕೊಳ್ಳಿ: ಡಾ. ವೈ.ರಮೇಶ್ ಬಾಬು

ಬಳ್ಳಾರಿ: ಹಾಸಿಗೆ ಹಿಡಿದು ಆರೈಕೆಗಾಗಿ ಇನ್ನೊಬ್ಬರ ಸಹಾಯದ ಅಗತ್ಯತೆ ಇರುವ ಕುಟುಂಬದ ಹಿರಿಯ ಸದಸ್ಯರಿಗೆ ಮಾನಸಿಕವಾಗಿ ಬೆಂಬಲ ನೀಡುವ ಕಾರ್ಯವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸರ್ಕಾರದ ಮಾರ್ಗದರ್ಶನದ ಅಡಿಯಲ್ಲಿ ರಾಷ್ಟ್ರೀಯ ಉಪಶಮನ ಆರೈಕೆ (ಪ್ಯಾಲೆಟಿವ್ ಕೇರ್) ಕಾರ್ಯಕ್ರಮದ ಮೂಲಕ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಸೇವೆಯನ್ನು ನೀಡುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದು ಕುಟುಂಬದ ಹಿರಿಯ ಸದಸ್ಯರ ಆರೈಕೆಯ ಸಹಾಯ ಪಡೆಯಿರಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅಧಿಕಾರಿ ಡಾ.ವೈ.ರಮೇಶ್ ಬಾಬು ಅವರು ತಿಳಿಸಿದ್ದಾರೆ.



ರಾಷ್ಟ್ರೀಯ ಪೆಲೆಟಿವ್ ಕೇರ್ ಕಾರ್ಯಕ್ರಮ ದಡಿಯಲ್ಲಿ ಜಿಲ್ಲೆಯ 97 ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಢಲ್ಲಿ ಕರ್ತವ್ಯ ನಿರ್ವಹಿಸುವ ಸಮುದಾಯ ಆರೋಗ್ಯ ಅಧಿಕಾರಿ (ಸಿಹೆಚ್‌ಓ) ರವರ ಮೂಲಕ ಮನೆ ಭೇಟಿ ಮಾಡಲಿದ್ದಾರೆ.

ಹಾಸಿಗೆ ಹಿಡಿದ ಕುಟುಂಬದ ಹಿರಿಯ ಸದಸ್ಯರಿಗೆ ಸ್ಥಳದಲ್ಲಿಯೇ ರಕ್ತದೊತ್ತಡ ಪರೀಕ್ಷೆ, ಸಕ್ಕರೆ ಕಾಯಿಲೆ ಪರೀಕ್ಷೆ ಕೈಗೊಳ್ಳುವ ಮೂಲಕ ಅಗತ್ಯ ಇರುವ ಔಷಧೋಪಚಾರವನ್ನು ಮಾಡಲಾಗುವುದು ಮತ್ತು ಫಿಜಿಯೋಥೆರಫಿ ಅವಶ್ಯಕತೆ ಇರುವವರಿಗೆ ಕುಟುಂಬದ ಸದಸ್ಯರ ಸಮ್ಮತದೊಂದಿಗೆ ಬಳ್ಳಾರಿ ಜಿಲ್ಲಾ ಆಸ್ಪತ್ರೆಯಲ್ಲಿ ಎನ್.ಸಿ.ಡಿ ವಿಭಾಗದ ತಜ್ಞ ವೈದ್ಯ ಡಾ. ಫಣಿರಾಜ್ ಅವರಿಂದ ಸೇವೆಯನ್ನು ಸಹ ನೀಡಲಾಗುತ್ತಿದೆ.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಹಾಗೂ ಜಿಲ್ಲಾ ಎನ್.ಸಿ.ಡಿ ಕಾರ್ಯಕ್ರಮ ಸಂಯೋಜಕರಾದ ಡಾ.ಜಬೀನ್ ತಾಜ್ ಅವರ ಮೇಲ್ವಿಚಾರಣೆಯೊಂದಿಗೆ ಜಿಲ್ಲೆಯಲ್ಲಿ ಕಾರ್ಯಕ್ರಮದ ಅನುಷ್ಠಾನವನ್ನು ಪರಿಣಾಮಕಾರಿಯಾಗಿ ಮಾಡಲಾಗುತ್ತಿದ್ದು, ಕುಟುಂಬದ ಸದಸ್ಯರಲ್ಲಿ ದೀರ್ಘಾವಧಿ ಕಾಯಿಲೆಗಳಿಂದ ಹಾಗೂ ಅಂಗಾಂಗ ವೈಫಲ್ಯದಿಂದ ಬಳಲುತ್ತಿರುವವರಿಗೆ ಮತ್ತು ಹಾಸಿಗೆ ಹಿಡಿದ ಮಾನಸಿಕ ರೋಗಿಗಳಿಗೂ ಸಹ ಆರೈಕೆ ಮಾಡಲಾಗುತ್ತಿದೆ.

ಸಾರ್ವಜನಿಕರು ಈ ದಿಶೆಯಲ್ಲಿ ಹತ್ತಿರದ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಡಿಹೆಚ್‌ಓ ಡಾ.ವೈ.ರಮೇಶ್ ಬಾಬು ಅವರು ವಿನಂತಿಸಿದ್ದಾರೆ.

## ಸಂಗೊಳ್ಳಿ ಉತ್ಸವ: ಸಿದ್ಧತೆ ಪರಿಶೀಲನೆ

# ಸಂಗೊಳ್ಳಿ ರಾಯಣ್ಣ ಶೌರ್ಯಭೂಮಿ; ದೇಶಪ್ರೇಮಕ್ಕೆ ಸ್ಫೂರ್ತಿ: ಡಾ.ಕೆ.ಧರಣಿದೇವಿ ಮಾಲಗತ್ತಿ

ಬೆಳಗಾವಿ: ಇದೇ ಜ.17 ಹಾಗೂ 18 ರಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ ನಡೆಯಲಿರುವ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಡಾ.ಕೆ ಧರಣಿದೇವಿ ಮಾಲಗತ್ತಿ ಅವರು ಸಂಗೊಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಿದರು.

ನಂದಗಡದಿಂದ ಬೆಳಗಾವಿ ನಗರಕ್ಕೆ ಆಗಮಿಸಿದ ಸಂಗೊಳ್ಳಿ ರಾಯಣ್ಣ ವೀರಜ್ಯೋತಿಯನ್ನು ಸ್ವಾಗತಿಸಿದ ಬಳಿಕ ಅವರು ಸಂಗೊಳ್ಳಿ ಗ್ರಾಮಕ್ಕೆ ಭೇಟಿ ನೀಡಿದರು.



ಸರಕಾರವು ಈ ಬಾರಿ ಸಂಗೊಳ್ಳಿ ಉತ್ಸವಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೂಲಕ 1.50 ಕೋಟಿ ರೂಪಾಯಿ ಅನುದಾನ ನೀಡಿದ್ದು, ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಉತ್ಸವ ಆಚರಿಸಲಾಗುವುದು. ಇದಕ್ಕೆ ಸಂಬಂಧಿಸಿದಂತೆ ಸಿದ್ಧತೆಗಳು ನಡೆದಿವೆ ಎಂದು ತಿಳಿಸಿದರು.

ಗ್ರಾಮದ ಶಾಲೆಯ ಬಳಿ ಉತ್ಸವದ ಬೃಹತ್ ವೇದಿಕೆ ನಿರ್ಮಾಣ ಕಾರ್ಯವನ್ನು ವೀಕ್ಷಿಸಿದರು.

ಕಾರ್ಯಕ್ರಮದಲ್ಲಿ ಸಾವಿರಾರು ಜನರು ಭಾಗವಹಿಸುವುದರಿಂದ ಕುಡಿಯುವ ನೀರು, ಮೊಬೈಲ್ ಶೌಚಾಲಯ, ಪಾರ್ಕಿಂಗ್ ಮತ್ತಿತರ ಸೌಕರ್ಯಗಳನ್ನು ಕೂಡ ಜಿಲ್ಲಾಡಳಿತದ ವತಿಯಿಂದ ಒದಗಿಸಲಾಗುತ್ತಿದೆ ಎಂದು ಧರಣಿದೇವಿ ಹೇಳಿದರು.

**ರಾಯಣ್ಣನ ಜೀವನ ಯುವಕರಿಗೆ ಮಾದರಿ:**

ಉತ್ಸವದ ಸಂದರ್ಭದಲ್ಲಿ ಸಂಗೊಳ್ಳಿ ರಾಯಣ್ಣ ಶೌರ್ಯಭೂಮಿ(ಶಿಲ್ಪವನ) ಯನ್ನು ಕೂಡ ಮುಖ್ಯ ಮಂತ್ರಿಗಳು ಲೋಕಾರ್ಪಣೆ ಮಾಡಲಿದ್ದಾರೆ.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ದೇಶಪ್ರೇಮ, ಜೀವನಚರಿತ್ರೆ ಹಾಗೂ ಶೌರ್ಯವನ್ನು ಬಿಂಬಿಸುವ ಮಾಹಿತಿಯನ್ನು ಈ ವನದಲ್ಲಿ ಅಚ್ಚುಕಟ್ಟಾಗಿ ಪ್ರದರ್ಶಿಸಲಾಗಿದೆ. ಯುವ ಸಮುದಾಯಕ್ಕೆ ಸ್ಪೂರ್ತಿಯಾಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಡಾ.ಕೆ.ಧರಣಿದೇವಿ ಮಾಲಗತ್ತಿ ಹೇಳಿದರು.

ಇದಕ್ಕೂ ಮುಂಚೆ ಗ್ರಾಮದಲ್ಲಿನ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಅವರು ಮಾಲಾರ್ಪಣೆ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಕೆ.ಎಚ್. ಚನ್ನೂರ, ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಜ್ಞಾನ ವೃದ್ಧಿಗೆ ಶೈಕ್ಷಣಿಕ ಪ್ರವಾಸ ಅಗತ್ಯ

ಗೋಕಾಕ: ಮಕ್ಕಳಿಗೆ ರಾಜ್ಯದ ನೆಲ, ಜಲ, ಇತಿಹಾಸ, ಪರಂಪರೆ ಹಾಗೂ ಸಂಸ್ಕೃತಿಯನ್ನು ಪರಿಚಯಿಸಲು ಕರ್ನಾಟಕ ದರ್ಶನದಂತಹ ಶೈಕ್ಷಣಿಕ ಪ್ರವಾಸ ಮಹತ್ತರ ಪಾತ್ರ ವಹಿಸುತ್ತದೆ ಎಂದು ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ ಹೇಳಿದರು.

ಶುಕ್ರವಾರ ಇಲ್ಲಿಯ ಎನ್ಎಸ್ಎಫ್ ಕಾರ್ಯಾಲಯದ ಆವರಣದಲ್ಲಿ ಮೂಡಲಗಿ ವಲಯದ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಹಮ್ಮಿಕೊಂಡ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಕ್ಕಳಲ್ಲಿ ಉತ್ತಮ ಪರಿಸರ, ವಾತಾವರಣವನ್ನು ನಿರ್ಮಿಸುವಲ್ಲಿ ಶೈಕ್ಷಣಿಕ ಪ್ರವಾಸ ಉತ್ತಮ ಅಡಿಪಾಯವಾಗಿದೆ ಎಂದು ಹೇಳಿದರು.



ಮಕ್ಕಳಲ್ಲಿ ಐತಿಹಾಸಿಕ ಪ್ರಜ್ಞೆ ಮೂಡಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತದೆ. ಜೊತೆಗೆ ಭೌಗೋಳಿಕತೆಗೆ ಪ್ರವಾಸಗಳು ಮಕ್ಕಳಿಗೆ ಸಹಕಾರಿಯಾಗುತ್ತದೆ. ಮಕ್ಕಳ ಉಜ್ವಲ ಭವಿಷ್ಯವನ್ನು ಮನಗಂಡು ಶಿಕ್ಷಣ ಇಲಾಖೆಯು ಪ್ರತಿ ವರ್ಷ ಶೈಕ್ಷಣಿಕ ಪ್ರವಾಸವನ್ನು ಹಮ್ಮಿಕೊಳ್ಳುವ ಮೂಲಕ ಮಕ್ಕಳ ಜ್ಞಾನಾಭಿವೃದ್ಧಿಗೆ ಶ್ರಮಿಸುತ್ತಿದೆ ಎಂದು ಹೇಳಿದರು.

ಸರ್ವೋತ್ತಮ ಜಾರಕಿಹೊಳಿ ಅವರು ಸಾರಿಗೆಯ ಬಸ್ಸಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಕರ್ನಾಟಕ ದರ್ಶನ ಪ್ರವಾಸಕ್ಕೆ ಚಾಲನೆ ನೀಡಿ ಮಕ್ಕಳಿಗೆ ಶುಭ ಕೋರಿದರು.

ಮೂಡಲಗಿ ಬಿಇಓ ಅಜೀತ ಮನ್ನಿಕೇರಿ, ಅರಭಾವಿ ಶಾಸಕರ ಆಪ್ತ ಸಹಾಯಕ ಲಕ್ಕಪ್ಪ ಲೋಕುರಿ, ಮೂಡಲಗಿ

ಶಿಶು ಅಭಿವೃದ್ಧಿ ಅಧಿಕಾರಿ ಯಲ್ಲಪ್ಪ ಗದಾಡಿ, ಸಾರಿಗೆ ಅಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಕೀಲ ವೃತ್ತಿಗೆ ಮರಳಿದ ಮಾಜಿ ಸಚಿವ ಕಿಮ್ಮನೆ ರತ್ನಾಕರ್



ಶಿವಮೊಗ್ಗ: ಮಾಜಿ ಸಚಿವ ಕಿಮ್ಮನೆ ರತ್ನಾಕರ್ ವಕೀಲ ವೃತ್ತಿಗೆ ಮರಳಿದ್ದಾರೆ. ಬೆಂಗಳೂರಿನ ವಕೀಲ ಸಂಘದಲ್ಲಿ ವಕೀಲ ವೃತ್ತಿ ಮುಂದುವರೆಸುವ ಕುರಿತು ಪ್ರಮಾಣ ಪತ್ರ ಸಲ್ಲಿಸಿದ್ದು ರಾಜಕೀಯ ವಲಯದಲ್ಲಿ ಚರ್ಚೆ ಶುರುವಾಗಿದೆ.

ಸತತ ಎರಡು ವಿಧಾನಸಭಾ ಚುನಾವಣೆಯಲ್ಲಿ ಸೋತಿದ್ದ ಅವರಿಗೆ ಆರ್ಥಿಕ ಸಂಕಷ್ಟ ತಲೆದೋರಿತ್ತು. ಇದರಿಂದ ಹೊರಬರಲು ಹಳೆಯ ವೃತ್ತಿಗೆ ಮರಳಿದ್ದಾರೆ ಎಂದು ಆಪ್ತ ಮೂಲಗಳು ತಿಳಿಸಿವೆ. ಇದೇ ನನ್ನ ಕೊನೆ ಚುನಾವಣೆ ಎಂದಿದ್ದ ಅವರಿಗೆ ಮತದಾರ ಕೈ ಹಿಡಿಯಲಿಲ್ಲ. ಲೋಕಸಭಾ ಚುನಾವಣೆಗೆ ಆಕಾಂಕ್ಷಿ ಎಂದು ಹೇಳಿಕೊಳ್ಳದಿದ್ದರು ಅವರ ಹೆಸರು ಅಲ್ಲಲ್ಲಿ ಕೇಳಿ ಬರುತಿತ್ತು. ಶುಕ್ರವಾರ ಸಿಎಂ ಹಾದಿಯಾಗಿ ಸಚಿವ ಸಂಪುಟವೇ ಶಿವಮೊಗ್ಗದಲ್ಲಿ ಇರಲಿದ್ದು ಕಿಮ್ಮನೆ ಅವರ ಜತೆ ಮಾತುಕತೆ ನಡೆಸಲಿದ್ದಾರೆಯೇ ಕಾದು ನೋಡಬೇಕಿದೆ.

## ವಿದ್ಯಾರ್ಥಿನಿ ಮೇಲೆ ಲೈಂಗಿಕ ಕಿರುಕಳ ಎಸಗಿದ ಬಸ್ ಕ್ಲೀನರ್ ಅರೆಸ್ಟ್

ನೆಲಮಂಗಲ: ಶಾಲೆಗೆ ಹೋಗಿ ಬರುತ್ತಿದ್ದ ವಿದ್ಯಾರ್ಥಿನಿ ಮೇಲೆ ಖಾಸಗಿ ಬಸ್ ಕ್ಲೀನರ್ ಲೈಂಗಿಕ ಕಿರುಕಳ ಎಸಗಿದ ಪ್ರಕರಣ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ದಾಬಸ್ ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಪ್ರಕರಣ ಸಂಬಂಧ ಆರೋಪಿ ದೊಡ್ಡಬಳ್ಳಾಪುರದ ಆನಂದ್ (24) ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ವಾರದ ಹಿಂದೆ ಶಾಲೆಗೆ ಹೋಗಿದ್ದ ಬಾಲಕಿ ನಾಪತ್ತೆಯಾಗಿದ್ದಳು.


ಈ ಬಗ್ಗೆ ಪೋಷಕರು ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು. ಮೊಬೈಲ್ ಕರೆ ಆಧಾರದ ಮೇಲೆ ಯಲಹಂಕ ಬಳಿ ಬಾಡಿಗೆ ಮನೆಯಲ್ಲಿರಿಸಿದ್ದ 14 ವರ್ಷದ ಬಾಲಕಿಯನ್ನು ಪೊಲೀಸರು ರಕ್ಷಣೆ ಮಾಡಿದ್ದಾರೆ.

ಸಂತ್ರಸ್ತ ಬಾಲಕಿ ದಾಬಸ್ ಪೇಟೆಯಿಂದ ತ್ಯಾಮಗೊಂಡ್ಲುನಲ್ಲಿರುವ ಶಾಲೆಗೆ ದಿನನಿತ್ಯ ಖಾಸಗಿ ಬಸ್ನಲ್ಲಿ ಬಾಲಕಿ ಹೋಗಿ ಬರುತ್ತಿದ್ದಳು.



ದಿನನಿತ್ಯ ಖಾಸಗಿ ಬಸ್ ದಾಬಸ್ ಪೇಟೆ–ದೊಡ್ಡಬಳ್ಳಾಪುರ ಮಾರ್ಗವಾಗಿ ಬರುತ್ತಿದ್ದ ಬಸ್ನಲ್ಲಿ ಆರೋಪಿ ಕ್ಲೀನರ್ ಆಗಿ ಕೆಲಸ ಮಾಡುತ್ತಿದ್ದನು. 2021ರಲ್ಲಿ ಬ್ಯಾಡರಹಳ್ಳಿ ಠಾಣೆಯಲ್ಲಿ ಇದೇ ರೀತಿ ಪೋಕ್ಸೊ ಪ್ರಕರಣದಲ್ಲಿ ಮೂರು ವರ್ಷ ಶಿಕ್ಷೆ ಅನುಭವಿಸಿ ಜೈಲಿನಿಂದ ಬಿಡುಗಡೆಯಾಗಿದ್ದನು.

## ಬಳ್ಳಾರಿ ಮಹಾನಗರ ಪಾಲಿಕೆಯ ನೂತನ ಮಹಾಪೌರರಾಗಿ ಬಿ.ಶ್ವೇತಾ ಅಧಿಕಾರ ಸ್ವೀಕಾರ



ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆಯ ನೂತನ ಮಹಾಪೌರರಾಗಿ ಬಿ.ಶ್ವೇತಾ ಅವರು ಶುಕ್ರವಾರ ಅಧಿಕಾರ ಸ್ವೀಕಾರ ಮಾಡಿದರು.

ಮಹಾನಗರ ಪಾಲಿಕೆಯ ಮೇಯರ್ ಕಚೇರಿ ಸಭಾಂಗಣದಲ್ಲಿ ನೂತನ ಮೇಯರ್ ಆದ ಬಿ.ಶ್ವೇತಾ ಅವರು ದಾಖಲಾತಿಯಲ್ಲಿ ಸಹಿ ಹಾಕುವುದರ ಮೂಲಕ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್‌ಸಾಬ್ ಅವರು ಹೂ ಗುಚ್ಛ ನೀಡಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪಾಲಿಕೆಯ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಪಾಲಿಕೆಯ ಅಧಿಕಾರಿಗಳು ಹಾಜರಿದ್ದರು.

# 'ಮಹಾ' ಸರ್ಕಾರದ ವಿರುದ್ಧ ಸಿಡಿದೆದ್ದ ಕನ್ನಡಿಗರು

ಬೆಳಗಾವಿ: ಮಹಾರಾಷ್ಟ್ರ ಸರಕಾರದ ಮಹಾತ್ಮ ಜ್ಯೋತಿರಾವ್ ಪುಲೆ ಜನಾರೋಗ್ಯ ವಿಮೆ ಯೋಜನೆಯನ್ನು ಕರ್ನಾಟಕದಲ್ಲಿ ಜಾರಿಗೊಳಿಸಿದವರ ಮೇಲೆ ರಾಜದ್ರೋಹದಡಿ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ಈ ಯೋಜನೆಗೆ ತಡೆಯೊಡ್ಡಬೇಕು ಎಂದು ಒತ್ತಾಯಿಸಿ ಕನ್ನಡಿಗರು ಇದೀಗ ಮಹಾರಾಷ್ಟ್ರ ಸರ್ಕಾರದ ವಿರುದ್ಧ ಸಿಡಿದೆದ್ದಿದ್ದಾರೆ.

ಜಿಲ್ಲಾ ಕನ್ನಡ ಸಂಘಟನೆಗಳ ಕ್ರಿಯಾ ಸಮಿತಿ ಅಧ್ಯಕ್ಷ ಅಶೋಕ ಚಂದರಗಿ ಅವರ ನೇತೃತ್ವದಲ್ಲಿ ಪದಾಧಿಕಾರಿಗಳು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರಿಗೆ ಮನವಿ ಸಲ್ಲಿಸಿದ್ದಾರೆ. ಗಡಿ ವಿವಾದಕ್ಕೆ ಒಳಪಟ್ಟ ಕರ್ನಾಟಕದ ನಾಲ್ಕು ಜಿಲ್ಲೆಗಳ 865 ಹಳ್ಳಿಗಳು, ಪಟ್ಟಣಗಳಿಗೆ ಈ ವಿಮೆ ಯೋಜನೆ ರೂಪಿಸಲಾಗಿದೆ. ಬೆಳಗಾವಿ ನಗರದಲ್ಲಿ ಒಂದು ಸಹಾಯವಾಣಿ ಹಾಗೂ ನಾಲ್ಕು ಸೇವಾಕೇಂದ್ರ ಆರಂಭಿಸಲಾಗಿದೆ. ಒಂದು ರಾಜ್ಯ ಇನ್ನೊಂದು ರಾಜ್ಯದಲ್ಲಿ ಅನುಮತಿ ಇಲ್ಲದೆ ತನ್ನ ಯೋಜನೆಯನ್ನು ಜಾರಿಗೊಳಿಸುವುದು ಭಾರತದ ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದೆ. ಇಂತಹ ಚಟುವಟಿಕೆ ಕೈಗೊಳ್ಳುವವರ ವಿರುದ್ಧ ರಾಜದ್ರೋಹ ಕಾನೂನಿನಡಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.



ಭಾಷೆಯ ಆಧಾರದಲ್ಲಿ ಬೆಳಗಾವಿ ಗಡಿಭಾಗದ ಮರಾಠಿಗರನ್ನು ಸೆಳೆಯಲು ಈ ತಂತ್ರ ಅನುಸರಿಸಲಾಗಿದೆ. ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳ ಗಡಿ ವಿವಾದ ಸುಪ್ರೀಂ ಕೋರ್ಟ್ ನಲ್ಲಿದೆ. ವಿವಾದ ನ್ಯಾಯಾಲಯದಲ್ಲಿರುವಾಗ ಈ ಯೋಜನೆಯ ಸಂಖ್ಯೆಗಳನ್ನು ಬಳಸಲು ಮಹಾರಾಷ್ಟ್ರ ಸರಕಾರ ಹೊಂಚು ಹಾಕಿದೆ. ಕರ್ನಾಟಕದಲ್ಲಿನ ಮರಾಠಿಗರು ತಮ್ಮನ್ನು ಬೆಂಬಲಿಸುತ್ತಾರೆ ಎಂದು ನ್ಯಾಯಾಲಯದ ದಿಕ್ಕು ತಪ್ಪಿಸುವ ಸಾಧ್ಯತೆ ಇದೆ. ಯಾವುದೇ ಕಾರಣಕ್ಕೂ ಯೋಜನೆಯನ್ನು ಕರ್ನಾಟಕದಲ್ಲಿ ಮುಂದುವರಿಸಲು ಬಿಡಬಾರದು ಎಂದು ಒತ್ತಾಯಿಸಿದರು.

ಬೆಳಗಾವಿಯಲ್ಲಿ ಮಹಾರಾಷ್ಟ್ರ ಸರಕಾರ ಇಷ್ಟೆಲ್ಲ ಬೆಳವಣಿಗೆ ನಡೆಸಿದರೂ ಕರ್ನಾಟಕ ಸರಕಾರಕ್ಕೆ ಆ ರಾಜ್ಯದ ಯೋಜನೆಯ ಗಂಭೀರತೆ ತಿಳಿಯುತ್ತಿಲ್ಲ. ರಾಜ್ಯದ ಸಚಿವರು ಮೌನ ಮುರಿಯುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಮಹಾರಾಷ್ಟ್ರ ಸರಕಾರದ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಲು ಸಾಕಷ್ಟು ಜನ ಮುಗಿ ಬೀಳುತ್ತಿದ್ದಾರೆ. ಈ ಯೋಜನೆಯಡಿ ಚಿಕಿತ್ಸೆ ನೀಡಲು ಬೆಳಗಾವಿಯಲ್ಲಿ ಅರಿಹಂತ್,ಕೆಎಲ್ ಇ ಆಸ್ಪತ್ರೆ ಮತ್ತು ಗಡಿಯಲ್ಲಿ 140 ಆಸ್ಪತ್ರೆಗಳನ್ನು ಆಯ್ಕೆ ಮಾಡಲಾಗಿದೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಡಳಿತದಿಂದ ನೋಟಿಸ್ ಜಾರಿ: ಮಹಾತ್ಮ ಜ್ಯೋತಿರಾವ್ ಫುಲೆ ಜನಾರೋಗ್ಯ ವಿಮಾ ಯೋಜನೆಯಡಿ ಅರ್ಜಿ ಪಡೆಯುತ್ತಿರುವ ನಾಲ್ಕು ಸೇವಾ ಕೇಂದ್ರಗಳಿಗೆ ನೋಟಿಸ್ ಕೊಡುತ್ತೇವೆ. ಕೆಪಿಎಂಸಿ ಕಾಯ್ದೆಯಡಿ ಇವುಗಳನ್ನು ತೆರೆಯಲಾಗಿದೆಯೋ ಅಥವಾ ಇಲ್ಲವೋ ಎಂಬ ಬಗ್ಗೆ ಪರಿಶೀಲನೆ ನಡೆಸುತ್ತೇವೆ. ಕರ್ನಾಟಕದಲ್ಲಿ ಜಾರಿಗೊಳಿಸಿರುವ ಯೋಜನೆ ಬಗ್ಗೆ ಬೆಳಗಾವಿಯ ಎರಡು ಆಸ್ಪತ್ರೆಗಳಿಗೆ ತಕ್ಷಣ ಕಾರಣ ಕೇಳಿ ನೋಟಿಸ್ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ತಿಳಿಸಿದರು.

ಕರ್ನಾಟಕದಲ್ಲಿ ಪ್ರತಿಯೊಬ್ಬ ನಾಗರಿಕರಿಗೆ 5 ಲಕ್ಷ ವರೆಗೆ ವಿಮೆ ಸೌಕರ್ಯವಿದೆ. ಆದರೂ ಮಹಾರಾಷ್ಟ್ರ ಏಕೆ ಈ ಯೋಜನೆಯನ್ನು ಜಾರಿಗೊಳಿಸುತ್ತಿದೆ. ಆರೋಗ್ಯ ಇಲಾಖೆ ಹಿರಿಯ ಅಧಿಕಾರಿಗಳೊಂದಿಗೆ ಈ ಬಗ್ಗೆ ಸಮಗ್ರವಾಗಿ ಚರ್ಚಿಸಿ ಮುಂದಿನ ಕ್ರಮ ವಹಿಸುವುದಾಗಿ ಅವರು ತಿಳಿಸಿದರು.

## ಮಹಾನಗರ ಪಾಲಿಕೆ; ಗುತ್ತಿಗೆ ಆಧಾರದ ಮೇಲೆ ಕಾನೂನು ಅಧಿಕಾರಿಯ ನೇಮಕಾತಿ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ ಸಂಬಂಧಿಸಿದ ಸ್ಥಳೀಯ ನ್ಯಾಯಲಯಗಳಲ್ಲಿ ಮತ್ತು ರಾಜ್ಯ ಉಚ್ಚ ನ್ಯಾಯಲಯದಲ್ಲಿ ದಾಖಲಾಗಿರುವ/ದಾಖಾಲಾಗುವ ಪ್ರಕರಣಗಳಿಗೆ ಹಾಗೂ ಪಾಲಿಕೆಯ ಎಲ್ಲಾ ಬಗೆಯ ರಾಜ್ಯ ಸರ್ಕಾರದ ಸೇವೆಗೆ ಸಂಬಂದಿತ ವ್ಯಾಜ್ಯಗಳಿಗೆ, ಕೆಲವು ಕ್ಲಿಷ್ಟಕರ ಸಮಸ್ಯಗಳಿಗೆ ಕಾನೂನು ನೆರವು ನೀಡುವುದಕ್ಕಾಗಿ ಹಾಗೂ ಪಾಲಿಕೆಯ ಇನ್ನಿತರ ವಿವಿಧ ಶಾಖೆಗಳಲ್ಲಿನ ಎಲ್ಲಾ ಬಗೆಯ ಕಾನೂನಾತ್ಮಕ ಪ್ರಕರಣಗಳನ್ನು ಬಗೆಹರಿಸಲು ತಾಂತ್ರಿಕವಾಗಿ ಕಾನೂನು ಅಭಿಪ್ರಾಯ ಪಡೆಯಲು ಕಾನೂನು ಅಧಿಕಾರಿಯ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ನೇಮಕವಾಗುವ ಕಾನೂನು ಅಧಿಕಾರಿ (ಕರ್ನಾಟಕ ಪೌರನಿಗಮಗಳ ಅಧಿನಿಯಮ 1964 & 1976ರ ಪ್ರಕಾರ) ಪರಿಣಿತನಾಗಿರಬೇಕು. ಕಾನೂನು ಅಬಿಪ್ರಾಯಕ್ಕೆ ಸಂಬಂಧಿಸಿದಂತೆ ಕಾರ್ಯಗಳನ್ನು ನಿರ್ವಹಿಸಲು ಗುತ್ತಿಗೆ ಆಧಾರದಲ್ಲಿ ಒಬ್ಬ ನುರಿತ ಹಾಗೂ ಅನುಭವ ಉಳ್ಳ ಕಾನೂನು ಅಧಿಕಾರಿಯನ್ನು ನೇಮಿಸಿಕೊಳ್ಳಲಾಗುವುದು

ಷರತ್ತುಗಳು/ನಿಯಮಗಳು:

ಇಚ್ಚೆಯುಳ್ಳ ಕಾನೂನು ಅಧಿಕಾರಿಯು ಎಲ್.ಎಲ್.ಎಂ ಪದವಿ ಹೊಂದಿರಬೇಕು, ಕನಿಷ್ಠ 10 ವರ್ಷದ ಅನುಭವ ಹೊಂದಿರಬೇಕು ಹಾಗೂ ನಿವೃತ್ತ ಉಚ್ಚ ನ್ಯಾಯಲಯದ/ಜಿಲ್ಲಾ ನ್ಯಾಯಲಯದ ನ್ಯಾಯಾದೀಶರಾಗಿ ಸೇವೆ ಸಲ್ಲಿಸಿರಬೇಕು. ಮಹಾನಗರ ಪಾಲಿಕೆ ವ್ಯಾಪಿಯಲ್ಲಿ ಬರುವ ಕಾನೂನು ಹಾಗೂ ನ್ಯಾಯಲಯ ಪ್ರಕರಣಗಳ ಬಗ್ಗೆ ಕಂಡಿಕೆವಾರು ಉತ್ತರಗಳನ್ನು ತಯಾರಿಸಿ, ಆಯುಕ್ತರುಗಳಿಂದ ಅನುಮೊದನೆ ಪಡೆದು ಕಾಲಮಿತಿಯೊಳಗೆ ಸಂಬಂದಿತ ನ್ಯಾಯಲಯಕ್ಕೆ ಸಲ್ಲಿಸುವುದು.

ಕಾನೂನು ಅರಿವು ಮೂಡಿಸಲು ಪಾಲಿಕೆ ಮಟ್ಟದಲ್ಲಿ ಜಾಗೃತಿ ಶಿಬಿರ/ಉಪನ್ಯಾಸ/ತರಬೇತಿಗಳನ್ನು ಕಾಲ ಕಾಲಕ್ಕೆ ಆಯೋಜಿಸುವುದು.

ಕಾನೂನು ಸಂಬಂಧ ಪಾಲಿಕೆಯ ಯಾವುದೇ ಪ್ರಕರಣಗಳಾಗಲಿ ಅವುಗಳಿಗೆ ಕಾನೂನಾತ್ಮಕ ಅಭಿಪ್ರಾಯಗಳನ್ನು ನೀಡುವುದು. ಇವುಗಳಿಗೆ ಸಂಬಂಧಿತವಾಗಿ ಖುದ್ದು ಹಾಜರಾಗಿ ಸಕ್ಷಮ ಪ್ರಾಧಿಕರಗಳಿಗೆ ಸೂಕ್ತ ಮಾಹಿತಿಗಳನ್ನು ಸಲ್ಲಿಸುವುದು.

ಕರ್ನಾಟಕ ಪೌರನಿಗಮಗಳ ಅಧಿನಿಯಮಗಳಾದ 1964 & 1976ರ ನಿಯಮಗಳ ಬಗ್ಗೆ ಪರಿಣಿತನಾಗಿರಬೇಕು. ಕರ್ನಾಟಕ ಸರ್ಕಾರಿ ಸೇವಾ ನಿಯಮ ಮತ್ತು ಕರ್ನಾಟಕ ಸೇವಾ ನಿಯಮಗಳ ಬಗ್ಗೆ ಪರಿಣಿತನಾಗಿರಬೇಕು. ಕಾನೂನು ಅಧಿಕಾರಿಯು ದಿನಾಂಕ: 31/01/2024ಕ್ಕೆ 50 ವರ್ಷ ವಯಸ್ಸು ಮೀರಿರಬಾರದು.

ಗುತ್ತಿಗೆ ಆಧಾರದ ಮೇಲೆ ನೇಮಕವಾಗುವ ಕಾನೂನು ಅಧಿಕಾರಿಯು ಪಾಲಿಕೆಯ ನಿಗದಿಪಡಿಸುವ ಗೌರವಧನಕ್ಕೆ ಅರ್ಹರಾಗಿರುತ್ತಾರೆ. ಗುತ್ತಿಗೆ ಆಧಾರದ ಮೇಲೆ ಆಯ್ಕೆಯಾಗುವ ಕಾನೂನು ಅಧಿಕಾರಿಗಳ ಸೇವಾ ಅವಧಿ ಮೂರು ವರ್ಷಗಳಿಗೆ ಮಾತ್ರ ಸಿಮೀತವಾಗಿರುತ್ತದೆ ಹಾಗೂ ನಿಯಮಾನುಸಾರ ಅಂತಿಮವಾಗಿ ಆಯ್ಕೆಯಾದ ಕಾನೂನು ಅಧಿಕಾರಿಯು ಗುತ್ತಿಗೆ ಸೇವೆಯನ್ನು ಮುಂದುವರೆಸುವ ಅಥವಾ ಸ್ಥಗಿತಗೊಳಿಸುವ ಅಂತಿಮ ಅಧಿಕಾರ ನೇಮಕಾತಿ ಪ್ರಾದಿಕಾರಿಗಳು ಕಾಯ್ದಿರಿಸಿಕೊಂಡಿರುತ್ತಾರೆ.

ಕಾನೂನು ಅಧಿಕಾರಿಯು ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಓದಿ/ಬರೆಯಲು ಹಾಗೂ ಅರ್ಥೈಸಿಕೊಳ್ಳಲು ಪರಿಣಿತಿ ಹೊಂದಿರಬೇಕು. ಹೆಚ್ಚಿನ ಸೇವಾ ಅನುಭವ ಹೊಂದಿರುವವರಿಗೆ ಆಧ್ಯತೆ ನೀಡಲಾಗುವುದು.

ಇಚ್ಚೆಯುಳ್ಳ ಕಾನೂನು ಅಧಿಕಾರಿಗಳು ಜನವರಿ 25, 2024 ರೊಳಗಾಗಿ ಪಾಲಿಕೆಯ ಆಡಳಿತ ಶಾಖೆಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.18 ರಂದು ಪೂರ್ವಭಾವಿ ಸಭೆ



ಬಳ್ಳಾರಿ: ಜಿಲ್ಲಾಡಳಿತದಿಂದ ಜ.26 ರಂದು 75 ನೇ ಗಣರಾಜ್ಯೋತ್ಸವ ದಿನಾಚರಣೆಯನ್ನು ಅದ್ದೂರಿ ಆಚರಣೆಯ ಅಂಗವಾಗಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಜ.18 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ತಿಳಿಸಿದ್ದಾರೆ.

## ಐಪಿಎಸ್ ಅಧಿಕಾರಿ ರೂಪಾ ಕ್ಷಮೆ ಕೇಳುವಂತೆ ಐಎಎಸ್ ಅಧಿಕಾರಿ ಸಿಂಧೂರಿ ಬಿಗಿಪಟ್ಟು

ನವದೆಹಲಿ: ಸಾಮಾಜಿಕ ಮಾಧ್ಯಮಗಳಲ್ಲಿ ವಿವಾದಾತ್ಮಕ ಪೋಸ್ಟ್ ಕುರಿತು ಹಿರಿಯ ಐಪಿಎಸ್ ಅಧಿಕಾರಿ ಡಿ.ರೂಪಾ ಕ್ಷಮೆ ಕೇಳಬೇಕು ಎಂದು ಹಿರಿಯ ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಸುಪ್ರೀಂಕೋರ್ಟ್ ನಲ್ಲಿ ಬಿಗಿಪಟ್ಟು ಹಿಡಿದಿದ್ದಾರೆ.

ಡಿ.ರೂಪಾ ವಿರುದ್ಧ ಸಲ್ಲಿಸಿದ್ದ ಮಾನನಷ್ಟ ಪ್ರಕರಣದ ವಿಚಾರಣೆ ಸಂದರ್ಭದಲ್ಲಿ ವಾದ ಮಂಡಿಸಿದ ರೋಹಿಣಿ ಸಿಂಧೂರಿ ಪರ ವಕೀಲರು, ಮಾನಹಾನಿಯಾಗುವ ರೀತಿಯಲ್ಲಿ ಪೋಸ್ಟ್ ಗಳನ್ನು ಮಾಡಲಾಗಿದೆ ಈ ಹಿನ್ನಲೆಯಲ್ಲಿ ಡಿ.ರೂಪಾ ಬೇಷರತ್ ಕ್ಷಮೆ ಕೋರುವಂತೆ ಒತ್ತಾಯಿಸಿದರು.

24 ಗಂಟೆಯೊಳಗೆ ರೋಹಿಣಿ ಸಿಂಧೂರಿ ವಿರುದ್ಧದ ಪೋಸ್ಟ್ ಡಿಲೀಟ್ ಮಾಡಿ: ಡಿ ರೂಪಾಗೆ ಸುಪ್ರೀಂ ಕೋರ್ಟ್ ಸೂಚನೆ

ಇದಕ್ಕೆ ಪ್ರತಿಕ್ರಿಯಿಸಿದ ಡಿ.ರೂಪಾ ಪರ ವಕೀಲರು, ರೋಹಿಣಿ ಸಿಂಧೂರಿ ಕೂಡಾ ಆರೋಪ ಮಾಡಿದ್ದಾರೆ. ಬುದ್ಧಿ ಭ್ರಮಣೆಯಾಗಿದೆ ಎಂದು ಮಾಧ್ಯಮಗಳಲ್ಲಿ ಹೇಳಿಕೆ ನೀಡಿದ್ದಾರೆ ಎಂದು ವಾದಿಸಿದರು. ಇದಕ್ಕೆ ಪ್ರತಿವಾದ ಮಂಡಿಸಿದ ಸಿಂಧೂರಿ ಪರ ವಕೀಲರು, ಹೌದು ಬುದ್ಧಿ ಭ್ರಮಣೆಯಾದವರು ಈ ರೀತಿ ಪೋಸ್ಟ್ ಮಾಡುತ್ತಾರೆ. ಆದರೆ ಅವರಿಗೆ ಬುದ್ಧಿಭ್ರಮಣೆಯಾಗಿದೆ ಎಂದು ಹೇಳಿಲ್ಲ. ಅವಹೇಳನಕಾರಿ ಪೋಸ್ಟ್ ಗಳನ್ನು ಸಾಮಾಜಿಕ ಮಾಧ್ಯಮಗಳಿಂದ ಡಿಲೀಟ್ ಮಾಡಬಹುದು. ಆದರೆ ಇಂತಹ ಪೋಸ್ಟ್ ಗಳಿಂದ ನನ್ನ ಕುಟುಂಬಕ್ಕೆ ಘಾಸಿಯಾಗಿದೆ, ನಾನು ಸಾರ್ವಜನಿಕ ಜೀವನದಲ್ಲಿ ಕೆಲಸ ಮಾಡುವುದು ಹೇಗೆ? ಹೀಗಾಗಿ ಐಪಿಎಸ್ ಡಿ.ರೂಪಾ ಬೇಷರತ್ ಕ್ಷಮೆ ಕೇಳಬೇಕು ಎಂದು ರೋಹಿಣಿ ಸಿಂಧೂರಿ ಪಟ್ಟು ಹಿಡಿದಿದ್ದಾರೆ.



ವಾದ–ಪ್ರತಿವಾದ ಆಲಿಸಿದ ವೇಳೆ ಮಧ್ಯಪ್ರವೇಶ ಮಾಡಿದ ನ್ಯಾಯಮೂರ್ತಿಎ.ಎಸ್ ಓಕಾ, ಒಂದು ತಿಂಗಳ ಸಮಯ ನೀಡಲಾಗುವುದು, ಫೆ.16ಕ್ಕೆ ಮುಂದಿನ ವಿಚಾರಣೆಗೆ ಪಟ್ಟಿ ಮಾಡಲಾಗುವುದು. ಅಲ್ಲಿಯ ತನಕ ಮಧ್ಯಂತರ ಆದೇಶ ಆದೇಶ ಮುಂದುವರಿಯಲಿದೆ. ಯಾರು ಯಾರ ವಿರುದ್ಧವೂ ಆರೋಪ ಪ್ರತ್ಯಾರೋಪ ಮಾಡಬಾರದು. ಸೋಶಿಯಲ್ ಮೀಡಿಯಾದಲ್ಲಿಯೂ ಪೋಸ್ಟ್ ಮಾಡುವಂತಿಲ್ಲ ಎಂದು ನ್ಯಾಯಾಧೀಶರು ಸೂಚಿಸಿದರು.

# ವಿವೇಕಾನಂದರ ತತ್ವಾದರ್ಶಗಳು ವಿಶ್ವಕ್ಕೆ ಮಾದರಿ

ಬಳ್ಳಾರಿ: ಮಹಾನ್ ಮೇಧಾವಿ ಸ್ವಾಮಿ ವಿವೇಕಾನಂದರಿಗೆ ಅವರೇ ಸ್ಫೂರ್ತಿ. ಯುವಕರಿಗೆ ಅವರು ನೀಡಿದ ತತ್ವಗಳು ಭಾರತ ಮಾತ್ರವಲ್ಲದೆ ಹಲವಾರು ಪಾಶ್ಚಿಮಾತ್ಯ ರಾಷ್ಟ್ರಗಳಿಗೂ ಮಾದರಿಯಾಗಿವೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಶಿಕ್ಷಣ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಗೋಪಾಲ.ಎನ್ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಸ್ವಾಮಿ ವಿವೇಕಾನಂದರ 161ನೇ ಜನ್ಮ ದಿನಾಚಾರಣೆಯ ಪ್ರಯುಕ್ತ ವಿದ್ಯಾರ್ಥಿ ಕಲ್ಯಾಣ ಘಟಕ ಹಾಗೂ ಬಳ್ಳಾರಿಯ ನೆಹರು ಯುವ ಕೇಂದ್ರದ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಕಾಣದ ದೇವರ ಹುಡುಕಾಟಕ್ಕಾಗಿ ಪ್ರಪಂಚ ಪರ್ಯಟನೆ ಮಾಡುತ್ತ ತಮ್ಮ ಗುರುಗಳಾದ ರಾಮಕೃಷ್ಣ ಪರಮಹಂಸರನ್ನು ಕಂಡುಕೊಂಡರು. ಭಾರತೀಯ ಯೋಗ ಮತ್ತು ಆಧ್ಯಾತ್ಮವನ್ನು ಜಗತ್ತಿಗೆ ಪರಿಚಯಿಸಿದರು. ಯುವಜನತೆಯಲ್ಲಿ ರಾಷ್ಟ್ರಾಭಿಮಾನ ಮೂಡಿಸಿದ ಕೀರ್ತಿ ವಿವೇಕಾನಂದರಿಗೆ ಸಲ್ಲುತ್ತದೆ. ತಮ್ಮ ವಿಚಾರಧಾರೆಗಳಿಂದ ವಿವೇಕಾನಂದರು ಅಲ್ಪಸಮಯದಲ್ಲಿ ಪ್ರಪಂಚಕ್ಕೆ ಪರಿಚಿತರಾದವರು ಎಂದು ಹೇಳಿದರು.

ಸನಾತನ ಧರ್ಮದ ತತ್ವಗಳನ್ನು ಜಗತ್ತಿಗೆ ಪರಿಚಯಿಸಿದ ಮಹಾನ್ವ್ಯಕ್ತಿ ವಿವೇಕಾನಂದರು. ರಾಷ್ಟ್ರ, ಜನಾಂಗ, ಧರ್ಮಕ್ಕೆ ಸೀಮಿತವಾಗದ ಸಾಧನೆಯೆ ಪ್ರತಿ ಮನುಷ್ಯನ ಗುರುತು ಎಂದು ಸಾರಿದರು. ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಯುವಕರ ಸಕ್ರೀಯ ಪಾಲುದಾರಿಕೆ ಮುಖ್ಯ ಎಂಬುದು ವಿವೇಕಾನಂದರ ನಂಬಿಕೆಯಾಗಿತ್ತು. ಈ ನಿಟ್ಟಿನಲ್ಲಿ ಇಂದಿನ ಯುವಕರು ತಮ್ಮ ಸಮಯವನ್ನು ಒಳ್ಳೆಯ ವಿಚಾರಗಳಿಗಾಗಿ ಮೀಸಲಿಡಿ ಎಂದು ಕಿವಿಮಾತು ಹೇಳಿದರು.



ನೆಹರು ಯುವ ಕೇಂದ್ರ, ಬಳ್ಳಾರಿ ಶಾಖೆಯ ಯುವ ಅಧಿಕಾರಿ ಮೊಂಟು ಪತಾರ್ ಅವರು ಮಾತನಾಡಿ, 'ಏಳು, ಎದ್ದೇಳು, ನಿನ್ನಲ್ಲಿರುವ ಸಾಮರ್ಥ್ಯ ಅರಿತುಕೊಳ್ಳು' ಎನ್ನುವುದು ಈ ವರ್ಷದ ರಾಷ್ಟ್ರೀಯ ಯುವ ದಿನದ ಘೋಷವಾಕ್ಯವಾಗಿದೆ. ಪ್ರಪಂಚದಲ್ಲಿ ಅತಿಹೆಚ್ಚು ಯುವಕರನ್ನು ಹೊಂದಿರುವ ದೇಶ ನಮ್ಮದು. ಭಾರತದ ಯುವಕರು ಅಭಿವೃದ್ಧಿ ಪಥದಲ್ಲಿ ಸಾಗಬೇಕು ಆಗ ಮಾತ್ರ ಭಾರತ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಹೇಳಿದರು.

ವಿಶ್ವವಿದ್ಯಾಲಯದ ಕುಲಸಚಿವ ರುದ್ರೇಶ.ಎಸ್.ಎನ್ ಅವರು ಮಾತನಾಡಿ, ವಿವೇಕಾನಂದರ ತತ್ವ ಆದರ್ಶಗಳು ಇಂದಿಗೂ ಪ್ರಪಂಚದಾದ್ಯಂತ ಪ್ರಸ್ತುತವಾಗಿವೆ. ಯುವಕರು ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಯಶಸ್ವಿ ವ್ಯಕ್ತಿಯಾಗಬಹುದು. ಯುವಕರು ಜಾತಿ, ಧರ್ಮ ಮೀರಿ ಬೆಳೆಯಬೇಕು. ರಾಷ್ಟ್ರೀಯತೆಯ ಮೂಲಕ ದೇಶಿಯ ಪಾಲನೆ ಮಾಡಿ ಎಂದು ಸಲಹೆ ನೀಡಿದರು.

ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ಅನಂತ ಎಲ್ ಝುಂಡೇಕರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ನಿಷ್ಕಲ್ಮಶ ಹೃದಯವಿದ್ದಲ್ಲಿ ಅಲ್ಲಿ ದೇವರು ಇರುತ್ತಾನೆ ಎಂದು ವಿವೇಕಾನಂದರ ಮಾತನ್ನು ಸ್ಮರಿಸಿದರು. ಯುವ ಜನತೆಗೆ ನೀಡಿದ ಅವರ ತತ್ವಗಳು ಎಂದೆಂದಿಗೂ ಯುವಕರಿಗೆ ಸ್ಫೂತಿಯಾಗಿವೆ ಎಂದರು.

ಇದೇ ಸಂದರ್ಭದಲ್ಲಿ ಪ್ರಧಾನಿ ಮೋದಿಯವರು ಇಂದು ಮಹಾರಾಷ್ಟ್ರದ ನಾಶಿಕ್ನಲ್ಲಿ ಚಾಲನೆ ನೀಡಿದ '27ನೇ ರಾಷ್ಟ್ರೀಯ ಯುವ ಮಹೋತ್ಸವ' ಕಾರ್ಯಕ್ರಮವನ್ನು ಆನ್ಲೈನ್ ಮೂಲಕ ಸಭಾಂಗಣದಲ್ಲಿ ವೀಕ್ಷಿಸಲಾಯಿತು.

ವಿದ್ಯಾರ್ಥಿ ಕಲ್ಯಾಣ ಘಟಕದ ನಿರ್ದೇಶಕ ಡಾ.ಶಶಿಕಾಂತ್ ಎಚ್ ಮಜಗಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿಶ್ವ ವಿದ್ಯಾಲಯದ ಮೌಲ್ಯಮಾಪನ ಕುಲಸಚಿವ ಪ್ರೊ.ರಮೇಶ ಓ ಓಲೇಕಾರ್, ಹಣಕಾಸು ಅಧಿಕಾರಿಗಳಾದ ಪ್ರೊ.ಸದ್ಯೋಜಾತಪ್ಪ, ದೈಹಿಕ ಶಿಕ್ಷಣ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಶಶಿಧರ ಕೆಲ್ಲೂರ್ ಸೇರಿದಂತೆ ವಿವಿಧ ನಿಕಾಯಗಳ ಡೀನರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 90 ಸಾವಿರ ರೂ. ಲಂಚ ನೀಡಲು ಬಂದ ಗುತ್ತಿಗೆದಾರನ ಹಿಡಿದು ಕೊಟ್ಟ ಅಧಿಕಾರಿ




ಹಾವೇರಿ: ಲಂಚ ಕೊಡುವ ಆಮಿಷ ಒಡ್ಡಿದ ಗುತ್ತಿಗೆದಾರನನ್ನು ಸರ್ಕಾರಿ ಅಧಿಕಾರಿ ಲೋಕಾಯುಕ್ತ ಪೊಲೀಸರಿಗೆ ಒಪ್ಪಿಸಿದ ಘಟನೆ ಗುರುವಾರ ನಡೆದಿದೆ.

ಹಾವೇರಿ ತಾಲೂಕಿನ ಗುತ್ತಲಾದ ಗುರುಕೃಪ ಎಂಟರ್ ಪ್ರೈಸಸ್ ಮಾಲೀಕ ಶರಣಪ್ಪ ಸಿದ್ದಪ್ಪ ಶೆಟ್ಟರ್ ಬಂಧಿತ ಟೆಂಡರ್ ದಾರ. ಹಾವೇರಿ ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಭರತ್ ಹೆಗಡೆ ಲಂಚದ ಆಮಿಷ ಒಡ್ಡಿದ ಶರಣಪ್ಪ ವಿರುದ್ಧ ದೂರು ನೀಡಿ ಲೋಕಾಯುಕ್ತ ಪೊಲೀಸರಿಗೆ ಒಪ್ಪಿಸಿದ್ದಾರೆ.

ಹಾವೇರಿ ತಾಲೂಕು ಪಂಚಾಯಿತಿಯಿಂದ ಸಾಮಗ್ರಿ ಪೂರೈಕೆಗೆ ಕರೆದ ಟೆಂಡರ್ ನನಗೆ ಸಿಗುವಂತೆ ಮಾಡಿದಲ್ಲಿ ಟೆಂಡರ್ ಮೊತ್ತದ ಶೇಕಡ 20ರಷ್ಟು ಹಣ ನಿಮಗೆ ಕೊಡುತ್ತೇನೆ ಎಂದು ಲಂಚ ತೆಗೆದುಕೊಳ್ಳಲು ಆಮಿಷ ಒಡ್ಡಿದ್ದು, ಲೋಕಾಯುಕ್ತರಿಗೆ ಭರತ್ ಹೆಗಡೆ ದೂರು ನೀಡಿದ್ದರು. ಹಾವೇರಿಯ ಹೋಟೆಲ್ ನಲ್ಲಿ 90,000 ರೂ. ಲಂಚ ಕೊಡುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ.

# ನಮ್ಮ ರಾಷ್ಟ್ರವನ್ನು ಉಜ್ವಲವಾದ, ಉತ್ತಮವಾದ ವಿಕ್ಷಿತ್ ಭಾರತ್@2047 ಕಡೆಗೆ ಮುನ್ನಡೆಸಿ: ಶ್ರೀಮತಿ ಮಂಗಲ ಅಂಗಡಿ ಅಭಿಪ್ರಾಯ

ಬೆಳಗಾವಿ: ಸ್ವಾಮಿ ವಿವೇಕಾನಂದರ ಜನ್ಮ ದಿನ ಪ್ರತಿ ವರ್ಷ ಜನವರಿ 12 ರಂದು ವಿಶ್ವದಾದ್ಯಂತ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಬಹಳ ವಿಜೃಂಭಣೆಯಿಂದ ಆಚರಣೆ ಮಾಡಲಾಗುತ್ತದೆ ಎಂದು ಬೆಳಗಾವಿ ಲೋಕಸಭಾ ಸಂಸದರಾದ ಮಂಗಲ ಸುರೇಶ ಅಂಗಡಿ ತಿಳಿಸಿದರು.

ನಗರದ ಸುರೇಶ ಅಂಗಡಿ ಶಿಕ್ಷಣ ಪ್ರತಿಷ್ಠಾನದ ಅಂಗಡಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಟ್ ಮ್ಯಾನೇಜ್ಮೆಂಟ್ ಸಭಾಗಂಣದಲ್ಲಿ ಭಾರತ ಸರ್ಕಾರದ ನೆಹರು ಯುವ ಕೇಂದ್ರ ಬೆಳಗಾವಿ ಹಾಗೂ ಅಂಗಡಿ ವಾಣಿಜ್ಯ ಮತ್ತು ವಿಜ್ಞಾನ ಕಾಲೇಜ ಇವುಗಳ ಸಂಯುಕ್ತ ಆಶ್ರಯದಲಿ 2023-24 ನೇ ಸಾಲಿನ ದಿವ್ಯ ಚೇತನ ಸ್ವಾಮಿವಿವೇಕಾನಂದರ 162ನೇ ಜಯಂತಿ ಅಂಗವಾಗಿ ರಾಷ್ಟ್ರೀಯ ಯುವ



ದಿನ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲರೂ ಸ್ವಾಮಿ ವಿವೇಕಾನಂದರ ಆದರ್ಶ ಮತ್ತು ದೇಶ ಪ್ರೇಮ ಬೆಳಸಿಕೊಳ್ಳಬೇಕು. ಸ್ವಾಮಿ ವಿವೇಕಾನಂದರ ಜೀವನವೇ ನಮಗೆ ಸ್ಪೂರ್ತಿ ತುಂಬುತ್ತದೆ.

ಅವರ ಬಾಲ್ಯ ಜಿವನ ಮತ್ತು ಅವರು ಕಂಡ ಭವ್ಯಷ್ಯದ ಭಾರತದ ಕನಸು ನನಸು ಮಾಡಲು ತಾವೆಲ್ಲರೂ ಸಿದ್ದವಾಗಿರಬೇಕು.

ರಾಷ್ಟ್ರೀಯ ಯುವ ದಿನ 2024 ಕೇವಲ ಆಚರಣೆಗಿಂತ ಹೆಚ್ಚಿನದಾಗಿ ಭರವಸೆ ನೀಡುತ್ತದೆ, ಇದು ಭಾರತದ ಯುವ ಪೀಳಿಗೆಯಲ್ಲಿ ನಂಬಿಕೆಯ ಘೋಷಣೆಯಾಗಿದೆ.

ಅವರ ಆಲೋಚನೆಗಳು ಪ್ರವರ್ಧಮಾನಕ್ಕೆ ಬರಲು ವೇದಿಕೆಯಾಗಿದೆ ಮತ್ತು ನಮ್ಮ ರಾಷ್ಟ್ರವನ್ನು ಉಜ್ವಲವಾದ, ಉತ್ತಮವಾದ ವಿಕ್ಷಿತ್ ಭಾರತ್@2047 ಕಡೆಗೆ ಮುನ್ನಡೆಸಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಇನ್ನೂರ್ವ ಅತಿಥಿಗಳಾದ ಶ್ರೀ ಮಲ್ಲಯ್ಯ ಕರಡಿ ಇವರು ಕಾರ್ಯಕ್ರಮದ ಪ್ರಾಸ್ಥಾವಿಕ ನುಡಿಗಳನ್ನಾಡಿದರು.

ಮುಖ್ಯ ಅತಿಥಿಗಳಾಗಿ ಸಂಗೀತ ದೇಸಾಯಿ, ಪ್ರೋ. ಸಂಜೀವ ಕುಮಾರಮಠ, ಪ್ರೋ. ನಾಗೇಶ್ವರ ದೇಮನಿಕೊಪ್ಪ, ಪ್ರೋ ಸಂತೋಷ ಹಾವರಗಿ, ಕಾಲೇಜಿನ ಎಲ್ಲ ಶಿಕ್ಷಕರು ಉಪಸ್ಥಿತರಿದ್ದರು.

# ತ್ಯಾಗವೀರ ಶಿರಸಂಗಿ ಲಿಂಗರಾಜರ 163ನೇ ಜಯಂತಿ ಉತ್ಸವ ಆಚರಣೆ



ಬೆಳಗಾವಿ: ತ್ಯಾಗವೀರ ಶಿರಸಂಗಿ ಲಿಂಗರಾಜರ 163 ನೇ ಜಯಂತಿ ಉತ್ಸವವನ್ನು ಸರದೇಸಾಯಿ ನವಲಗುಂದ ಶಿರಸಂಗಿ ಚಾರಿಟೇಬಲ್ ಟ್ರಸ್ಟ ಫಂಡ ಬೆಳಗಾವಿ ಕಾರ್ಯಾಲಯದಲ್ಲಿ ಲಿಂಗರಾಜರ ಭಾವಚಿತ್ರದ ಪೂಜೆಯೊಂದಿಗೆ ಅತ್ಯಂತ ಸರಳವಾಗಿ ಆಚರಿಸಲಾಯಿತು.

ಟ್ರಸ್ಟಿನ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ನಿತೇಶ ಕೆ ಪಾಟೀಲ ಆಗಮಿಸಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಲಿಂಗರಾಜರ ಕೊಡುಗೆಗಳನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಟ್ರಸ್ಟಿನ ಸದಸ್ಯರಾದ ಸೋಮನಾಥ ಬಿ ಪಾಟೀಲ ಮತ್ತು ವಿಕ್ರಮ ಡಿ ಇನಾಮದಾರ, ಟ್ರಸ್ಟಿನ ನ್ಯಾಯವಾದಿಗಳಾದ ಆರ್.ಜಿ.ಕುಲಕರ್ಣಿ ಮತ್ತು ಟ್ರಸ್ಟಿನ ಫಲಾನುಭವಿ ನಿವೃತ್ತ ಪ್ರಾಚಾರ್ಯ ಬಿ. ಎಸ್. ಗವಿಮಠ, ವ್ಹಿ. ಆರ್.ಬಾಗೋಜಿ, ಸಿ.ಎಸ್. ಕಾಮಗೋಳ, ಸೋಮಶೇಖರ ಮಲ್ಲಣ್ಣವರ ಹಾಗೂ ಟ್ರಸ್ಟ ಸಿಬ್ಬಂದಿ ಎಸ್. ಬಿ. ಪಾಟೀಲ, ವ್ಹಿ. ಎ. ಚನ್ನಪ್ಪಗೌಡರ, ಎಸ್.ಬಿ.ಬಿರಾದಾರ, ಅಶೋಕ ಚನ್ನಪ್ಪಗೌಡರ ಇವರು ಉಪಸ್ಥಿತರಿದ್ದರು.

# ಮಂಜುನಾಥ ಶಹಾಪುರಗೆ ಡಾಕ್ಟರೇಟ್



ಕೆಂಭಾವಿ: ಪಟ್ಟಣದ ಮಂಜುನಾಥ ಹೆಚ್ ಶಹಾಪುರ ರವರಿಗೆ ಹಂಪಿ ವಿಶ್ವವಿದ್ಯಾಲಯದಿಂದ 2023-24ನೇ ಸಾಲಿನ ಡಾಕ್ಟರೇಟ್ ಪದವಿ ಲಭಿಸಿದೆ.

ಮಂಜುನಾಥ ಇವರು ಡಾ. ರಮೇಶ ಟಿ ಪೋತೆ ರವರ ಮಾರ್ಗದರ್ಶನದಲ್ಲಿ ಅಭಿವೃದ್ಧಿ ಅಧ್ಯಯನ ವಿಭಾಗ ಸಮಾಜ ವಿಜ್ಞಾನಗಳ ನಿಕಾಯದ ಅರ್ಥಶಾಸ್ತ್ರ ವಿಷಯದಲ್ಲಿ ಸಂಶೋಧನಾ ವಿದ್ಯಾರ್ಥಿಯಾಗಿ " ಕಲ್ಯಾಣ ಕರ್ನಾಟಕದಲ್ಲಿ ನೀರಾವರಿ ಮತ್ತು ಕೃಷಿ ಅಭಿವೃದ್ಧಿ ಯಾದಗಿರಿ ಜಿಲ್ಲೆ ಅನುಲಕ್ಷಿಸಿ " ಮಂಡಿಸಿದ ಮಹಾ ಪ್ರಬಂಧಕ್ಕೆ ಹಂಪಿ ವಿಶ್ವವಿದ್ಯಾಲಯದಿಂದ ಪಿಹೆಚ್‌ಡಿ ಪದವಿ ದೊರೆತಿದೆ.

ಮಂಜುನಾಥ ರವರಿಗೆ ಡಾಕ್ಟರೇಟ್ ಪದವಿ ಲಭಿಸಿರುವದಕ್ಕೆ ಹಿರೇಮಠದ ಚನ್ನಬಸವ ಶಿವಾಚಾರ್ಯರು, ಹಿರಿಯ ಸಾಹಿತಿ ಲಿಂಗನಗೌಡ ಮಾಲಿ ಪಾಟೀಲ್, ಜಿಪಂ ಮಾಜಿ ಅಧ್ಯಕ್ಷ ಸಿದ್ದನಗೌಡ ಪೊ ಪಾಟೀಲ್, ವಾಮನರಾವ್ ದೇಶಪಾಂಡೆ, ಡಾ. ಯಂಕನಗೌಡ ಪಾಟೀಲ್, ವೀರಣ್ಣ ಕಲಕೇರಿ, ಮಲ್ಲಣ್ಣ ಬಿಳೆಬಾವಿ, ಮಡಿವಾಳಪ್ಪ ಹೆಗ್ಗಣದೊಡ್ಡಿ ಸೇರಿದಂತೆ ಕೆಂಭಾವಿ ಸಾಹಿತ್ಯ ಬಳಗ ಹರ್ಷ ವ್ಯಕ್ತಪಡಿಸಿದ್ದಾರೆ.

# ವಿವೇಕಾನಂದರು ವಿಶ್ವದ ಶ್ರೇಷ್ಠ ಸಂತ, ದಾರ್ಶನಿಕ: ಶಿಕ್ಷಕ ಕಬ್ಬೂರ



ಸವದತ್ತಿ : ಸ್ವಾಮಿ ವಿವೇಕಾನಂದರು ವಿಶ್ವದ ಶ್ರೇಷ್ಠ ಸಂತರು, ದಾರ್ಶನಿಕರೂ ಆಗಿದ್ದು, ಅವರ ಸಂದೇಶಗಳು ಇಂದಿಗೂ ಪ್ರಸ್ತುತವಾಗಿದೆ, ಅವರ ಜೀವನದ ಆದರ್ಶ ಇಂದಿನ ಸಮಾಜದಲ್ಲಿ ಎಲ್ಲರಿಗೂ ಮಾದರಿಯಾಗಿದ್ದು, ಅವರ ಸಂದೇಶ ಮತ್ತು ಆದರ್ಶಗಳನ್ನು ನಾವು ಪಾಲಿಸಬೇಕು" ಎಂದು ಶಿಕ್ಷಕ ಎನ್.ಎನ್.ಕಬ್ಬೂರ ತಮ್ಮ ಅಭಿಪ್ರಾಯ ಹಂಚಿಕೊಂಡರು.

ಪಟ್ಟಣದ ಸ.ಕಿ.ಪ್ರಾ ಕನ್ನಡ ಶಾಲೆ ನಂ-6 ರಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ನಿಮಿತ್ಯ ಹಮ್ಮಿಕೊಂಡಿದ್ದ "ರಾಷ್ಟ್ರೀಯ ಯುವ ದಿನಾಚರಣೆ" ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ವಿವೇಕಾನಂದರ ಚಿಂತನಗಳನ್ನು ಇಂದು ನಾವೆಲ್ಲರು ಅಳವಡಿಸಿಕೊಳ್ಳಬೇಕಾಗಿದೆ ಎಂದರು. ವಿವೇಕಾನಂದರ ಆರಂಭಿಕ ಜೀವನ, ವಿದ್ಯಾಭ್ಯಾಸ, ರಾಮಕೃಷ್ಣ ಪರಮಹಂಸರ ಜೊತೆಗಿನ ಸಂಬಂಧ, ನರೇಂದ್ರ ವಿವೇಕಾನಂದರಾಗಿ ಬದಲಾಗಿದ್ದು, ಅಮೇರಿಕಾದ ಸರ್ವಧರ್ಮ ಸಮ್ಮೇಳನ ಹೀಗೆ ವಿವಿಧ ಮಜಲುಗಳನ್ನು ಮಕ್ಕಳಿಗೆ ತಿಳಿಸಿದರು.

ನಂತರ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಮಕ್ಕಳು ಧರಿಸಿದ ವಿವೇಕಾನಂದರ ವೇಷಭೂಷಣ ವಿಶೇಷವಾಗಿತ್ತು, ಕಾರ್ಯಕ್ರಮದಲ್ಲಿ ಶಿಕ್ಷಕಿ ಎಮ್.ಆರ್.ಪಂಡಿ ಅಂಗನವಾಡಿ ಕಾರ್ಯಕರ್ತೆಯರು, ಅಡುಗೆ ಸಿಬ್ಬಂದಿಯವರು, ಪಾಲಕ ಪೋಷಕರು ಮತ್ತು ಮಕ್ಕಳು ಇದ್ದರು.

# ಕೊಟಕ್ ಮ್ಯೂಚುವಲ್ ಫಂಡ್ ಬೆಳಗಾವಿಯಲ್ಲಿ CBSE ಸಹಭಾಗಿತ್ವದಲ್ಲಿ ಹೂಡಿಕೆದಾರರ ಶಿಕ್ಷಣ ಮತ್ತು ಜಾಗೃತಿ ಉಪಕ್ರಮ 'ಸೀಖೋ ಪೈಸೋ ಕಿ ಭಾಷಾ'

ಬೆಳಗಾವಿ: ಕೊಟಕ್ ಮ್ಯೂಚುವಲ್ ಫಂಡ್ ತನ್ನ ಹೂಡಿಕೆದಾರರ ಶಿಕ್ಷಣ ಮತ್ತು ಜಾಗೃತಿ ಉಪಕ್ರಮವಾದ 'ಸೀಖೋ ಪೈಸೋ ಕಿ ಭಾಷಾ' ಅನ್ನು ಬೆಳಗಾವಿಯಲ್ಲಿ ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಶನ್ **(CBSE)** ಸಹಭಾಗಿತ್ವದಲ್ಲಿ ನಡೆಸುತ್ತದೆ.

ಈ ಉಪಕ್ರಮವು ಆರ್ಥಿಕ ತಿಳುವಳಿಕೆಯ ಬೆಳವಣಿಗೆಯನ್ನು ಉತ್ತೇಜಿಸುವ ಶಿಕ್ಷಕರನ್ನು ಸಬಲೀಕರಣಗೊಳಿಸುವ ಉದ್ದೇಶದಿಂದ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮಗಳ ವ್ಯಾಪಕ ಸರಣಿಯನ್ನು ನಡೆಸುವ ಮೂಲಕ ಆರ್ಥಿಕ ಸಾಕ್ಷರತೆಗೆ ದಾರಿ ಮಾಡಿಕೊಡಲು ಸಿದ್ಧವಾಗಿದೆ ಮತ್ತು ಅಂತಿಮವಾಗಿ ಇದು ಸಂಭಾವ್ಯ ಪ್ರಗತಿಶೀಲ ಭವಿಷ್ಯದತ್ತ ಭಾರತದ ಪ್ರಯಾಣಕ್ಕೆ ಕೊಡುಗೆ ನೀಡುತ್ತದೆ.

ಈ ಉಪಕ್ರಮವು ಕರ್ನಾಟಕದಲ್ಲಿ 6000 ಮತ್ತು ಬೆಳಗಾವಿಯ 525 ಅಃಖಇ ಶಿಕ್ಷಕರಲ್ಲಿ ಆರ್ಥಿಕ ಸಾಕ್ಷರತೆಯ ಬಗ್ಗೆ ಶಿಕ್ಷಣ ಮತ್ತು ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಇವುಗಳಲ್ಲಿ, 50% ಮಹಿಳೆಯರು ಎಂದು ನಿರೀಕ್ಷಿಸಲಾಗಿದೆ, ಇದು ಸಮಾನ ಬೆಳವಣಿಗೆ ಮತ್ತು ಅಭಿವೃದ್ಧಿಯನ್ನು ಉತ್ತೇಜಿಸಲು ಒತ್ತಿಹೇಳುತ್ತದೆ.

ಉಪಕ್ರಮದ ಭಾಗವಾಗಿ, ಕೋಟಾಕ್ ಮ್ಯೂಚುಯಲ್ ಫಂಡ್ ಹೂಡಿಕೆ ಶಿಕ್ಷಣ ಮತ್ತು ಕಲಿಕೆಯ ಕೇಂದ್ರದಿಂದ (CIEL) 500 ಕ್ಕೂ ಹೆಚ್ಚು ಪ್ರವೀಣ ತರಬೇತುದಾರರನ್ನು ಕರೆತಂದಿದೆ, ಅವರು ಕಾರ್ಯಕ್ರಮದ ಉದ್ದಕ್ಕೂ ಗುಣಮಟ್ಟ ಮತ್ತು ಪ್ರಸ್ತುತತೆಯನ್ನು ಎತ್ತಿಹಿಡಿಯುವುದನ್ನು ಖಚಿತಪಡಿಸಿಕೊಳ್ಳುತ್ತಾರೆ.

ಶ್ರೀ ವೀರಭದ್ರೇಶ್ವರ ಇ ಎಂ ಶಾಲೆ (ಗೊಡಚಿ, ಬೆಳಗಾವಿ) ಪ್ರಾಂಶುಪಾಲ ಚಿದಾನಂದ್ ಐ ಚಿಲಾನಿ ಮಾತನಾಡಿ, "ಈ ಕಾರ್ಯಕ್ರಮದ ಭಾಗವಾಗಲು ನಾವು ಸಂತೋಷಪಡುತ್ತೇವೆ, ನಮ್ಮ ಶಿಕ್ಷಕರಿಗೆ ಹಣದ ಬಗ್ಗೆ ಕಲಿಯಲು ಸಹಾಯ ಮಾಡುತ್ತದೆ.

ಇದು ನಮ್ಮ ಶಿಕ್ಷಕರು ಸುರಕ್ಷಿತ ಭವಿಷ್ಯಕ್ಕಾಗಿ ಬುದ್ಧಿವಂತ ಆರ್ಥಿಕ ಆಯ್ಕೆಗಳನ್ನು ಮಾಡಲು ಸಹಾಯ ಮಾಡುತ್ತದೆ. ಕಾರ್ಯಕ್ರಮವು ಉತ್ತಮ ಆರ್ಥಿಕ ನಿರ್ಧಾರಗಳನ್ನು ತೆಗೆದುಕೊಳ್ಳಲು ಮತ್ತು ಆರೋಗ್ಯಕರ ಉಳಿತಾಯ ಕಾರ್ಪಸ್ ಅನ್ನು ನಿರ್ಮಿಸಲು ಅವರನ್ನು ಪ್ರೋತ್ಸಾಹಿಸುತ್ತದೆ.

# ವಿವೇಕಾನಂದರ ನುಡಿ ಯುವಶಕ್ತಿಯ ಕೀಲಿಕೈ: ಡಾ. ಸಂಜಯ ಹೊಸಮಠ

ಬೆಳಗಾವಿ: ಯುವಶಕ್ತಿಗೆ ಆತ್ಮಸ್ಥೈರ್ಯ ತುಂಬಿ, ಅವರಲ್ಲಿ ಇರುವ ಅಗಾಧವಾದ ಶಕ್ತಿಯನ್ನು ಪರಿಚಯಿಸಿ, ಅವರು ಸನ್ಮಾರ್ಗದಲ್ಲಿ ಸಾಗಿ ಅವರ ಕಾರ್ಯೋದ್ದೇಶವನ್ನು ಈಡೇರಿಸುವ ಪ್ರೇರಕ ಶಕ್ತಿ ಸ್ವಾಮಿ ವಿವೇಕಾನಂದರ ಶಕ್ತಿಯುತವಾದ ನುಡಿಗಳಲ್ಲಿವೆ ಎಂದು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಬೆಂಗಳೂರಿನ ನಿರ್ದೇಶಕರಾದ ಡಾ. ಸಂಜಯ ಹೊಸಮಠ ಅಭಿಪ್ರಾಯ ಪಟ್ಟರು.

ನಗರದ ಗುರು ವಿವೇಕಾನಂದ ವಿವಿಧ ಉದ್ದೇಶಗಳ ಸಹಕಾರ ಸಂಘದ ಕಛೇರಿಯಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲಾಯಿತು. ಮುಖ್ಯ ಅತಿಥಿಗಳಾದ ಡಾ. ಸಂಜಯ ಹೊಸಮಠ ಅವರು ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ಸ್ವಾಮಿ ವಿವೇಕಾನಂದರ ನಡೆ - ನುಡಿ ಪ್ರತಿಯೊಬ್ಬ ವ್ಯಕ್ತಿಗೂ ಮಾದರಿ. ಅವರ ವ್ಯಕ್ತಿತ್ವ ದೇಶ-ವಿದೇಶಗಳಲ್ಲಿ ಕೂಡ ಪ್ರಭಾವ ಬೀರಿದೆ. ಭಾರತ ಯುವಕರ ದೇಶ. ಅವರ





ವಿಚಾರಧಾರೆಗಳು ಯುವಕರಿಗೆ ದಾರಿದೀಪ. ಯುವಕರು ಅವರ ಚಿಂತನೆಗಳನ್ನು ಅಧ್ಯಯನ ಮಾಡುವುದರ ಮೂಲಕ ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಡಾ. ನಾರಾಯಣ ನಾಯ್ಕ ಸ್ವಾಮಿ ವಿವೇಕಾನಂದರು ಆಧ್ಯಾತ್ಮಿಕ, ಸಾಮಾಜಿಕ ಮತ್ತು ಸ್ವಾತಂತ್ರ್ಯ ಹೋರಾಟದಲ್ಲಿಯೂ ಪ್ರಭಾವ ಬೀರಿದ್ದಾರೆ. ಸ್ವಾತಂತ್ರ್ಯ ಸಂದರ್ಭದಲ್ಲಿ ತಮ್ಮ ತಪಃಪೂರ್ಣವಾದ ಶಕ್ತಿಯ ನುಡಿಗಳಿಂದ ಜಡವಾಗಿರುವ ಭಾರತವನ್ನು ಜಾಗೃತಗೊಳಿಸಿದರು. ಅವರ ಮಾತುಗಳಿಂದ ಸ್ವಾತಂತ್ರ್ಯ ಹೋರಾಟಗಾರರು ಸ್ಪೂರ್ತಿ ಪಡೆದುಕೊಂಡು ಅದೆಷ್ಟೋ ಯುವ ಪಡೆ ಬ್ರಿಟೀಷರ ವಿರುದ್ಧ ಹೋರಾಡಿ ಬಲಿದಾನ ಮಾಡಲು ಸಿದ್ಧರಾದರು. ಸ್ವಾಮಿ ವಿವೇಕಾನಂದರ ನಡೆ-ನುಡಿಗಳು ಭಾರತೀಯ ಆಧ್ಯಾತ್ಮಿಕ ರಂಗದಲ್ಲಿ ಸಂಚಲನ ಮೂಡಿಸಿ ಹೊಸ ಭಾಷ್ಯವನ್ನು ಬರೆಯಿತು. ಬದಲಾವಣೆಗೆ ದಾರಿ ಮಾಡಿ ಕೊಡುವುದರ ಜೊತೆಗೆ ಅದಕ್ಕಿರುವ ಗೋಡೆಗಳನ್ನು ಮುಕ್ತಗೊಳಿಸಿತು. ಜಾತಿ -ಮತ, ಮೇಲು-ಕೀಳು ಭಾವದಿಂದ ಹೊರಬರುವಂತೆ ಕರೆ ನೀಡಿ, ಮಾನವೀಯತೆಗೆ ಒತ್ತುಕೊಟ್ಟರು. ಅದು ಮುಂದೆ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಒಗ್ಗಟ್ಟನ್ನು ಪ್ರದರ್ಶಿಸಲು ಭೂಮಿಕೆಯಾಯಿತು ಎಂದರು.

ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ಆನಂದ ಪಿ. ರಾವ್, ನಿರ್ದೇಶಕರಾದ ಅಂಜನಕುಮಾರ ಗಂಡಗುದರಿ, ಸತಿಶ್ ಪಿ. ಮನ್ನಿಕೇರಿ, ಆನಂದ ಶೆಟ್ಟಿ, ಭಾರತಿ ಶೆಟ್ಟಿಗಾರ, ರೂಪಾ ಮಗದುಮ್, ಗಣೇಶ ಮರಕಲ, ದುರ್ಗಪ್ಪ ತಳವಾರ, ಸಂಘದ ಸಿಬ್ಬಂದಿಗಳು ಮತ್ತು ಸ್ವಾಮಿ ವಿವೇಕಾನಂದರ ಭಕ್ತವೃಂದವು ಉಪಸ್ಥಿತರಿದ್ದರು. ಸಂಘದ ಕಾರ್ಯದರ್ಶಿ ವಿಶಾಲ ಪಾಟೀಲ ಸ್ವಾಗತಿಸಿದರು, ವನಿತಾ ಮೂಲ್ಯ ನಿರೂಪಿಸಿದರು, ನಿಧಿ ಕುಂದರ ವಂದಿಸಿದರು.

# ಕಾಕತಿ ಪೊಲೀಸರ ಮೇಲೆ ಹಲ್ಲೆ ನಡೆಸಿದ ಪುಂಡರು

ಬೆಳಗಾವಿ: ಯುವಕರು ಸೇರಿಕೊಂಡು ಪೋಲಿಸರ ಕೈಯಲ್ಲಿದ್ದ ಲಾಠಿಯನ್ನು ಕಸಿದುಕೊಂಡು ಪೊಲೀಸರಿಗೆ ಹೊಡೆದಿರುವ ಘಟನೆ ಕಾಕತಿ ಗ್ರಾಮದ ಲಕ್ಷ್ಮೀ ನಗರದಲ್ಲಿ ನಡೆದಿದೆ.

ಕಾಕತಿ ಗ್ರಾಮದ ಲಕ್ಷ್ಮೀ ನಗರದಲ್ಲಿ ಮುಸ್ಲಿಂ ಸಮುದಾಯದವರೊಬ್ಬರ ಮದುವೆಯಲ್ಲಿ ಮಧ್ಯರಾತ್ರಿವರೆಗೆ ಡಾಲ್ಬಿ ಹಚ್ಚಿ ಕುಣಿಯುತ್ತಿದ್ದಾಗ ಬೇಸತ್ತ ಅಕ್ಕಪಕ್ಕದ ಮನೆಯವರು ಪೊಲೀಸರಿಗೆ ಕರೆ ಮಾಡಿದ್ದಾರೆ.

ಸ್ಥಳಕ್ಕೆ ಬಂದ ಪೊಲೀಸರು ಅನುಮತಿ ಪಡೆಯದೆ ಹಚ್ಚಿದ್ದ ಡಾಲ್ಬಿ ಬಂದ್ ಮಾಡಲು ಮುಂದಾದಾಗ ಪೊಲೀಸರ ಮೇಲೆಯೇ ಸೌಂಡ್ ಸಿಸ್ಟಮ್ ಮಾಲಿಕ ಹಾಗೂ ಯುವಕರು ಸೇರಿಕೊಂಡು ಪೋಲಿಸರ ಕೈಯಲ್ಲಿದ್ದ ಲಾಠಿಯನ್ನು ಕಸಿದುಕೊಂಡು ಪೊಲೀಸರಿಗೆ ಹೊಡೆದಿದ್ದಾರೆ.

ಕಾಕತಿ ಲಕ್ಷ್ಮೀ ನಗರದ ನಿವಾಸಿ ವಸಿಂ ಮಕಾಂದರ ಎಂಬುವರ ಮನೆಯ ಮುಂದೆ ನಡೆಯುತ್ತಿದ್ದ ಮದುವೆಯಲ್ಲಿ ಸಂತೋಷ ಭಂಡಾರಿ ಹಾಗೂ ರಾಘವೇಂದ್ರ ಶ್ರೀಶೈಲ ಲೋಗಾವಿ ಎಂಬವರು ಪೆಂಡಾಲ್ ಹಾಕಿದ್ದಾರೆ. ಪರವಾನಿಗೆ ಪಡೆಯದೆ ಸೌಂಡ್ ಸಿಸ್ಟಮ್ ಹಾಗೂ ಡಾಲ್ಬಿ ಹಚ್ಚಿದ್ದಾರೆ.

ರಾತ್ರಿ 12 ಗಂಟೆಯಾದರೂ ಬಂದ್ ಮಾಡದ ಕಾರಣ ಅಕ್ಕಪಕ್ಕದ ಮನೆಯವರು ಬೇಸತ್ತು ಪೊಲೀಸ್ ಸಹಾಯವಾಣಿ 112 ಕರೆ ಮಾಡಿದ್ದಾರೆ.

ಸ್ಥಳಕ್ಕೆ ಬಂದ ಪೊಲೀಸ್ ಹೊಯ್ಸಳ ವಾಹನ ಕಾನೂನು ಬಾಹಿರವಾಗಿ ಪರವಾನಿಗೆ ಪಡೆಯದೆ ಹಚ್ಚಿದ್ದ ಡಾಲ್ಬಿ ಬಂದ್ ಮಾಡಲು ಮುಂದಾಗಿದ್ದ ಕಾಕತಿ ಪೇದೆ ಲತೀಫ್ ಮುಶಾಪುರೆ ಮೇಲೆ ಸೌಂಡ್ ಸಿಸ್ಟಮ್ ನಡೆಸುತ್ತಿದ್ದ ಸಂತೋಷ ಹಾಗೂ ರಾಘವೇಂದ್ರ ಅವರು ಹಲ್ಲೆ ನಡೆಸಿದರು.

ಪೊಲೀಸರ ಕೈಯಲ್ಲಿದ್ದ ಲಾಠಿಯನ್ನು ಕಸಿದುಕೊಂಡು ಅವರ ಕುತ್ತಿಗೆಗೆ ಹೊಡೆದಿದ್ದಾರೆ.

ಕಾಕತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮದುವೆ ಕಾರ್ಯಕ್ರಮ ಆಯೋಜಕ ವಸಿಂ ಮಕಾಂದರ, ಡಾಲ್ಬಿ ಮಾಲಿಕ ಸಂತೋಷ ಭಂಡಾರಿ ಹಾಗೂ ಜತೆಗಿದ್ದ ರಾಘವೇಂದ್ರ ಲೋಗಾವಿ ಎಂಬವರ ಮೇಲೆ ಖಕಅ 353, 324, 332 ಹಾಗೂ ಏಕ ಚಿಭಿಣ 2021 ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯಾರ್ಥಿವೇತನ ಅರ್ಜಿ ಅವಧಿ ವಿಸ್ತರಣೆ

ಬೆಳಗಾವಿ: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2023-24 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು 10.01.2024 ಕ್ಕೆ ಅಂತಿಮ ದಿನಾಂಕವನ್ನು ನಿಗಧಿಪಡಿಸಲಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು/ವಿದ್ಯಾರ್ಥಿಗಳು/ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 15-01-2024 ರವರೆಗೆ ವಿಸ್ತರಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ https://bcwd.karnataka.gov.in, ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ 8050770005 ಇಮೇಲ್ bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ಹಾಗೂ ದೂರವಾಣಿ ಸಂಖ್ಯೆ: 080-35254757 ಗೆ ಸಂಪರ್ಕಿ ಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ರಾಮತೀರ್ಥ ನಗರದಲ್ಲಿ ವೈಭದಿಂದ ಜರುಗಿದ ಪ್ರಭು ಶ್ರೀರಾಮನ ಕಳಸ ಮೆರವಣಿಗೆ, ಮಂತ್ರಾಕ್ಷತೆ ಕಾರ್ಯ

ಬೆಳಗಾವಿ: "ಕೋಟ್ಯಾಂತರ ಭಾರತೀಯರ ಕನಸು ನನಸಾಗುವ ಕಾಲ ಸನ್ನಿಹವಾಗಿದ್ದು, ಅಯೋಧ್ಯೆಯಲ್ಲಿ ಜ.22ರಂದು ಮರ್ಯಾದಾ ಪುರುಷೋತ್ತಮ ಪ್ರಭು ಶ್ರೀರಾಮನ ಭವ್ಯ ಮಂದಿರ ಉದ್ಘಾಟನೆ ಹಾಗೂ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಅದ್ದೂರಿಯಾಗಿ ಜರುಗಲಿದೆ. ಅದಕ್ಕೂ, ಪೂರ್ವ ಪ್ರತಿ ಮನೆಗೂ ಅಯೋಧ್ಯೆಯ ಮಂತ್ರಾಕ್ಷತೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ" ಎಂದು ಸುರೇಶ ಯಾದವ ಫೌಂಡೇಶನ್ ಅಧ್ಯಕ್ಷ ಸುರೇಶ ಯಾದವ ಹೇಳಿದರು.

ಇಲ್ಲಿನ ರಾಮತೀರ್ಥ ನಗರದ ಹಲವು ಬಡಾವಣೆಗಳಲ್ಲಿ ರಾಮತೀರ್ಥ ರವಾಸಿಗಳ ಸಂಘದಿಂದ ಗುರುವಾರ ಹಮ್ಮಿಕೊಂಡಿದ್ದ ವೈಭವದ ಕಳಸ ಮೆರವಣಿಗೆ ಹಾಗೂ ಅಯೋಧ್ಯೆಯ ಮಂತ್ರಾಕ್ಷತೆ ವಿತರಣೆ ಅಭಿಯಾನದಲ್ಲಿ ಮಾತನಾಡಿದ ಅವರು, ಇಲ್ಲಿನ 12 ಮಂದಿರಗಳಿಗೆ ಸಂಚರಿಸಿ ಅಕ್ಷತೆ ತುಂಬಿದ ಕಳಸವನ್ನು ಮೆರವಣಿಗೆ ಮಾಡಲಾಗಿದೆ. ಹಾಗೂ ಶ್ರೀರಾಮನ ಭಾವಚಿತ್ರ, ಕರಪತ್ರ ಮತ್ತು ಪವಿತ್ರ ಮಂತ್ರಾಕ್ಷತೆ ನೀಡಲಾಗಿದೆ ಎಂದು ತಿಳಿಸಿದರು.



ಹಿಂದೂಗಳ ಆರಾಧ್ಯದೇವ ಪ್ರಭು ಶ್ರೀರಾಮನ ಮಂತ್ರಾಕ್ಷತೆ ದೇಶ್ಯಾದ್ಯಂತ ನಡೆಯುತ್ತಿದ್ದು, ಈಗಾಗಲೇ ಬೆಳಗಾವಿಯಲ್ಲೂ ಅಕ್ಷತೆ ತುಂಬಿದ ಕಳಸವನ್ನು ಮೆರವಣಿಗೆ, ಮಂತ್ರಾಕ್ಷತೆ ನೀಡಲಾಗಿದೆ. ಜ.22ರಂದು ಬೆಳಗಾವಿಯ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆಯಲಿದೆ. ಎಲ್ಲ ಮನೆಗಳಲ್ಲಿಯೂ ವಿಶೇಷ ಪೂಜೆ ಮತ್ತು ಸಂಜೆ ದೀಪಗಳನ್ನು ಹಚ್ಚಿ ದೀಪಾವಳಿ ಆಚರಿಸಲಾಗುವುದು. ಪ್ರತಿಯೊಬ್ಬರೂ ರಾಮನ ಆಗಮನವನ್ನು ಸಂಭ್ರಮಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಮೇಶ್ ಕಾಜಗಾರ್, ಮೌನೇಶ್ ಪತಾರ, ಮಲ್ಹರ್ ಡಿಕ್ಷಿತ್ , ಮಹದೇವ್ ತೊನ್ನೇ , ಅಪ್ಪಯಾ ಕೋಲ್ಕಾರ್, ಗುರುಪುತ್ರಪ್ಪ ತೊರಗಲ್, ಬಾಳಪ್ಪ ಹಣಜಿ, ಸಂತೋಷ್ ಮೇರಾಕಾರ , ರಾಜು ಪಾಟೀಲ್ , ರಾಜಶೇಖರ್ ಶಿಂದ್ರೆ, ಅಕ್ಷಯ್ ಅಂಬಡಗಟ್ಟಿ, ಅಭಿಷೇಕ್ ಅಗಸಗಿ , ನಿರ್ವಾಣಿ ಬೆಣ್ಣಿ , ಗೋಳಪ್ಪಾ ಹೊಲ್ಯಾಚಿ, ನಿಂಗಪ್ಪಾ ಕರೆಪಗೋಲ್, ಗುರಪ್ಪ ಬಣಗಾರ , ಶ್ರೀಶೈಲ್ ಹಿರೇಮಠ, ಬಸವರಾಜ್ ಕೊಟ್ರಶೆಟ್ಟಿ ,ಶಿವಲಿಂಗ್ ಕಡಬಡಿಗಿ, ಮಾರುತಿ ಬಾಸಕರ್, ಈರಣ್ಣಾ ಲಾಲಿ,ಈರಣ್ಣಾ ಹೊಸಮನಿ, ಅಮಿತ್ ಬಿಡೇಕರ್, ಅಮೋಲ್ ಬಿಡೇಕರ್, ಸಾಗರ್ ಕೀನೇಕರ್ ಹಾಗೂ ಇತತರು ಇದ್ದರು.

# ಹಲಗಾ ಕೇಂದ್ರ: ಬಿಸಿಯೂಟ ಸಿಬ್ಬಂದಿಗೆ ತರಬೇತಿ, ಸಮವಸ್ತ್ರ ವಿತರಣೆ

ಬೆಳಗಾವಿ: ತಾಲೂಕಿನ ಹಲಗಾ ಕೇಂದ್ರ ವ್ಯಾಪ್ತಿಯ ಸನ್ 2023-2024 ನೆಯ ಸಾಲಿನ ಪಿ ಎಮ್ ಪೋಷಣ ಯೋಜನೆಯಡಿ ಬಿಸಿಯೂಟ ತಯಾರಿಕೆಯ ಅಡುಗೆ ಸಿಬ್ಬಂದಿಗಳಿಗೆ ತರಬೇತಿ ಹಾಗೂ ಅಡುಗೆ ತಯಾರಿಸುವ ಸ್ಪರ್ಧೆಯು ದಿ 11ರಂದು ಬಸ್ತವಾಡ ಗ್ರಾಮದ ಸರಕಾರಿ ಹಿರಿಯ ಮರಾಠಿ ಪ್ರಾಥಮಿಕ ಶಾಲೆಯಲ್ಲಿ ಜರುಗಿತು.

ತಾಲೂಕು ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಸ್ ಪಿ ದಾಸಪ್ಪನವರ ರವರು ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟನೆ ಮಾಡಿ ಬಿಸಿಯೂಟದ ಸಿಬ್ಬಂದಿಗಳು ಉತ್ತಮವಾಗಿ ಕಾರ್ಯನಿರ್ವಹಣೆ ಮಾಡುವ ನಿಟ್ಟಿನಲ್ಲಿ ಸಲಹೆ ಸೂಚನೆಗಳನ್ನು ನೀಡಿ, ವಿದ್ಯಾರ್ಥಿಗಳಿಗೆ ರುಚಿ ಶುಚಿಯಾದ ಉತ್ತಮ ಗುಣಮಟ್ಟದ ಆಹಾರ ತಯಾರಿಸುವಂತೆ ಕರೆ



ನೀಡಿದರು.

ಶಾಲಾ ಎಸ್ ಡಿ ಎಮ್ ಸಿ ಅಧ್ಯಕ್ಷರಾದ ಶಿವಾಜಿ ಸುಭಾಷ ಕಾಕತಕರ ಅಧ್ಯಕ್ಷತೆ ವಹಿಸಿದ್ದರು.

ಮುಖ್ಯ ಅತಿಥಿ ಗಳಾಗಿ ಆಗಮಿಸಿದ ತಾಲೂಕಾ ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕರಾದ ಆರ್ ಸಿ ಮುದಕನಗೌಡರ ರವರುಮಾತನಾಡಿ ಬಿಸಿಯೂಟದ ಸಿಬ್ಬಂದಿಗಳು ವ್ಯವಸ್ಥಿತವಾಗಿ ಹೇಗೆ ಬಿಸಿಯೂಟ ತಯಾರಿಸಬೇಕು ಜೊತೆಗೆ ಯಾವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎಂಬ ಬಗ್ಗೆ ವಿವರವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಿ ಆರ್ ಪಿ ಎಫ್ ಎಸ್ ಮುಲ್ಲಾ ರವರು ಬಿಸಿಯೂಟ ಸಿಬ್ಬಂದಿಗಳಿಗೆ ,ಅಕ್ಷರ ದಾಸೋಹ ಕಾರ್ಯದ ಬಗ್ಗೆ ತರಬೇತಿ ನೀಡಿದರು.

ಕೇಂದ್ರವ್ಯಾಪ್ತಿಯ 41 ಬಿಸಿಯೂಟ ಸಿಬ್ಬಂದಿಗಳಿಗೆ ಸಮವಸ್ತ್ರಗಳನ್ನು ಸಿ ಆರ್ ಪಿ ಎಫ್ ಎಸ್ ಮುಲ್ಲಾ ರವರು ಕೊಡುಗೆಯಾಗಿ ಉಚಿತವಾಗಿ ನೀಡಿದರು ಅವುಗಳನ್ನು ಅತಿಥಿಗಳು ವಿತರಿಸಿದರು.

ಕಾರ್ಯಕ್ರಮದಲ್ಲಿ ಮಾಸ್ತಮರಡಿಯ ಮಾದರಿ ಶಾಲೆಯಮುಖ್ಯೋಪಾಧ್ಯಾಯರಾದ ಬಸವರಾಜ ಸುಣಗಾರ, ಬಸ್ತವಾಡ ಶಾಲೆಯ ಮುಖ್ಯೋಪಾಧ್ಯಾಯರಾದ ಐ ಜಿ ಘೋಳಪ್ಪನವರ, ಶಿಕ್ಷಣ ಸಂಯೋಜಕರಾದ ರಾಜೇಂದ್ರ ಕುಮಾರ ಚಲವಾದಿ, ಬಿ ಎಮ್ ಬಡಿಗೇರ,ಎಸ್ ಡಿ ಎಮ್ ಸಿ ಉಪಾಧ್ಯಕ್ಷರಾದ ಪೂನಂ ಚೌಗಲೆ, ರೇಣುಕಾ ಕಾಕತಕರ, ಮಾಯಾ ಚೌಗಲೆ ಸೇರಿದಂತೆ ಶಿಕ್ಷಕರು, ಬಿಸಿಯೂಟ ಕೇಂದ್ರಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು

ಅಡುಗೆ ಸ್ಪರ್ಧೆಯಲ್ಲಿ ಕೆ ಎಚ್ ಪಿ ಎಸ್ ಚಂದನಹೊಸೂರ ಪ್ರಥಮ ಸ್ಥಾನ, ಕೆ ಎಚ್ ಪಿ ಎಸ್ ಹಲಗಾ ದ್ವಿತೀಯ ಸ್ಥಾನ, ಎಮ್ ಎಚ್ ಪಿ ಎಸ್ ಬಸ್ತವಾಡ, ಕೆ ಎಚ್ ಪಿ ಎಸ್ ತಾರೀಹಾಳ ತೃತೀಯ ಸ್ಥಾನ ಗಳನ್ನು ಪಡೆದರು ಅವರಿಗೆ ಬಹುಮಾನ ವಿತರಿಸಲಾಯಿತು.

ಶಾಲಾ ಮುಖ್ಯ ಶಿಕ್ಷಕರಾದ ಎಸ್ ಜಿ ಕದಮ ಸ್ವಾಗತಿಸಿದರು, ಶಿಕ್ಷಕರಾದ ಪಿ ಎನ್ ಬೆನಕೆ ಕಾರ್ಯಕ್ರಮ ನಿರೂಪಿಸಿದರು, ಶಿಕ್ಷಕರಾದ ಎಸ್ ಟಿ ಪವಾರ ವಂದಿಸಿದರು.

# ಸರ್ಕಾರಿ ಬಸ್ ಹಾಗೂ ಬೈಕ್ ನಡುವೆ ಭೀಕರ ಅಪಘಾತ: ಇಬ್ಬರ ಸಾವು



ಕಲಬುರಗಿ: ಕಲಬುರಗಿ ಜಿಲ್ಲೆಯ ಆಳಂದ ಪಟ್ಟಣದ ಮಿನಿ ಸೌಧದ ಸಮೀಪ ಸರ್ಕಾರಿ ಬಸ್ ಹಾಗೂ ಬೈಕ್ ನಡುವೆ ಭೀಕರ ರಸ್ತೆ ಅಪಘಾತ ಸಂಭವಿಸಿ ಇಬ್ಬರು ಮೃತಪಟ್ಟ ಘಟನೆ ನಡೆದಿದೆ.

ಮೃತ ದುರ್ದೈವಿಗಳು ಸಿದ್ದಲಿಂಗಯ್ಯ ಹಿರೇಮಠ (39), ಸಂಕೇತ ಮಹಾಂತಯ್ಯಾ ಹಿರೇಮಠ್ (8) ಎಂದು ತಿಳಿದುಬಂದಿದೆ.

ಸರ್ಕಾರಿ ಬಸ್ ವೇಗವಾಗಿ ಕಲಬುರಗಿಯಿಂದ ಆಳಂದ ಕಡೆ ಹೊರಟಿದ್ದು, ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಬೈಕ್‌ನಿಂದ ಕೆಳಗೆ ಬಿದ್ದ ರಭಸಕ್ಕೆ ಸವಾರರ ತಲೆಗೆ ತೀವ್ರ ಪೆಟ್ಟಾಗಿತ್ತು.

ಗಂಭೀರ ಗಾಯಗೊಂಡಿದ್ದ ಸಂಕೇತ ಸ್ಥಳದಲ್ಲೇ ಜೀವ ಬಿಟ್ಟರೆ, ಸಿದ್ದಲಿಂಗಯ್ಯ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ.

ಬಸ್ ಚಾಲಕನ ಅಜಾಗರೂಕತೆಯಿಂದ ಈ ಅಪಘಾತ ಸಂಭವಿಸಿ ಬೈಕ್ ಸವಾರರು ಮೃತಪಟ್ಟಿದ್ದಾರೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು.

VOL. 04 | ISSUE. 291 | RNI. KARKAN/2020/79084 | REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089